# ಜ್ಞಾನೋಕ್ತಿಗಳು

## ಮುನ್ನುಡಿ

ಕನ್ನಡದಲ್ಲಿ ಗಾದೆಗಳು, ಸಂಸ್ಕೃತದಲ್ಲಿ ಸುಭಾಷಿತಗಳು ಇರುವಂತೆ ಬೈಬಲ್ಲಿನಲ್ಲೂ "ಜ್ಞಾನೋಕ್ತಿಗಳು" ಎಂಬ ಒಂದು ಪ್ರತ್ಯೇಕ ಕಾಂಡವೇ ಇದೆ. ಇದು ಧರ್ಮಪ್ರಚಾರಕ, ನೀತಿಬೋಧೆಗೆ ಸೀಮಿತವಾಗಿರದೆ ದಿನನಿತ್ಯದ ಜೀವನಕ್ಕೆ ಅನ್ವಯಿಸುವ ಮುತ್ತಿನಂತ ಮಾತುಗಳಿಂದ ಕೂಡಿದೆ. "ಸರ್ವೇಶ್ವರಲ್ಲಿ ಭಯ ಭಕ್ತಿಯೇ ಜ್ಞಾನಕ್ಕೆ ಮೂಲ" ಎಂದು ಆರಂಭದಲ್ಲೆ ಹೇಳಿದೆಯಾದರೂ ಸಾರ್ವಜನಿಕ ಮುದ್ರೆ ಬಿದ್ದಿರುವ ಕೌಟುಂಬಿಕ, ಸಾಮಾಜಿಕ, ಸಾಂಸ್ಕೃತಿಕ ಮೌಲ್ಯಗಳನ್ನು ಚುಟುಕಾದ, ಚುರುಕಾದ ನಾಣ್ನುಡಿಗಳಿಂದ ಮನಮುಟ್ಟಿಸುತ್ತದೆ. ನಿಸ್ವಾರ್ಥತೆ, ಪ್ರಾಮಾಣಿಕತೆ, ನಯವಿನಯತೆ, ತಾಳ್ಮೆ, ದೀನದಲಿತರಲ್ಲಿ ಅನುಕಂಪ ಇತ್ಯಾದಿ ಸದ್ಗುಣಗಳನ್ನು ನೆನಪಿನಲ್ಲಿಟ್ಟು ಮೆಲುಕುಹಾಕುವಂತೆ ಮಾಡುತ್ತದೆ. ಪ್ರಾಚೀನ ಇಸ್ರಯೇಲ್ ದಾರ್ಶನಿಕರ ಅನುಭವದ ಸಾರವನ್ನು ಸಂಕ್ಷಿಪ್ತವಾಗಿ ಪರಿಚಯ ಮಾಡಿಕೊಡುತ್ತದೆ. ಇದರಲ್ಲಿನ ಹಲವಾರು ವಚನಗಳು ಲೋಕೋಕ್ತಿಗಳೂ ಆಗಿಬಿಟ್ಟಿವೆ.

## ಪರಿವಿಡಿ


| | | | | |
|---|---|---|---|---|
| ಜ್ಞಾನದ ಪ್ರಶಂಸೆ | – | 1.1 | – | 9.18 |
| ಸೊಲೊಮೋನನ ಇನ್ನು ಕೆಲವು ಜ್ಞಾನೋಕ್ತಿಗಳು | – | 10.1 | – | 29.27 |
| ಆಗೂರನ ಹಿತೋಕ್ತಿಗಳು | – | 30.1 | – | 33 |
| ಇತರ ವಚನಗಳು | – | 31.1 | – | 31 |


### ಈ ವಚನಗಳ ಪ್ರಯೋಜನ

**1** ಇಸ್ರಯೇಲರಿಗೆ ಅರಸನಾಗಿದ್ದ ದಾವೀದನ ಮಗ ಸೊಲೊಮೋನನ ಜ್ಞಾನೋಕ್ತಿಗಳು: 2ಜ್ಞಾನವನ್ನೂ
ಶಿಸ್ತನ್ನೂ ಪಡೆಯುವುದಕ್ಕೆ ಒಳನೋಟದ ಮಾತುಗಳನ್ನು ಗ್ರಹಿಸುವುದಕ್ಕೆ, 3ವಿವೇಕ ಹಾಗೂ ನ್ಯಾಯ ನೀತಿಯ
ಮಾರ್ಗದಲ್ಲಿ ಶಿಕ್ಷಿತರಾಗುವುದಕ್ಕೆ ಮತ್ತು 4ಮೂಢರಿಗೆ ಬುದ್ಧಿಯನ್ನೂ ಯುವಜನರಿಗೆ ತಿಳುವಳಿಕೆಯನ್ನೂ
ಕಲಿಸುವುದಕ್ಕೆ ಒದಗುತ್ತವೆ ಈ ಜ್ಞಾನೋಕ್ತಿಗಳು. 5ಇವುಗಳನ್ನು ಕೇಳಿ ಜಾಣನು ಇನ್ನೂ ಜಾಣನಾಗುವನು,
ವಿವೇಕಿಯು ಮತ್ತಷ್ಟು ಜ್ಞಾನಸಂಪನ್ನನಾಗುವನು. 6ಗಾದೆಗಳನ್ನೂ ಗೂಢಾರ್ಥಗಳನ್ನೂ ಜ್ಞಾನಿಯ ನುಡಿ
ಹಾಗು ಒಗಟುಗಳನ್ನೂ ತಿಳಿದುಕೊಳ್ಳಲು ಸಹ ಇವು ಸಾಧನಗಳು.

### ಯುವಜನರಿಗೆ ಹಿತನುಡಿ

7ಸರ್ವೇಶ್ವರನಲ್ಲಿ ಭಯಭಕ್ತಿಯೇ ಜ್ಞಾನಕ್ಕೆ ಮೂಲ; ಮೂರ್ಖರಿಗಾದರೋ ಜ್ಞಾನ, ಶಿಸ್ತು ಎಂದರೆ
ತಾತ್ಸಾರ.

8 ಮಗನೇ, ನಿನ್ನ ತಂದೆಯ ಬೋಧೆಗೆ ಕಿವಿಗೊಡು, ನಿನ್ನ ತಾಯಿಯ ಉಪದೇಶವನ್ನು
ತೊರೆಯದಿರು. 9ಅವು ನಿನ್ನ ತಲೆಗೆ ಸುಂದರ ಕಿರೀಟ, ನಿನ್ನ ಕೊರಳಿಗೆ ಕಂಠಾಭರಣ.

10 ಮಗನೇ, ಪಾಪಿಗಳ ಪ್ರೇರಣೆಗೆ ಒಪ್ಪಿಗೆ ಕೊಡಲೇಬೇಡ 11ಅವರು ನಿನಗೆ "ನಮ್ಮೊಡನೆ ಬಾ,
ಹೊಂಚುಹಾಕಿ ಹತ್ಯೆಮಾಡೋಣ; 12ಪಾತಾಳಕ್ಕಿಳಿಯುವವರನ್ನು ನರಕ ನುಂಗುವಂತೆ ಅವರನ್ನು ಜೀವಸಹಿತ
ಪೂರ್ತಿಯಾಗಿ ಕಬಳಿಸಿಬಿಡೋಣ ಬಾ; 13ಅಮೂಲ್ಯವಾದ ಸೊತ್ತನ್ನೆಲ್ಲಾ ಕಂಡು ಹಿಡಿಯೋಣ;

ಕೊಳ್ಳೆಹೊಡೆದು ಮನೆ ತುಂಬಿಸಿಕೊಳ್ಳೋಣ, ಬಾ; 14ನಮ್ಮೊಡನೆ ಪಾಲುಗಾರನಾಗಲು ಬಾ; ನಮ್ಮೆಲ್ಲರ ನಿಧಿ ಒಂದೇ ಆಗಿರಲಿ" ಎಂದೆಲ್ಲಾ ಹೇಳುವರು.

15 ಆದರೆ ಮಗನೇ, ಅವರೊಡನೆ ಸೇರಬೇಡ; ನೀನು ಅವರ ಮಾರ್ಗದಲ್ಲಿ ಹೆಜ್ಜೆಯಿಡಬೇಡ.
16ಅವರ ಕಾಲು ಕೇಡನ್ನು ಹಿಂಬಾಲಿಸಿ ಓಡುತ್ತವೆ ರಕ್ತಪಾತಕ್ಕಾಗಿ ಅವರು ತುಡಿಯುತ್ತಿರುತ್ತಾರೆ. 17ರೆಕ್ಕೆಯುಳ್ಳ
ಹಕ್ಕಿಯ ಕಣ್ಣೆದುರಿಗೇ ಬಲೆಯನ್ನು ಹರಡುವುದು ವ್ಯರ್ಥವಲ್ಲವೆ? 18ಇಂಥವರು ಹೊಂಚುಹಾಕುವುದು
ಸ್ವಹತ್ಯಕ್ಕೇ, ಬಲೆ ಒಡ್ಡುವುದು ಸ್ವಂತ ಪ್ರಾಣನಾಶಕ್ಕೆ. 19ಸೂರೆ ಮಾಡುವವರೆಲ್ಲರ ಪಾಡು ಇದುವೆ; ಕೊಳ್ಳೆಯು,
ಕೊಳ್ಳೆಗಾರರ ಪ್ರಾಣವನ್ನೇ ಕೊಳ್ಳೆಮಾಡುತ್ತದೆ.

20 ಜ್ಞಾನವೆಂಬಾಕೆ ಹಾದಿಗಳಲ್ಲಿ ಕೂಗುತ್ತಾ ಇದ್ದಾಳೆ; ಬೀದಿಚೌಕಗಳಲ್ಲಿ ದನಿಗೈಯುತ್ತಾ ಇದ್ದಾಳೆ.
21ಪೇಟೆಯ ಜನಜಂಗುಳಿಯ ನಡುವೆ, ಪುರ ದ್ವಾರಗಳಲ್ಲೆ, ಹೀಗೆಂದು ಪ್ರಚಾರ ಮಾಡುತ್ತಿದ್ದಾಳೆ:

22 "ಮೂಢರೇ, ಎಂದಿನ ತನಕ ಮೂಢರಾಗಿರಲಾಶಿಸುವಿರಿ? ಕುಚೋದ್ಯಗಾರರೇ, ಎಷ್ಟು ಕಾಲ
ಕುಚೋದ್ಯಗಾರರಾಗಿರಲಿಚ್ಛಿಸುವಿರಿ? ಮೂರ್ಖರೇ, ಎಷ್ಟರವರೆಗೆ ತಿಳುವಳಿಕೆಯನ್ನು ಹಗೆಮಾಡುವಿರಿ? 23
ನನ್ನ ಎಚ್ಚರಿಕೆಯ ಮಾತಿನತ್ತ ಗಮನಕೊಡಿ; ನನ್ನ ಚೈತನ್ಯವನ್ನು ನಿಮ್ಮ ಮೇಲೆ ಸುರಿಸಿ, ನನ್ನ ನುಡಿಯನ್ನು
ನಿಮಗೆ ತಿಳಿಯಪಡಿಸುವೆನು. 24ನಾನು ನಿಮ್ಮನ್ನು ಕರೆದಾಗ ತಿರಸ್ಕರಿಸಿದಿರಿ. ನಾನು ನಿಮಗೆ ಕೈ ನೀಡಿದಾಗ
ಗಮನಿಸದೆ ಹೋದಿರಿ. 25 ನನ್ನ ಬುದ್ಧಿವಾದವನ್ನು ಅಲಕ್ಷ್ಯಮಾಡಿದಿರಿ, ನನ್ನ ತಿದ್ದುಪಾಟನ್ನು ತಳ್ಳಿಬಿಟ್ಟಿರಿ.
26ಆದುದರಿಂದ ಬಿರುಗಾಳಿಯಂತೆ ನಿಮಗೆ ಅಪಾಯಬಂದಾಗ, ತುಫಾನಿನಂತೆ ನಿಮಗೆ ಆಪತ್ತು
ಬಂದೊದಗಿದಾಗ 27ಕಷ್ಟ ಸಂಕಟಗಳು ನಿಮಗೆ ಸಂಭವಿಸಿದಾಗ ನಿಮ್ಮನ್ನು ಕುರಿತು ನಾನೆ ನಕ್ಕು ಪರಿಹಾಸ್ಯ
ಮಾಡುವೆನು. 28ಆಗ ನನಗೆ ಮೊರೆಯಿಟ್ಟರೂ ಉತ್ತರಿಸೆನು; ಆತುರದಿಂದ ಹುಡುಕಿದರೂ ನಾನು
ಕಾಣಸಿಗೆನು. 29ಏಕೆಂದರೆ ಸುಜ್ಞಾನವನ್ನೇ ಅವರು ದ್ವೇಷಿಸಿದರು, ಸರ್ವೇಶ್ವರನಲ್ಲಿ ಭಯಭಕ್ತಿಯಿರಿಸದೆ
ಹೋದರು. 30ನನ್ನ ಆಲೋಚನೆಯನ್ನು ಅವರು ಕೇಳಲಿಲ್ಲ, ನನ್ನ ಪ್ರತಿಯೊಂದು ಎಚ್ಚರಿಕೆಯ ಮಾತನ್ನು
ಕಿವಿಗೆ ಹಾಕಿಕೊಳ್ಳಲಿಲ್ಲ. 31ಈ ಕಾರಣ, ತಮ್ಮ ನಡತೆಗೆ ತಕ್ಕಫಲವನ್ನು ಅನುಭವಿಸುವರು, ತಮ್ಮ ಕುಯುಕ್ತಿಗಳ
ಪರಿಣಾಮದಿಂದ ಹೊಟ್ಟೆ ತುಂಬಿಸಿಕೊಳ್ಳುವರು. 32ಮೂಢರು ತಮ್ಮ ಉದಾಸೀನತೆಯಿಂದಲೆ
ಹತರಾಗುವರು, ಜ್ಞಾನಹೀನರು ತಮ್ಮ ನಿಶ್ಚಿಂತೆಯಿಂದಲೆ ನಾಶವಾಗುವರು. 33ನನ್ನ ಮಾತಿಗೆ
ಕಿವಿಗೊಡುವವರಾದರೋ ಸುರಕ್ಷಿತವಾಗಿರುವರು, ಕೇಡಿಗೆ ಭಯಪಡದೆ ನೆಮ್ಮದಿಯಾಗಿ ಬಾಳುವರು.

### ಜ್ಞಾನ ನೀಡುವ ಫಲ

**2** ಮಗನೇ, ನನ್ನ ಮಾತುಗಳನ್ನು ಅಂಗೀಕರಿಸು; ನಿಧಿಯಂತೆ ನನ್ನ ವಿಧಿಗಳನ್ನು ಕಾದಿರಿಸು. 2ಜ್ಞಾನದ
ಕಡೆಗೆ ಕಿವಿಗೊಡು, ವಿವೇಕದ ಕಡೆಗೆ ಮನತಿರುಗಿಸು. 3ಬುದ್ಧಿಗಾಗಿ ಮೊರೆಯಿಡು, ವಿವೇಕಕ್ಕಾಗಿ ಕೂಗಿಕೊಳ್ಳು,
4ಹಣದಂತೆ ಅದನ್ನು ಹುಡುಕು, ನಿಧಿಯಂತೆ ಅದನ್ನು ತಡಕು. 5ಆಗ ಅರಿತುಕೊಳ್ಳುವೆ ದೈವಭಯವನ್ನು,
ಪಡೆದುಕೊಳ್ಳುವೆ ದೈವಜ್ಞಾನವನ್ನು. 6ಜ್ಞಾನವನ್ನು ನೀಡುವಾತ ಸರ್ವೇಶ್ವರನೇ; ತಿಳುವಳಿಕೆ, ವಿವೇಕ
ಹೊರಡುವುದು ಆತನ ಬಾಯಿಂದಲೇ. 7ಜ್ಞಾನವನ್ನು ಸಜ್ಜನರಿಗೆ ಸೇರಿಸಿಡುವನಾತ. 8ನ್ಯಾಯಮಾರ್ಗವನ್ನು
ಕಾಯುವನಾತ, ಭಕ್ತರ ಹಾದಿಯನ್ನು ಭದ್ರವಾಗಿಸುವನಾತ.

9 ಆಗ ನೀತಿನ್ಯಾಯಗಳನ್ನು ನೀನರಿತುಕೊಳ್ಳುವೆ, ಸಕಲ ಸನ್ಮಾರ್ಗಸತ್ಯತೆಗಳನ್ನೂ ತಿಳಿದುಕೊಳ್ಳುವೆ.
10ಜ್ಞಾನ ಉದಯಿಸುವುದು ನಿನ್ನ ಆತ್ಮದೊಳಗೆ. 11ಬುದ್ಧಿಯು ನಿನಗೆ ಕಾವಲಾಗಿರುವುದು, ವಿವೇಕವು ನಿನ್ನನ್ನು
ಕಾಪಾಡುವುದು. 12ಹೀಗೆ ದುರ್ಮಾರ್ಗದಿಂದ ತಪ್ಪಿಸಿಕೊಳ್ಳುವೆ, ಮೂರ್ಖ ಮಾತುಗಾರನಿಂದ
ಮರೆಯಾಗುವೆ. 13ಅಂಥವರು ಹಿಡಿವುದು ಕತ್ತಲು ಹಾದಿಯನ್ನು, ತೊರೆದುಬಿಡುವರು ಸತ್ಯದ
ಮಾರ್ಗವನ್ನು. 14ಅವರು ಸಂತೋಷಿಸುವುದು ಕೇಡನ್ನು ಮಾಡುವುದರಲ್ಲಿ. ಉಲ್ಲಾಸಿಸುವುದು ಕೆಟ್ಟವರ
ದುಷ್ಟತನದಲ್ಲಿ, 15ಅವರ ಮಾರ್ಗ ಅಂಕು, ಅವರ ನಡತೆ ಡೊಂಕು.

16 ವಿವೇಕವು ನಿನ್ನನ್ನು ತಪ್ಪಿಸುವುದು ಜಾರಳಿಂದ, ಸವಿಮಾತಾಡುವ ಆ ಪರಸ್ತ್ರೀಯಳಿಂದ.
17ನಿನ್ನನ್ನು ಅದು ತಪ್ಪಿಸುವುದು ತನ್ನ ಯೌವನಕಾಲದ ಪ್ರಿಯನನ್ನು ತ್ಯಜಿಸಿದವಳಿಂದ, ತನ್ನ ದೇವರ ಮುಂದೆ

ಮಾಡಿದ ಒಪ್ಪಂದವನ್ನು ಮರೆತವಳಿಂದ. 18ಅವಳ ಮನೆ ಪಾತಾಳಕ್ಕಿಳಿಸುವ ದಾರಿ, ಅವಳ ಮಾರ್ಗ
ಪ್ರೇತಲೋಕಕ್ಕೆ ಹಾದಿ. 19ಅವಳ ಬಳಿಗೆ ಹೋಗುವವರು ಹಿಂದಿರುಗುವುದಿಲ್ಲ, ಅವರಿಗೆ ಜೀವಮಾರ್ಗ ಪುನಃ
ದೊರಕುವುದಿಲ್ಲ. 20ನೀನಾದರೊ ಸಜ್ಜನರ ಮಾರ್ಗದಲ್ಲಿ ನಡೆವೆ, ನೀತಿವಂತರ ಹಾದಿಯನ್ನು ಹಿಡಿವೆ.
21ಸತ್ಯವಂತರು ನಾಡಿನಲ್ಲಿ ಬಾಳುವರು, ನಿರ್ದೋಷಿಗಳು ಅದರಲ್ಲಿ ನೆಲೆಯಾಗಿರುವರು.
22ದುರುಳರಾದರೋ ನಾಡಿನಿಂದ ಬೇರ್ಪಡುವರು, ದ್ರೋಹಿಗಳು ಅಲ್ಲಿಂದ ಅಳಿದು ನಾಶವಾಗುವರು.

### ಜ್ಞಾನದ ಮತ್ತಿತರ ಮೌಲ್ಯಗಳು

**3** ಮಗನೇ, ನನ್ನ ಉಪದೇಶವನ್ನು ಮರೆಯಬೇಡ, ನನ್ನ ಆಜ್ಞೆಗಳನ್ನು ನಿನ್ನ ಹೃದಯದಲ್ಲಿಡು. 2ಅವು
ನಿನ್ನ ದಿನಗಳನ್ನು ಹೆಚ್ಚಿಸುತ್ತವೆ; ನಿನಗೆ ದೀರ್ಘಾಯುಸ್ಸನ್ನು ತರುತ್ತವೆ, ನಿನಗೆ ಸುಕ್ಷೇಮವನ್ನು
ಉಂಟುಮಾಡುತ್ತವೆ. 3ಪ್ರೀತಿ ಸತ್ಯತೆಗಳು ನಿನ್ನನ್ನು ಬಿಡದಿರಲಿ; ಅವು ನಿನ್ನ ಕೊರಳಿನ ಪಟ್ಟಿಯಾಗಿರಲಿ,
ಹೃದಯದ ಹಲಗೆಯಲ್ಲಿ ಲಿಖಿತವಾಗಿರಲಿ. 4ಆಗ ದೇವರಿಗೂ ಮಾನವರಿಗೂ ಪ್ರಿಯನಾಗುವೆ, ದಯೆ
ದಾಕ್ಷಿಣ್ಯವನ್ನು ಪಡೆಯುವೆ.

5 ನಿನ್ನ ಸ್ವಂತ ಬುದ್ಧಿಯನ್ನೇ ನೆಚ್ಚಿಕೊಂಡಿರದಿರು; ಪೂರ್ಣ ಮನಸ್ಸಿನಿಂದ ಸರ್ವೇಶ್ವರನಲ್ಲಿ
ನಂಬಿಕೆಯಿಡು. 6ನಿನ್ನ ನಡತೆಯಲ್ಲೆಲ್ಲಾ ನಿವೇದಿಸು ಆತನನ್ನು, ಆಗ ಸರಾಗಮಾಡುವನು ನಿನ್ನ
ಮಾರ್ಗವನ್ನು. 7ನೀನೇ ಬುದ್ಧಿವಂತನೆಂದು ಎಣಿಸದಿರು. ಸರ್ವೇಶ್ವರನಿಗೆ ಭಯಪಟ್ಟು ಕೆಟ್ಟದ್ದನ್ನು ತೊರೆದು
ಬಿಡು. 8ಆಗ ನಿನಗೆ ದೇಹಾರೋಗ್ಯ ದೊರಕುವುದು, ನಿನ್ನ ಎಲುಬುಗಳಿಗೆ ಶಕ್ತಿಸಾರತ್ವ ಸಿಗುವುದು. 9ನಿನ್ನ
ಆಸ್ತಿಯನ್ನರ್ಪಿಸಿ ಸರ್ವೇಶ್ವರನನ್ನು ಸನ್ಮಾನಿಸು, ನಿನ್ನ ಬೆಳೆಯ ಪ್ರಥಮ ಫಲವನ್ನು ಕಾಣಿಕೆಯಾಗಿಕೊಡು.
10ಆಗ ನಿನ್ನ ಕಣಜಗಳು ದವಸಧಾನ್ಯದಿಂದ ಭರ್ತಿಯಾಗುವುವು, ನಿನ್ನ ತೊಟ್ಟಿಗಳು ದ್ರಾಕ್ಷಾರಸದಿಂದ ತುಂಬಿ
ತುಳುಕುವುವು.

11 ಮಗನೇ, ಸರ್ವೇಶ್ವರನ ಶಿಕ್ಷೆಯನ್ನು ತಾತ್ಸಾರಮಾಡಬೇಡ, ಆತನು ನೀಡುವ ಎಚ್ಚರಿಕೆಗೆ
ಬೇಸರಗೊಳ್ಳಬೇಡ. 12ತನ್ನ ಮುದ್ದು ಮಗನನ್ನು ತಂದೆ ಗದರಿಸುವಂತೆ, ಸರ್ವೇಶ್ವರ ತಾನು
ಪ್ರೀತಿಸುವವರನ್ನು ಗದರಿಸುತ್ತಾನೆ. 13ಜ್ಞಾನವನ್ನು ಕಂಡು ಹಿಡಿಯುವವನು ಧನ್ಯನು, ವಿವೇಕವನ್ನು
ಗಳಿಸುವವನು ಭಾಗ್ಯವಂತನು. 14ಬೆಳ್ಳಿಗಿಂತ ಜ್ಞಾನ ಗಳಿಕೆ ಶ್ರೇಷ್ಠ, ಬಂಗಾರಕ್ಕಿಂತ ಜ್ಞಾನ ಸಂಪಾದನೆ ಉತ್ಕೃಷ್ಟ.
15ಮಾಣಿಕ್ಯಕ್ಕಿಂತ ಜ್ಞಾನದ ಬೆಲೆ ಅಮೂಲ್ಯ, ನಿನಗಿಷ್ಟವಾದುದಾವುದೂ ಅದಕ್ಕೆ ಸಾಟಿಯಲ್ಲ.
16ದೀರ್ಘಾಯುಷ್ಯ, ಜ್ಞಾನವೆಂಬ ಆಕೆಯ ಬಲಗೈಯಲ್ಲಿದೆ; ಘನತೆ, ಶ್ರೀಮಂತಿಕೆಯೂ ಆಕೆಯ
ಎಡಗೈಯಲ್ಲಿವೆ. 17ಆಕೆಯ ದಾರಿ ಸುಖಕರ, ಆಕೆಯ ಮಾರ್ಗ ಕ್ಷೇಮಕರ. 18ತನ್ನನ್ನು ಅಪ್ಪಿಕೊಂಡವರಿಗೆ
ಜ್ಞಾನವು ಜೀವವೃಕ್ಷ; ಅದನ್ನು ಅವಲಂಬಿಸುವ ಪ್ರತಿಯೊಬ್ಬನಿಗೆ ಸೌಭಾಗ್ಯ.

19 ಸರ್ವೇಶ್ವರಸ್ವಾಮಿ ಜ್ಞಾನದ ಮೂಲಕ
ಜಗವನ್ನು ಸ್ಥಾಪಿಸಿದ
ವಿವೇಕದ ಮುಖಾಂತರ ಗಗನವನ್ನು
ಸ್ಥಿರಗೊಳಿಸಿದ.
20 ಆತನ ಜ್ಞಾನದಿಂದಲೆ ಅಡಿಸಾಗರ
ಒಡೆಯುತ್ತದೆ
ಆಕಾಶಮಂಡಳ ಇಬ್ಬನಿಯನ್ನು ಸುರಿಸುತ್ತದೆ.

21 ಮಗನೇ, ಸುಜ್ಞಾನ, ಸದ್ಬುದ್ಧಿಗಳು ನಿನ್ನಲ್ಲಿ ಸ್ಥಿರವಾಗಿರಲಿ; ನಿನ್ನ ಕಣ್ಣುಗಳಿಂದ ಅವು
ಮರೆಯಾಗದಿರಲಿ. 22ಅವು ನಿನ್ನಾತ್ಮಕ್ಕೆ ಜೀವಪ್ರದಾನವಾಗಿವೆ, ನಿನ್ನ ಕೊರಳಿಗೆ ಭೂಷಣವಾಗಿವೆ. 23ಹೀಗೆ
ನೀನು ಎಡವದೆ ನಡೆಯುವೆ, ನಿನ್ನ ಮಾರ್ಗದೊಳು ಭಯವಿಲ್ಲದೆ ಸಾಗುವೆ. 24ಮಲಗುವಾಗ ನಿನಗೆ
ಹೆದರಿಕೆಯಿರದು, ಮಲಗಿದ ಮೇಲೆ ಸುಖನಿದ್ರೆ ಬರುವುದು. 25ಆಕಸ್ಮಿಕ ಅಪಾಯಕ್ಕೆ ನೀನು ಅಂಜಲಾರೆ,

ದುರುಳರಿಗೆ ಬಂದೊದಗುವ ನಾಶಕ್ಕೆ ಹೆದರಲಾರೆ. 26ಸರ್ವೇಶ್ವರನೇ ನಿನಗೆ ಆಧಾರವಾಗಿರುವನು, ನಿನ್ನ ಕಾಲು ಉರುಲಿಗೆ ಸಿಕ್ಕದಂತೆ ಕಾಪಾಡುವನು.

27 ನಿನ್ನ ಕೈಲಾದಾಗ ಉಪಕಾರಮಾಡು, ಕೇಳುವವರಿಗೆ ಅದನ್ನು ನಿರಾಕರಿಸಬೇಡ. 28ನೆರೆಯವನಿಗೆ ನೀಡಲು ಇದೀಗಲೇ ನಿನ್ನಲ್ಲಿರುವಾಗ, "ಹೋಗಿ ಬಾ, ನಾಳೆ ಕೊಡುತ್ತೇನೆ" ಎನ್ನಬೇಡ. 29ಕೇಡನ್ನು ಬಗೆಯಬೇಡ ನೆರೆಯವನಿಗೆ, ಪಕ್ಕದಲ್ಲೆ ನಂಬಿಕೆಯಿಂದ ವಾಸಿಸುವವನಿಗೆ. 30ನಿನಗೆ ಕೇಡು ಮಾಡದವನ ಸಂಗಡ, ಕಾರಣವಿಲ್ಲದೆ ಜಗಳವಾಡಬೇಡ. 31ಹಿಂಸಾತ್ಮಕನನ್ನು ನೋಡಿ ಹೊಟ್ಟೆಕಿಚ್ಚು ಪಡಬೇಡ, ಅವನ ನಡತೆಯನ್ನು ಎಷ್ಟು ಮಾತ್ರಕ್ಕೂ ಅನುಸರಿಸಬೇಡ. 32ವಕ್ರಬುದ್ಧಿಯವನು ಸರ್ವೇಶ್ವರನಿಗೆ ಅಸಹ್ಯನು, ಸತ್ಯಸಂಧರು ಆತನಿಗೆ ಪ್ರೀತಿಪಾತ್ರರು. 33ದುರುಳರ ಮನೆಯನ್ನು ಸರ್ವೇಶ್ವರ ಶಪಿಸುವನು; ನೀತಿವಂತರ ನಿವಾಸವನ್ನು ಆತ ಆಶೀರ್ವದಿಸುವನು. 34ಅಪಹಾಸ್ಯ ಮಾಡುವವರನ್ನು ಆತ ಅಪಹಾಸ್ಯ ಮಾಡುವನು; ನಮ್ರರಿಗಾದರೋ ಕೃಪಾಶೀರ್ವಾದವನ್ನು ಅನುಗ್ರಹಿಸುವನು. 35ಜ್ಞಾನಿಗಳಿಗೆ ಲಭಿಸುವುದು ಸನ್ಮಾನ; ಜ್ಞಾನಹೀನರಿಗೆ ಸಿಗುವ ಸಂಭಾವನೆ ಅವಮಾನ.

### ಜ್ಞಾನವನ್ನು ಕಳದುಕೊಳ್ಳಬೇಡ

**4** ಮಕ್ಕಳೇ, ತಂದೆಯ ಉಪದೇಶವನ್ನು ಕೇಳಿರಿ; ವಿವೇಕ ಸಂಪಾದನೆಯತ್ತ ಗಮನ ಕೊಡಿರಿ. 2ನಾನು ನಿಮಗೆ ನೀಡುವುದು ಸದುಪದೇಶ; ನೀವು ಅದನ್ನು ಕೈ ಬಿಡಬೇಡಿ. 3ನಾನೂ ಕೂಡ ತಂದೆಗೆ ಒಬ್ಬ ಚಿಕ್ಕ ಮಗುವಾಗಿದ್ದೆ, ತಾಯಿಗೆ ಏಕೈಕ ಕುಮಾರನೂ ಕೋಮಲನೂ ಆಗಿದ್ದೆ. 4ತಂದೆ ನನಗೆ ಹೀಗೆಂದು ಬೋಧನೆ ಮಾಡಿದ: "ನನ್ನ ಮಾತುಗಳು ಭದ್ರವಾಗಿರಲಿ ನಿನ್ನ ಮನದಲ್ಲಿ; ನನ್ನ ಆಜ್ಞೆಗಳನ್ನು ಕೈಗೊಂಡು ಬಾಳು ಸುಖದಲ್ಲಿ. 5ಮರೆಯಬೇಡ, ನನ್ನ ಮಾತಿಗೆ ಓರೆಯಾಗಬೇಡ, ಜ್ಞಾನವನ್ನು ಪಡೆ, ವಿವೇಕವನ್ನು ಗಳಿಸಿಕೊ. 6ಜ್ಞಾನವನ್ನು ಕೈಬಿಡದಿದ್ದರೆ, ಅದು ನಿನ್ನನ್ನು ಕಾಪಾಡುವುದು; ನೀನದನ್ನು ಪ್ರೀತಿಸಿದೆಯಾದರೆ, ಅದು ನಿನ್ನನ್ನು ಕಾಯುವುದು. 7ಜ್ಞಾನ ಪಡೆಯಬೇಕೆಂಬುದೇ ಜ್ಞಾನಬೋಧೆಯ ಮೂಲಾಂಶ; ನಿನ್ನ ಸರ್ವಸಂಪತ್ತಿನಿಂದ ವಿವೇಕವನ್ನು ಗಳಿಸಿಕೊ. 8ಜ್ಞಾನವೆಂಬಾಕೆಯನ್ನು ಶ್ರೇಷ್ಠಳೆಂದು ಭಾವಿಸಿದೆಯಾದರೆ, ಆಕೆ ನಿನ್ನನ್ನು ಸನ್ಮಾನಿಸುವಳು. ನೀನು ಅವಳನ್ನು ಅಪ್ಪಿಕೊಂಡೆಯಾದರೆ, ಆಕೆ ನಿನ್ನನ್ನು ಘನಪಡಿಸುವಳು. 9ಅಂದದ ಪುಷ್ಪಮಾಲೆಯನ್ನು ಹಾಕುವಳು ನಿನ್ನ ಕೊರಳಿಗೆ, ಸುಂದರ ಕಿರೀಟವನ್ನು ಮುಡಿಸುವಳು ನಿನ್ನ ತಲೆಗೆ."

10 ಮಗನೇ, ನನ್ನ ಮಾತುಗಳನ್ನು ಆಲಿಸಿ ಕೇಳು; ಕೇಳಿದೆಯಾದರೆ ಹೆಚ್ಚುವುವು ನಿನ್ನ ಜೀವನದ ವರ್ಷಗಳು. 11ಜ್ಞಾನಮಾರ್ಗವನ್ನು ನಿನಗೆ ಉಪದೇಶಿಸುವೆನು, ಸತ್ಯಮಾರ್ಗದಲ್ಲಿ ನಿನ್ನನ್ನು ನಡೆಸುವೆನು. 12ನಡೆಯುವಾಗ ನಿನ್ನ ಹೆಜ್ಜೆಗೆ ತಡೆಯಾಗದು, ನೀ ಓಡುವಾಗ ಮುಗ್ಗರಿಸಿ ಬೀಳಲಾಗದು. 13ಸದುಪದೇಶವನ್ನು ಬಿಗಿ ಹಿಡಿದುಕೊ; ಅದೇ ನಿನ್ನ ಜೀವ, ಅದನ್ನು ಕಾಪಾಡಿಕೊ; ಅದೇ ನಿನ್ನ ಜೀವ, ಅದನ್ನು ಕಾಪಾಡಿಕೊ. 14ದುಷ್ಟರ ಸಂಘದಲ್ಲಿ ಸೇರಬೇಡ, ಕೆಟ್ಟವರ ಹಾದಿಯಲ್ಲಿ ಕಾಲಿಡಬೇಡ. 15ಆ ದುಮಾರ್ಗದಿಂದ ಓರೆಯಾಗು, ದೂರವಾಗು; ಅದರಲ್ಲಿ ನಡೆಯದೆ ಮುಂದಕ್ಕೆ ಸಾಗು. 16ಕೇಡು ಮಾಡದಿದ್ದರೆ ಆ ದುರುಳರಿಗೆ ನಿದ್ರೆಬಾರದು, ವಂಚಿಸಿ ಬೀಳಿಸದಿದ್ದರೆ ಅವರಿಗೆ ನಿದ್ರೆ ಹತ್ತದು. 17ದುಷ್ಟತನವೇ ಅವರಿಗೆ ಅನ್ನ ಆಹಾರ; ಹಿಂಸಾಚಾರವೇ ಅವರಿಗೆ ಮದುಪಾನ.

18 ಸಜ್ಜನರ ಮಾರ್ಗ ಪ್ರಾತಃಕಾಲದ ಬೆಳಕಿನಂತೆ; ಅದರ ಬೆಳಕು ಹೆಚ್ಚುತ್ತಿರುತ್ತದೆ ಬಟ್ಟ ಹಗಲವರೆಗೆ. 19ದುರ್ಜನರ ಮಾರ್ಗ ಕಗ್ಗತ್ತಲಿನ ಹಾಗೆ, ಎಡವಿಬಿದ್ದ ಸ್ಥಳವೇ ತಿಳಿಯದು ಅವರಿಗೆ.

20 ಮಗನೇ, ನನ್ನ ಮಾತನ್ನು ಆಲಿಸು, ನನ್ನ ನುಡಿಗಳಿಗೆ ಕಿವಿಗೊಡು. 21ಅವು ನಿನ್ನ ಕಣ್ಣಿಗೆ ಮರೆಯಾಗದಿರಲಿ, ನಿನ್ನ ಹೃದಯದೊಳಗೆ ಭದ್ರವಾಗಿರಲಿ. 22ಕಂಡುಹಿಡಿಯಬಲ್ಲವನಿಗೆ ಅವು ಜೀವದಾಯಕ; ಇಡೀ ದೇಹಕ್ಕೆ ಅವು ಆರೋಗ್ಯಕರ. 23ನಿನ್ನ ಹೃದಯವನ್ನು ಕಾಪಾಡು ಜಾಗರೂಕತೆಯಿಂದ; ಏಕೆಂದರೆ ಜೀವಧಾರೆ ಹೊರಡುವುದು ಅದರಿಂದ. 24ಸೊಟ್ಟಮಾತುಗಳನ್ನು ನಿನ್ನಿಂದ ತೊಲಗಿಸು, ಕೆಟ್ಟನುಡಿಗಳನ್ನು ಬಾಯಿಂದ ದೂರಮಾಡು. 25ನಿನ್ನ ಕಣ್ಣುಗಳು ನೇರವಾಗಿ ನಾಟಿರಲಿ, ಕಣ್ಣು ರೆಪ್ಪೆಗಳು

ಮುಂದಾಗಿ ತೆರೆದಿರಲಿ. 26ನೀ ನಡೆವ ದಾರಿ ಸಮನಾಗಿರಲಿ, ನೀ ಕೈಗೊಳ್ಳುವ ಹಾದಿ ದೃಢವಾಗಿರಲಿ.
27ತಿರುಗಬೇಡ ಎಡಕ್ಕಾಗಲಿ, ಬಲಕ್ಕಾಗಲಿ; ಕೇಡಿನಿಂದ ನಿನ್ನ ಕಾಲು ದೂರವಿರಲಿ.

### ವ್ಯಭಿಚಾರದಿಂದ ದೂರವಿರು

**5** ಮಗನೇ, ನನ್ನ ಜ್ಞಾನೋಪದೇಶವನ್ನು ಆಲಿಸು; ವಿವೇಕದಿಂದ ಕೂಡಿ ನನ್ನ ಬೋಧೆಗೆ ಕಿವಿಗೊಡು.
2ಆಗ ನೀನು ವಿವೇಕಶೀಲನಾಗುವೆ; ನಿನ್ನ ತುಟಿಗಳು ತಿಳುವಳಿಕೆಯನ್ನು ಕಾಯ್ದುಕೊಳ್ಳುವುವು.
3ವ್ಯಭಿಚಾರಿಣಿಯ ತುಟಿಗಳು ಜೇನುಗರೆಯುತ್ತವೆ; ಎಣ್ಣೆಗಿಂತ ಮೃದು ಅವಳ ವಾಣಿ. 4ಕಡೆಗೆ ಅವಳು ಕಹಿ
ಮಾಚಿಪತ್ರೆಯಂತೆ, ಹರಿತವಾದ ಇಬ್ಬಾಯಿ ಕತ್ತಿಯಂತೆ. 5ಅವಳ ಕಾಲುಗಳು ಮರಣದತ್ತ ಇಳಿಯುತ್ತವೆ,
ಹೆಜ್ಜೆಗಳು ಪಾತಾಳದತ್ತ ಕೊಂಡೊಯ್ಯುತ್ತವೆ. 6ಜೀವಮಾರ್ಗದ ವಿವೇಚನೆ ಅವಳಿಗಿಲ್ಲ. ಅದರ ಅರಿವೂ
ಅವಳಿಗಿರುವುದಿಲ್ಲ. ಅವಳ ನಡತೆಯು ಅಷ್ಟು ಚಂಚಲ.

7 ಇಂತಿರಲು ಮಗನೇ, ನನಗೆ ಕಿವಿಗೊಡು, ನನ್ನ ಮಾತುಗಳನ್ನು ಬಿಟ್ಟು ಅಗಲದಿರು. 8ಅವಳಿಂದ
ದೂರವಿರಲಿ ನಿನ್ನ ಮಾರ್ಗ, ಸುಳಿಯದಿರು ಅವಳ ಮನೆಬಾಗಿಲ ಹತ್ತಿರ. 9ನಿನ್ನ ಪುರುಷತ್ವ
ಪರಾಧೀನವಾದೀತು, ಎಚ್ಚರಿಕೆ! ನಿನ್ನ ಆಯುಷ್ಯ ಕ್ರೂರಿಗಳವಶವಾದೀತು, ಜೋಕೆ! 10ನಿನ್ನ ಸಿರಿಸಂಪತ್ತು
ಪರರ ಮನೆ ತುಂಬೀತು, ನಿನ್ನ ದುಡಿಮೆಯ ಫಲ ಅನ್ಯನ ಮನೆಸೇರೀತು! 11ಕಟ್ಟ ಕಡೆಗೆ ನಿನ್ನ ದೇಹವೆಲ್ಲ
ಕರಗಿಹೋದೀತು; ಅಂಗಲಾಚಿ ನೀ ಕೊರಗಬೇಕಾದೀತು ಇಂತೆಂದು: 12“ಅಕಟಕಟಾ ಶಿಸ್ತನ್ನೇ ನಾನು
ದ್ವೇಷಿಸಿದೆನಲ್ಲಾ! ನನಗೆ ಕೊಡಲಾದ ತಿದ್ದುಪಾಟನ್ನು ತಾತ್ಸಾರಮಾಡಿದೆನಲ್ಲಾ! 13ಗುರುಗಳ ಮಾತನ್ನು
ಗಮನಿಸದೆ ಹೋದೆನಲ್ಲಾ! 14ದೇವಜನರ ಸಭೆಕೂಟಗಳಲ್ಲಿ ಎಲ್ಲಾ ತರದ ನಿಂದೆ ಆಪಾದನೆಗಳಿಗೆ
ಗುರಿಯಾದೆನಲ್ಲಾ!”

15 ನಿನ್ನ ಸ್ವಂತ ಕೊಳದ ನೀರನ್ನೇ ಸೇವಿಸು, ನಿನ್ನ ಬಾವಿಯಿಂದ ಉಕ್ಕಿಬರುವ ಜಲವನ್ನೇ ಕುಡಿ.
16ನಿನ್ನ ಬುಗ್ಗೆ ಹೊರಗೆ ಹೋಗುವುದು ಸರಿಯೇ? ನಿನ್ನ ಕಾಲುವೆ ಬೀದಿಚೌಕಗಳಲ್ಲಿ ಹರಡಿಕೊಳ್ಳುವುದು
ಹಿತವೇ? 17ಅವು ನಿನಗೊಬ್ಬನಿಗೇ ಮೀಸಲಾಗಿರಲಿ; ನಿನ್ನೊಡನೆ ಬೇರೊಬ್ಬನ ಪಾಲಾಗದಿರಲಿ; 18ನಿನ್ನ ಬುಗ್ಗೆ
ದೇವರಿಂದ ಆಶೀರ್ವಾದ ಹೊಂದಲಿ, ನಿನ್ನ ಆನಂದ ನಿನ್ನ ಯೌವ್ವನ ಕಾಲದ ಹೆಂಡತಿಯಲ್ಲಿರಲಿ. 19ಆಕೆ
ಮನೋಹರವಾದ ಹರಿಣಿ, ಸುಂದರವಾದ ಜಿಂಕೆಮರಿ, ಆಕೆಯ ಸ್ತನಗಳು ನಿನ್ನನ್ನು ಸರ್ವದಾ ತೃಪ್ತಿಪಡಿಸಲಿ,
ಆಕೆಯ ಒಲವಿನಲ್ಲೇ ಸದಾ ತಲ್ಲೀನನಾಗಿರು. 20ಮಗನೇ, ಪರಸ್ತ್ರೀಯಲ್ಲಿ ಭ್ರಮೆ ಏಕೆ? ಅನ್ಯಳ ಎದೆ
ತಬ್ಬಿಕೊಳ್ಳುವುದೇಕೆ? 21ನರನ ಮಾರ್ಗ ಸರ್ವೇಶ್ವರನ ಕಣ್ಣಿಗೆ ಮರೆಯಲ್ಲ; ಆತ ವೀಕ್ಷಿಸುತ್ತಾನೆ ಮನುಷ್ಯನ
ನಡತೆಯನ್ನೆಲ್ಲಾ. 22ದುರುಳನನ್ನು ಅವನ ದ್ರೋಹಗಳೆ ಆಕ್ರಮಿಸುತ್ತವೆ; ಅವನ ಪಾಪಪಾಶಗಳೇ ಅವನನ್ನು
ಬಂಧಿಸುತ್ತವೆ. 23ಅವನು ಶಿಸ್ತುಪಾಲನೆಯಿಲ್ಲದೆ ನಾಶವಾಗುತ್ತಾನೆ; ಅತಿ ಮೂರ್ಖತನದಿಂದಲೇ
ಮೋಸಹೋಗುತ್ತಾನೆ.

### ಮತ್ತೆ ಕೆಲವು ಎಚ್ಚರಿಕೆಗಳು

**6** ಮಗನೇ, ನೀನು ನೆರೆಯವನ ಸಾಲಕ್ಕೆ ಹೊಣೆಯಾಗಿದ್ದರೆ, ಪರನಿಗಾಗಿ ಕೈಮೇಲೆ ಕೈಯಿಟ್ಟು
ಪ್ರಮಾಣಮಾಡಿದ್ದರೆ, ನಿನ್ನ ಮಾತಿನ ಬಲೆಗೆ ಸಿಕ್ಕಿಹಾಕಿಕೊಂಡಿರುವೆ; ನಿನ್ನ ವಾಗ್ದಾನವು ನಿನ್ನನ್ನು ಸೆರೆಹಿಡಿದಿದೆ.
3ಮಗನೇ, ನೀನು ನೆರೆಯವನ ಕೈವಶವಾಗಿರುವೆ; ಈ ಪರಿಮಾಡು ತಪ್ಪಿಸಿಕೊಳ್ಳಬೇಕಾದರೆ: 4ನಿನ್ನ ಕಣ್ಣುಗಳಿಗೆ
ನಿದ್ರೆ ಕೊಡಬೇಡ, ನಿನ್ನಾಕಣ್ಣಿನ ರೆಪ್ಪೆಗಳನ್ನು ಮುಚ್ಚಬೇಡ. 5ಬೇಡನಿಂದ ಓಡುವ ಜಿಂಕೆಯಂತೆ, ಬೇಟೆಗಾರನ
ಕೈಯಿಂದ ಹಾರಿಹೋಗುವ ಹಕ್ಕಿಯಂತೆ, ಆ ಬಲೆಯಿಂದ ತಪ್ಪಿಸಿಕೊ.

### ಸೋಮಾರಿಯಾಗಿರಬೇಡ

6 ಎಲೈ ಸೋಮಾರಿಯೇ, ಇರುವೆಯ ಬಳಿಗೆ ಹೋಗು; ಅದರ ನಡವಳಿಕೆಯನ್ನು ನೋಡಿ
ಜ್ಞಾನಿಯಾಗು. 7ಅದಕ್ಕಿಲ್ಲ ನೋಡು ನಾಯಕ, ಅರಸ, ಅಧಿಪತಿ. 8ಆದರೂ ಕೂಡಿಸುತ್ತದೆ ತಿಂಡಿ

ಬೇಸಿಗೆಯಲ್ಲಿ, ಸಂಗ್ರಹಿಸುತ್ತದೆ ಧಾನ್ಯ ಸುಗ್ಗಿಯಲ್ಲಿ. 9ಸೋಮಾರಿಯೇ, ಎಷ್ಟು ಹೊತ್ತು ನಿದ್ರಿಸುವೆ?
ನಿದ್ರೆಯಿಂದ ಯಾವಾಗ ಎಚ್ಚರಗೊಳ್ಳುವೆ? 10"ಇನ್ನೂ ಸ್ವಲ್ಪ ನಿದ್ರೆ, ತುಸು ತೂಕಡಿಕೆ" ಎನ್ನುವೆಯಾ?
"ಕೊಂಚವೇ ನಿದ್ರೆಗಾಗಿ ಕೈ ಮಡಿಚಿಕೊಳ್ಳುವೆ" ಎನ್ನುವೆಯಾ? 11ಬಡತನ ನಿನ್ನ ಮೇಲೆರಗುವುದು
ದಾರಿಗಳ್ಳನಂತೆ; ಅಭಾವ ನಿನ್ನ ಮೇಲೆ ಬೀಳುವುದು ಪಂಜುಗಳ್ಳನಂತೆ.

12 ದುರುಳನೂ ನೀಚನೂ ಆದವನ ನಡತೆಯನ್ನು ನೋಡು: ಅವನ ಬಾಯಿಂದ ಹೊರಡುವುದು
ಕುಟಿಲ ಮಾತು. 13ಅವನು ಕಣ್ಣು ಮಿಟುಕಿಸುತ್ತಾನೆ, ಕಾಲು ಕೆರೆಯುತ್ತಾನೆ, ಬೆರಳ ಸನ್ನೆಯಿಂದಲೆ
ಮಾತಾಡುತ್ತಾನೆ. 14ಅವನ ಮನದಲ್ಲಿರುವುದು ಮೂರ್ಖತನ; ಅವನು ಸತತ ಕಲ್ಪಿಸುವುದು ಕೆಡುಕುತನ.
ಅವನು ಬಿತ್ತನೆ ಮಾಡುವುದು ಕಾಳಗ, ಕದನ. 15ಆದ್ದರಿಂದ ತಟ್ಟನೆ ಒದಗುವುದು ವಿಪತ್ತು ಮತ್ತೆ
ಏಳಲಾಗದಂತಹ ಕಠಿಣ ಆಪತ್ತು.

16–19 ಸರ್ವೇಶ್ವರ ಹಗೆಮಾಡುವಂಥಹವು ಆರು:
ಆತ ಖಂಡನೆ ಮಾಡುವಂಥಹವು ಏಳು:
ಅಹಂಕಾರ ದೃಷ್ಟಿ,
ಕಪಟವಾಡುವ ನಾಲಿಗೆ,
ನಿರಪರಾಧಿಯನ್ನು ಕೊಲೆಮಾಡುವ ಕೈ,
ದುರಾಲೋಚನೆಯನ್ನು ಕಲ್ಪಿಸುವ
ಹೃದಯ,
ಕೇಡುಮಾಡಲು ತವಕಪಡುವ ಕಾಲು,
ಅಸತ್ಯವನ್ನು ಉಸುರುವ ಸುಳ್ಳುಸಾಕ್ಷಿ.
ಸೋದರರಲ್ಲಿ ಜಗಳ ಹುಟ್ಟಿಸುವ ವ್ಯಕ್ತಿ.

### ಪರಸ್ತ್ರೀಯರ ಸಹವಾಸ ಸಲ್ಲ

20 ಮಗನೇ, ನಿನ್ನ ತಂದೆಯ ಆಜ್ಞೆಗೆ ಕಿವಿಗೊಡು, ನಿನ್ನ ತಾಯಿಯ ಉಪದೇಶವನ್ನು ತೊರೆಯದೆ
ಮಾಡು. 21ಅವನ್ನು ನಿರಂತರವಾಗಿ ಹೃದಯಕ್ಕೆ ಬಂಧಿಸಿಕೊ; ಕಂಠಾಭರಣವಾಗಿ ಕೊರಳಿಗೆ ಧರಿಸಿಕೊ.
22ನಡೆಯುವಾಗ ಅವು ನಿನಗೆ ಮುಂದಾಳಾಗಿರುವುವು. ಮಲಗುವಾಗ ಅವು ನಿನ್ನನ್ನು ಕಾಯುವುವು.
ಎಚ್ಚರಗೊಂಡಾಗ ಅವು ನಿನ್ನೊಡನೆ ಸಂವಾದಿಸುವುವು. 23ಏಕೆಂದರೆ ಆಜ್ಞೆಯೇ ಜ್ಯೋತಿ, ಬೋಧನೆಯೇ
ಬೆಳಕು, ಶಿಸ್ತಿನಿಂದ ಕೂಡಿದ ಶಿಕ್ಷಣವೇ ಜೀವನಕ್ಕೆ ಮಾರ್ಗ. 24ಕೆಟ್ಟ ಹೆಂಗಸರ ಸಹವಾಸದಿಂದ, ಪರಸ್ತ್ರೀಯರ
ಮಾತಿನ ಮೋಡಿಯಿಂದ, ಅವು ಕಾಪಾಡಬಲ್ಲವು ನಿನ್ನನ್ನು. 25ನಿನ್ನ ಹೃದಯ ಅವಳ ಬೆಡಗನ್ನು
ಮೋಹಿಸದಿರಲಿ; ಕಣ್ಣು ಮಿಟುಕಿಸಿ ಅವಳು ನಿನ್ನನ್ನು ವಶಮಾಡಿಕೊಳ್ಳದಿರಲಿ. 26ವೇಶ್ಯೆಯನ್ನು
ಕೊಂಡುಕೊಳ್ಳಬಹುದು ತುಂಡುರೊಟ್ಟಿಗೆ; ವ್ಯಭಿಚಾರಿಣಿಯೇ ಬೇಟೆಮಾಡುವಳು ನಿನ್ನ ಸಿರಿಪ್ರಾಣಕ್ಕೆ !

27 ಮಡಿಲಲ್ಲಿ ಬೆಂಕಿಯನ್ನು ಇಟ್ಟುಕೊಂಡರೆ ಬಟ್ಟೆಯನ್ನು ಸುಡದೆ ಸುಮ್ಮನಿರುವುದೆ? 28ಧಗ
ಧಗಿಸುವ ಕೆಂಡದ ಮೇಲೆ ನಡೆದರೆ ಅಂಗಾಲು ಸುಟ್ಟುಹೋಗದೆ ಇರುವುದೆ? 29ಅಂತೆಯೆ ನೆರೆಯವನ
ಸತಿಯನ್ನು ಕೂಡುವವನ ಗತಿಯು; ಆಕೆಯನ್ನು ಮುಟ್ಟುವವನು ತಪ್ಪಿಸಿಕೊಳ್ಳನು ದಂಡನೆಯನ್ನು.
30ಹಸಿವನ್ನು ನೀಗಿಸಿಕೊಳ್ಳಲು ಕಳವು ಮಾಡಿದರೆ, ಅಷ್ಟು ಹೀಯಾಳಿಸರು ಜನರು ಅಂಥ ಬಡವನನ್ನು.
31ಆದರೂ ಕಳವು ಬಯಲಾದರೆ ತೆರಬೇಕಾಗುವುದು ಏಳರಷ್ಟು; ತೆತ್ತೇ ತೀರಿಸಬೇಕಾಗುವುದು ಮನೆಯ
ಆಸ್ತಿಪಾಸ್ತಿಯಷ್ಟು. 32ವ್ಯಭಿಚಾರಿಯು ಕೇವಲ ಬುದ್ಧಿಶೂನ್ಯನು; ತನ್ನೀ ಕೃತ್ಯದಿಂದ ಸ್ವನಾಶಮಾಡಿಕೊಳ್ಳುವನು.
33ಪೆಟ್ಟಿಗೂ ಅಪಕೀರ್ತಿಗೂ ಅವನು ಪಾತ್ರನು; ಅವನಿಗಾಗುವ ಅವಮಾನ ತೊಲಗದು ಎಂದಿಗು.
34ಏಕೆಂದರೆ, ಅವಳ ಪತಿಗಾಗುವ ಮತ್ಸರ ಉದ್ರೇಕಗೊಳ್ಳುವುದು; ಕನಿಕರ ತೋರನು, ಮುಯ್ಯಿ ತೀರಿಸುವ
ದಿನದಂದು. 35ಯಾವ ಪ್ರಾಯಶ್ಚಿತ್ತಕ್ಕೂ ಅವನು ಒಪ್ಪನು; ಎಷ್ಟು ಲಂಚಕೊಟ್ಟರೂ ಒಲಿಯನು, ಮಣಿಯನು.

## ವ್ಯಭಿಚಾರಿಣಿಗೆ ಬಲಿಯಾಗದಿರು

**7** ಮಗನೇ, ನನ್ನ ಮಾತುಗಳನ್ನು ಅನುಸರಿಸು, ನನ್ನ ಆಜ್ಞೆಗಳನ್ನು ಮನಸ್ಸಿನಲ್ಲಿ ಇಡು. 2ಕನೀನಿಕೆಯಂತೆ
ನನ್ನ ಕಟ್ಟಳೆಯನ್ನು ಪಾಲಿಸು, ನನ್ನ ಆಜ್ಞೆಗಳನ್ನು ಕೈಗೊಂಡು ಬಾಳು. 3ಅವು ನಿನ್ನ ಬೆರಳಿಗೆ
ಉಂಗುರವಾಗಿರಲಿ, ನಿನ್ನ ಹೃದಯದ ಹಲಗೆಯಲ್ಲಿ ಬರೆದಿರಲಿ. 4ಜ್ಞಾನವನ್ನು 'ಅಕ್ಕಾ' ಎಂದು ಕರೆ;
ವಿವೇಕವನ್ನು ಆಪ್ತಳೆಂದು ಬಗೆ. 5ಅವು ನಿನ್ನನ್ನು ಕಾಪಾಡುವುವು ವ್ಯಭಿಚಾರಿಣಿಯಿಂದ, ಸವಿಮಾತಾಡುವ
ಆ ಪರಸ್ತ್ರೀಯಿಂದ.

6 ಒಮ್ಮೆ ಮನೆಯ ಕಿಟಕಿಯಿಂದ ಇಣಕಿ ನೋಡುವಾಗ, 7ಜನ ಸಾಮಾನ್ಯರ ನಡುವೆ, ಯೌವನಸ್ಥರ
ಮಧ್ಯೆ ಮತಿಗೆಟ್ಟ ಯುವಕನೊಬ್ಬ ನಡೆವುದನ್ನು ನಾನು ಕಂಡೆ. 8ಹೊತ್ತು ಮೀರಿ, ಸಂಜೆಯಾಗಿ, ಕತ್ತಲು
ಕವಿದಿದ್ದಾ ರಾತ್ರಿಯಲ್ಲಿ, ಅವನು ಹಾದು ಹೋಗುತ್ತಿದ್ದ ಬೀದಿಯ ಮೂಲೆ ಮನೆಯ ಬಳಿ. 9ಒಬ್ಬಾಕೆಯ
ಮನೆಯ ಕಡೆಗೆ ಆತ ತಿರುಗುವುದನ್ನು ನಾ ಕಂಡೆ; 10ಇಗೋ, ಅವನನ್ನು ಎದುರುಗೊಳ್ಳುತ್ತಾಳೆ
ವೇಷಧಾರಿಯಾದ ಕಪಟ ಸ್ತ್ರೀಯೊಬ್ಬಳು. 11ಹಟಮಾರಿ, ಕೂಗಾಟದವಳು, ಮನೆಯಲ್ಲಿ ನಿಲ್ಲಲಾರದವಳು.
12ಹೊಂಚು ಹಾಕುತ್ತಾಳೆ ಅವಳು ಮೂಲೆ ಮೂಲೆಗಳಲ್ಲಿ; ಒಮ್ಮೆ ಬೀದಿಯಲ್ಲಿ ಮತ್ತೊಮ್ಮೆ ಚೌಕಗಳಲ್ಲಿ.
13ಅವನನ್ನು ಬಿಗಿಹಿಡಿದು ಮುದ್ದಾಡುತ್ತಾಳೆ. ಲಜ್ಜೆಗೆಟ್ಟ ಮೋರೆಯುಳ್ಳ ಅವಳು ಹೀಗೆನ್ನುತ್ತಾಳೆ: 14"ನನ್ನ
ಬಯಕೆ ಈಡೇರಲೆಂದು ಬಲಿಯರ್ಪಿಸಿದ್ದೇನೆ; ಇಂದೇ ನನ್ನ ಹರಕೆಯನ್ನು ತೀರಿಸಿದ್ದೇನೆ. 15ಎಂತಲೇ
ನಿನ್ನನ್ನು ಎದುರುಗೊಳ್ಳಲು ಬಂದೆ ಆಕಾಂಕ್ಷೆಯಿಂದ ಹುಡುಕಿ; ಇಗೋ ನಿನ್ನನ್ನು ಕಂಡು ಕೊಂಡೆ. 16ಮೆತ್ತೆ
ಸುಪ್ಪತ್ತಿಗೆಯಿಂದ, ಚಿತ್ರವಿಚಿತ್ರ ವಸ್ತುಗಳಿಂದ, ಈಜಿಪ್ಟಿನ ನಾರುಮಡಿಯಿಂದ ಸಿದ್ಧ ಮಾಡಿರುವೆ ಹಾಸಿಗೆಯನ್ನು.
17ರಸಗಂಧ, ಅಗರು, ಲವಂಗ ಚಕ್ಕೆಗಳಿಂದ ಅದನ್ನು ಘಮ ಘಮಗೊಳಿಸಿರುವೆ. 18ಬೆಳಗಿನ ತನಕ
ಬೇಕಾದಷ್ಟು ರಮಿಸೋಣ ಬಾ, ಕಾಮ ವಿಲಾಸಗಳಿಂದ ಸಂತೃಪ್ತಿ ಪಡೆಯೋಣ ಬಾ. 19ಯಜಮಾನ
ಮನೆಯಲ್ಲಿ ಇಲ್ಲ; ಕೈಗೊಂಡು ಇದ್ದಾನೆ ದೂರ ಪ್ರಯಾಣ. 20ಹಣದ ಗಂಟನ್ನು ತೆಗೆದುಕೊಂಡು
ಹೋಗಿದ್ದಾನೆ; ಮನೆಗೆ ಬರುವಂತಿಲ್ಲ ಹುಣ್ಣಿಮೆಯ ತನಕ." 21ಹೀಗೆ ಮೋಹಕ ಮಾತುಗಳಿಂದ
ಒತ್ತಾಯಪಡಿಸುತ್ತಾಳೆ, ಅತಿಯಾದ ಒಲುಮೆಯಿಂದ ಪುಸಲಾಯಿಸುತ್ತಾಳೆ. 22ಮಧ್ಯಸ್ಥಾನಕ್ಕೆ ಹೋಗುವ
ಹೋರಿಯಂತೆ, ಬಲೆಗೆ ಸಿಕ್ಕಿ ಬೀಳುವ ಜಿಂಕೆಯಂತೆ, 23ಉರುಳಿನತ್ತ ಹಾರುವ ಹಕ್ಕಿಯಂತೆ, ಕರುಳನ್ನು
ತಿವಿಯುವ ಬಾಣದಂತೆ, ತನ್ನ ಪ್ರಾಣಕ್ಕಿರುವ ಅಪಾಯವನ್ನು ತಿಳಿಯದೆ, ಅವಳನ್ನು ತಡಮಾಡದೆ
ಹಿಂಬಾಲಿಸುತ್ತಾನೆ ಆತ.

24 ಆದ್ದರಿಂದ ಮಕ್ಕಳೇ, ನನಗೆ ಕಿವಿಗೊಡಿರಿ; ನನ್ನ ಮಾತುಗಳನ್ನು ಆಲಿಸಿರಿ. 25ನಿಮ್ಮ ಹೃದಯ
ಅವಳ ದಾರಿಯತ್ತ ತಿರುಗದಿರಲಿ; ಅಪ್ಪಿ ತಪ್ಪಿ ನಿಮ್ಮ ಕಾಲು ಅವಳ ಹಾದಿಯನ್ನು ತುಳಿಯದಿರಲಿ. 26ಅವಳಿಗೆ
ಬಲಿಯಾಗಿ ಬಿದ್ದವರು ಬಹುಮಂದಿ; ಹತರಾದವರೋ ಲೆಕ್ಕವಿಲ್ಲದಷ್ಟು ಮಂದಿ. 27ಅವಳ ಮನೆ ಪಾತಾಳಕ್ಕೆ
ಹಾದಿ; ಮರಣದ ಗುಡಾರಗಳಿಗೆ ಇಳಿದಾರಿ.

## ಜ್ಞಾನದ ಕರೆ

**8** ಕೇಳಿ, ಜ್ಞಾನವೆಂಬಾಕೆ ಕರೆಯುತ್ತಿದ್ದಾಳೆ
ವಿವೇಕವೆಂಬಾಕೆ ಕೂಗಿ ಕರೆಯುತ್ತಿದ್ದಾಳೆ !
2 ಹೆದ್ದಾರಿಯ ಅಕ್ಕಪಕ್ಕದ ದಿಣ್ಣೆಗಳಲ್ಲಿ
ಹಾದಿಬೀದಿಗಳ ನಡುವಿನಲ್ಲಿ ನಿಂತಿದ್ದಾಳೆ,
ನೋಡಿ.
3 ನಗರದ ಹೆಬ್ಬಾಗಿಲುಗಳಲ್ಲೂ
ಜನಸೇರುವ ಪ್ರವೇಶದ್ವಾರಗಳಲ್ಲೂ
ಘೋಷಿಸುತ್ತಿದ್ದಾಳೆ ಹೀಗೆಂದು:
4 ಮನುಜರೇ, ನಾನು ಕರೆಯುತ್ತಿರುವುದು

ನಿಮ್ಮನ್ನೆ
ನಾನು ಕೂಗಿ ಕರೆಯುತ್ತಿರುವುದು ಮಾನವ
ಕುಲಪುತ್ರರನ್ನೆ.
5 ಮೂಢರೇ, ಕಲಿತುಕೊಳ್ಳಿ ಜಾಣತನವನ್ನು
ಬುದ್ಧಿಹೀನರೇ, ಗ್ರಹಿಸಿರಿ ಸನ್ಮತಿಯನ್ನು.
6 ಕೇಳಿ, ನಾನು ಹೇಳುವ ಮಹತ್ವಪೂರ್ಣವಾದ
ವಿಷಯವನ್ನು
ನನ್ನ ನಾಲಿಗೆ ನುಡಿಯುವ ಯಥಾರ್ಥವಾದ
ಸಂಗತಿಯನ್ನು
7 ನನ್ನ ಬಾಯಿಂದ ಬರುತ್ತಿರುವುದು ಸತ್ಯ
ನನ್ನ ತುಟಿಗೆ ದುಷ್ಟತನ ಅಸಹ್ಯ.
8 ನನ್ನ ಮಾತುಗಳೆಲ್ಲ ನೀತಿಭರಿತ
ಅವುಗಳಲ್ಲಿ ಇಲ್ಲ ಕುಟಿಲ, ಕುತಂತ್ರ.
9 ತಿಳುವಳಿಕೆ ಉಳ್ಳವನಿಗೆ ಅವೆಲ್ಲ ಸರಳ
ಗ್ರಹಿಕೆ ಉಳ್ಳವನಿಗೆ ಅವು ಯಥಾರ್ಥ.
10 ಅಂಗೀಕರಿಸಿರಿ ಬೆಳ್ಳಿಗಿಂತ ಶ್ರೇಷ್ಠವಾದ
ಬೋಧನೆಯನ್ನು
ಅಪರಂಜಿಗಿಂತ ಅಪೂರ್ವವಾದ
ಉಪದೇಶವನ್ನು.
11 ಜ್ಞಾನವೆಂಬುದು ಹವಳಕ್ಕಿಂತ ಶ್ರೇಷ್ಠ.
ಇಷ್ಟವಸ್ತುಗಳಾವುವು ಅದಕ್ಕೆ ಸಾಟಿಯಿಲ್ಲ.
12 ಜ್ಞಾನವೆಂಬ ನನಗೆ ಜಾಣ್ಮೆಯೆ ಸಹವಾಸಿ
ಯುಕ್ತ ತಿಳುವಳಿಕೆ ನನಗೆ ಸಂಗಾತಿ.
13 ದೈವಭಯದಿಂದ ಹುಟ್ಟುತ್ತದೆ ಪಾಪದ್ವೇಷ;
ಗರ್ವ, ಅಹಂಕಾರ, ದುರಾಚಾರ,
ಕಪಟ ಭಾಷಣ ನನಗೆ ಅಸಹ್ಯ.
14 ಸದಾಲೋಚನೆ, ಸುಜ್ಞಾನ, ವಿವೇಕ ನನ್ನಲ್ಲಿವೆ;
ಎಂತಲೇ ಶಕ್ತಿಸಾಮರ್ಥ್ಯ ಹೊಂದಿರುವೆ.
15 ರಾಜರು ಆಳುವುದು ನನ್ನ ಸಹಾಯದಿಂದ
ಅಧಿಪತಿಗಳು ನ್ಯಾಯತೀರ್ಪು ಮಾಡುವುದು
ನನ್ನಿಂದ.
16 ನನ್ನ ಮೂಲಕ ಭೂಪತಿಗಳು ರಾಜ್ಯ
ಆಳುವರು
ನಾಯಕರು ಭೂಮಿಯ ಮೇಲೆ
ದೊರೆತನ ಮಾಡುವರು.
17 ನನ್ನನ್ನು ಪ್ರೀತಿಸುವವರನ್ನು ನಾನು
ಪ್ರೀತಿಸುತ್ತೇನೆ
ಹಂಬಲಿಸಿ ಹುಡುಕುವವರು ನನ್ನನ್ನು
ಕಂಡುಕೊಳ್ಳುತ್ತಾರೆ.
18 ನನ್ನಲ್ಲಿವೆ ಶ್ರೀಮಂತಿಕೆ ಮತ್ತು ಘನತೆ

ಶಾಶ್ವತ ಸಂಪತ್ತು ಹಾಗೂ ಸಮೃದ್ಧಿ.
19 ನಾನು ನೀಡುವ ಫಲ ಬಂಗಾರಕ್ಕಿಂತ ಶ್ರೇಷ್ಠ
ನನ್ನಿಂದ ದೊರಕುವ ಆದಾಯ
ಅಪ್ಪಟ ಬೆಳ್ಳಿಗಿಂತ ಅಮೂಲ್ಯ.
20 ನಾನು ಹಿಡಿದಿರುವ ಹಾದಿ ನೀತಿಯುತ
ನಾನು ನಡೆಯುವುದು ನ್ಯಾಯಪಥ.
21 ನನ್ನನ್ನು ಪ್ರೀತಿಸುವವರಿಗೆ ದೊರಕಿಸುವೆ
ಸಿರಿಸಂಪತ್ತನ್ನು ಬಾಧ್ಯವಾಗಿ
ನಾನವರ ಬೊಕ್ಕಸಗಳನ್ನು ತುಂಬಿಸುವೆ
ಭರ್ತಿಯಾಗಿ.
22 ತನ್ನ ಸೃಷ್ಟಿಕ್ರಮದಲ್ಲಿ ಸರ್ವೇಶ್ವರ ನಿರ್ಮಿಸಿದ
ನನ್ನನ್ನು ಮೊತ್ತಮೊದಲು
ಆತನ ಪುರಾತನ ಕಾರ್ಯಕ್ರಮಗಳಲ್ಲಿ ನಾನೇ
ಪ್ರಥಮಳು.
23 ನಾನು ಸ್ಥಾಪಿಸಲ್ಪಟ್ಟೆ ಪ್ರಾರಂಭದಲ್ಲೆ
ಜಗದುತ್ಪತ್ತಿಗೆ ಮುಂಚೆಯೇ
ಅನಾದಿಕಾಲದಲ್ಲೆ.
24 ಜಲನಿಧಿಗಳಾಗಲಿ, ನೀರಿನ ಬುಗ್ಗೆಗಳಾಗಲಿ
ಇಲ್ಲದಿರುವಾಗಲೆ ನಾ ಬಂದೆ ಜನ್ಮತಾಳಿ.
25 ನಾನು ಹುಟ್ಟಿದೆ ಬೆಟ್ಟಗುಡ್ಡಗಳು
ಬೇರೂರಿ ನಿಲ್ಲುವುದಕ್ಕೆ ಮೊದಲೆ.
26 ನಾನು ಜನಿಸಿದೆ
ಭೂಮಿಯನ್ನಾಗಲಿ, ಬೈಲನ್ನಾಗಲಿ
ನೆಲದ ಅಣುರೇಣನ್ನಾಗಲಿ
ಆತ ನಿರ್ಮಿಸದೆ ಇರುವಾಗಲೆ.
27 ನಾನು ಅಲ್ಲಿದ್ದೆ ಆತ ಆಕಾಶಮಂಡಲವನ್ನು
ಸ್ಥಾಪಿಸುವಾಗ
ಸಾಗರದ ಮೇಲೆ ಚಕ್ರಾಕಾರದ ಗೆರೆಯನ್ನು
ಎಳೆವಾಗ,
28 ಗಗನವನ್ನು ಮೇಲೆ ಸ್ಥಿರಪಡಿಸುವಾಗ
ಸಾಗರದ ಸೆಲೆಗಳನ್ನು ನೆಲೆಗೊಳಿಸಿದಾಗ,
29 ಜಲಪ್ರವಾಹಗಳು ತನ್ನ ಅಪ್ಪಣೆಯನ್ನು
ಮೀರದ ಹಾಗೆ
ಸಮುದ್ರಕ್ಕೆ ಎಲ್ಲೆಕಟ್ಟನ್ನು ನೇಮಿಸುವಾಗ
ಭೂಮಿಯ ಅಸ್ತಿಭಾರವನ್ನು
ಗೊತ್ತುಮಾಡುವಾಗ.
30 ನಾನು ಆತನ ಬಳಿ ಕುಶಲ ಶಿಲ್ಪಿಯಂತಿದ್ದೆ
ಅನುದಿನವೂ ಆತನಿಗೆ ಆನಂದವನ್ನೀಯುತ್ತಿದ್ದೆ
ಸದಾ ಆತನ ಮುಂದೆ ಸಂತೋಷಪಡುತ್ತಿದ್ದೆ.
31 ಉಲ್ಲಾಸಿಸುತ್ತಿದ್ದೆ ಆತನ ಭುಲೋಕದಲ್ಲಿ

ಹರ್ಷಿಸುತ್ತಾ ಇದ್ದೆ ಮಾನವ ಸಂತಾನದಲ್ಲಿ.
32 ಆದ್ದರಿಂದ ಮಕ್ಕಳೇ, ಕಿವಿಗೊಡಿ ನನಗೀಗ
ನನ್ನ ಮಾರ್ಗಗಳನ್ನು ಅನುಸರಿಸುವವರು
ಧನ್ಯರೆಂಬುದು ನಿಜ.
33 ಉಪದೇಶವನ್ನು ಕೇಳಿ ಬುದ್ಧಿವಂತರಾಗಿರಿ
ಅದನ್ನು ನೀವು ನಿರಾಕರಿಸಬೇಡಿ.
34 ನನ್ನ ಬಾಗಿಲಬಳಿ ಪ್ರತಿದಿನ ಕಾಯುತ್ತಾ
ನನ್ನ ಹೊಸಲಿನತ್ತ ನಿರೀಕ್ಷಿಸಿ ನೋಡುತ್ತಾ
ನನ್ನ ಮಾತನ್ನು ಆಲಿಸುವವನು ಭಾಗ್ಯವಂತ.
35 ನನ್ನನ್ನು ಕಂಡುಕೊಳ್ಳುವವನು ಜೀವವನ್ನು
ಕಂಡುಕೊಳ್ಳುವನು
ಸರ್ವೇಶ್ವರನ ಕೃಪಾಕಟಾಕ್ಷಕ್ಕೆ
ಪಾತ್ರನಾಗುವನು.
36 ನನಗೆ ತಪ್ಪು ಮಾಡುವವನು ತನ್ನಾತ್ಮಕ್ಕೆ ಕೇಡು
ಮಾಡುತ್ತಾನೆ
ನನ್ನನ್ನು ಹಗೆ ಮಾಡುವವರೆಲ್ಲರು ಮೃತ್ಯುವನ್ನು
ಪ್ರೀತಿಸುತ್ತಾರೆ.

## ಜ್ಞಾನ ಅಜ್ಞಾನಗಳ ತಾರತಮ್ಯ

**9** ಜ್ಞಾನವೆಂಬಾಕೆ ಮನೆಯನ್ನು ಕಟ್ಟಿಕೊಂಡಿದ್ದಾಳೆ; ಅದಕ್ಕೆ ಏಳು ಸ್ತಂಭಗಳನ್ನು ಕೆತ್ತಿಸಿದ್ದಾಳೆ. 2ಪಶುಗಳನ್ನು
ಕೊಯ್ಯಿಸಿ ದ್ರಾಕ್ಷಾರಸವನ್ನು ಬೆರೆಸಿ ಔತಣವನ್ನು ಆಕೆ ಸಿದ್ಧಪಡಿಸುತ್ತಿದ್ದಾಳೆ. 3ನಗರದ ರಾಜಬೀದಿಗಳಿಗೆ ತನ್ನ
ದಾಸಿಯರನ್ನು ಕಳುಹಿಸುತ್ತಾಳೆ. 4"ಮುಗ್ಧ ಮನಸ್ಕರು ಯಾರಾದರೂ ಇದ್ದರೆ ಇತ್ತ ಬರಲಿ" ಎಂದು
ಪ್ರಕಟಿಸುತ್ತಾಳೆ. 5"ಬನ್ನಿ, ನಾ ಬಡಿಸುವ ಆಹಾರವನ್ನು ಉಣಬನ್ನಿ; ನಾ ಬೆರೆಸಿದ ದ್ರಾಕ್ಷಾರಸವನ್ನು
ಕುಡಿಯಬನ್ನಿ. 6ಮೂಢರೇ, ನಿಮ್ಮ ಮೂಢತ್ವವನ್ನು ಬಿಟ್ಟು ಬಾಳಿರಿ, ವಿವೇಕ ಮಾರ್ಗದಲ್ಲಿ ನೆಟ್ಟಗೆ ನಡೆಯಿರಿ,"
ಎಂದು ಪ್ರಬೋಧಿಸುತ್ತಾಳೆ. 7ಕುಚೋದ್ಯಗಾರರನ್ನು ಶಿಕ್ಷಿಸುವವನು ತನ್ನೆ ಅಪಮಾನಕ್ಕೆ
ಗುರಿಮಾಡಿಕೊಳ್ಳುತ್ತಾನೆ. ದುಷ್ಟನನ್ನು ಗದರಿಸುವವನು ತನಗೇ ಕಳಂಕ ತಂದುಕೊಳ್ಳುತ್ತಾನೆ.
8ಕುಚೋದ್ಯಗಾರನನ್ನು ಗದರಿಸಬೇಡ, ಅವನು ನಿನ್ನನ್ನು ದ್ವೇಷಿಸುವನು. ಜ್ಞಾನವಂತನನ್ನು ಗದರಿಸು, ಅವನು
ನಿನ್ನನ್ನು ಪ್ರೀತಿಸುವನು. 9ಜ್ಞಾನಿಗೆ ಉಪದೇಶಿಸಿದರೆ ಅವನು ಹೆಚ್ಚು ಜ್ಞಾನಿಯಾಗುತ್ತಾನೆ; ಸತ್ಪುರುಷನಿಗೆ
ಬೋಧಿಸಿದರೆ ಅವನು ಹೆಚ್ಚು ತಿಳುವಳಿಕೆ ಪಡೆಯುತ್ತಾನೆ.

10 ಸರ್ವೇಶ್ವರನಲ್ಲಿನ ಭಯಭಕ್ತಿ ಜ್ಞಾನಕ್ಕೆ ಮೂಲ; ಪರಮಪಾವನನನ್ನು ಅರಿಯುವುದು ವಿವೇಕ.
11ನನ್ನಿಂದ ನಿನಗೆ ಸಿಗುವುದು ದೀರ್ಘಾಯಸ್ಸು; ವೃದ್ಧಿಯಾಗುವುದು ನಿನ್ನ ಜೀವದ ಅವಧಿ. 12ನೀನು
ಜ್ಞಾನವಂತನಾದರೆ ನಿನ್ನ ಜ್ಞಾನ ನಿನಗೇ ಲಾಭಕರ; ಕುಚೋದ್ಯಗಾರನು ಆದರೆ ಸವಿಯುವೆ ಅದರ ಪ್ರತೀಕಾರ.

13 ಅಜ್ಞಾನವೆಂಬುವಳಾದರೊ ಕೂಗಾಟಗಾರ್ತಿ, ಏನೂ ತಿಳಿಯದ ಮೂಢ ಸ್ತ್ರೀ. 14ಅವಳು ತನ್ನ
ಮನೆಯ ಬಾಗಿಲಲ್ಲಿ ಕುಳಿತು, ನಗರದ ಹೆದ್ದಾರಿಯ ದಿಣ್ಣೆಯ ಮೇಲೆ ನಿಂತು, 15ತಮ್ಮ ತಮ್ಮ ಹಾದಿಹಿಡಿದು
ಹೋಗಿ ಬರುವವರನ್ನು ಕಂಡು, 16"ಮುಗ್ಧ ಜೀವಿಗಳು ಯಾರಾದರೂ ಇದ್ದರೆ ಬರಲಿ ಇತ್ತ" ಎಂದು
ಕರೆವಳು. 17"ಕದ್ದ ನೀರು ಸಿಹಿ, ಗುಟ್ಟಾಗಿ ತಿನ್ನುವ ರೊಟ್ಟಿ ರುಚಿ" ಎಂದು ಬುದ್ಧಿಹೀನನಿಗೆ ಹೇಳುವಳು.
18ಅವನಿಗೆ ತಿಳಿಯದು ಅವಳ ಮನೆ ಪ್ರೇತನಿವಾಸವೆಂದು, ಅವಳ ಅತಿಥಿಗಳು ಬಿದ್ದಿರುವುದು ಅಗಾಧ
ಪಾತಾಳದಲ್ಲೆಂದು.

**10** ಮಗನು ಜ್ಞಾನಿಯಾದರೆ ತಂದೆಗೆ ಸುಖ;
ಅಜ್ಞಾನಿಯಾದರೆ ತಾಯಿಗೆ ದುಃಖ.
2 ಅನ್ಯಾಯದ ಸಂಪತ್ತು ನಿಷ್ಪ್ರಯೋಜಕ; ಧರ್ಮವು ಮೃತ್ಯುವಿನಿಂದ ರಕ್ಷಕ.
3 ಸತ್ಪುರುಷನನ್ನು ಸರ್ವೇಶ್ವರ ಹಸಿವೆಗೊಳಿಸನು; ದುಷ್ಟನ ಆಶೆಯನ್ನಾತ ಭಂಗಪಡಿಸುವನು.
4 ಜೋಲುಗೈ ತರುತ್ತದೆ ದಾರಿದ್ರ್ಯ; ಚುರುಕು ಕೈ ತರುತ್ತದೆ ಐಶ್ವರ್ಯ.
5 ಸುಗ್ಗಿಯಲ್ಲಿ ಕೂಡಿಸುವವನು ಬುದ್ಧಿವಂತ; ಕೊಯ್ಲಿನಲ್ಲಿ ತೂಕಡಿಸುವವನು ಲಜ್ಜೆಗೆಡುಕ.
6 ಸಜ್ಜನರ ತಲೆಯ ಮೇಲೆ ಆಶೀರ್ವಾದ; ದುರ್ಜನರ ಬಾಯಿ ಹಿಂಸಾಚಾರದ ಮುಚ್ಚಳ.
7 ಸಜ್ಜನರ ಸ್ಮರಣೆ ಮಂಗಳಕರ; ದುರ್ಜನರ ಹೆಸರು ಅಸಹ್ಯಕರ.
8 ಬುದ್ಧಿಜೀವಿಗಳು ಆಜ್ಞೆಗಳನ್ನು ಅಂಗೀಕರಿಸುವರು; ಹರಟೆಕೋರ ಹುಚ್ಚರು ನೆಲ ಕಚ್ಚುವರು.
9 ನಿರ್ದೋಷಿ ನಡೆಯುವನು ನಿರ್ಭಯನಾಗಿ; ವಕ್ರಮಾರ್ಗಿ ಸಿಕ್ಕಿಬಿಡುವನು ಬಟ್ಟ ಬಯಲಾಗಿ.
10 ಕಣ್ಣು ಮಿಟುಕಿಸುವವನು ತೊಂದರೆಗೆ ಕಾರಣನು; ನೇರವಾಗಿ ಗದರಿಸುವವನು ಸಮಾಧಾನಕರನು.
11 ಸಜ್ಜನನ ಬಾಯಿ ಜೀವನ ಬುಗ್ಗೆ; ದುರ್ಜನನ ಬಾಯಿತುಂಬ ಚಿತ್ರಹಿಂಸೆ.
12 ಜಗಳವೆಬ್ಬಿಸುತ್ತದೆ ದ್ವೇಷ; ಪಾಪಗಳ ಮರೆಸುತ್ತದೆ ಪ್ರೇಮ.
13 ಬುದ್ಧಿವಂತನ ಬಾಯಿಂದ ಜ್ಞಾನ; ಬುದ್ಧಿಹೀನನ ಬೆನ್ನಿಗೆ ಬೆತ್ತ.
14 ಬುದ್ಧಿವಂತರು ಜ್ಞಾನದ ಭಂಡಾರಿಗಳು; ಮೂರ್ಖನ ಮಾತುಗಳು ವಿನಾಶದ ಸೋಪಾನಗಳು.
15 ಐಶ್ವರ್ಯವಂತನಿಗೆ ಐಶ್ವರ್ಯವೇ ಬಲವಾದ ಡೆಂಕಣ; ಬಡವನ ಅಳಿವಿಗೆ ಬಡತನವೇ ಕಾರಣ.
16 ಸಜ್ಜನರ ದುಡಿತ ಜೀವಾಸ್ಪದ; ದುರ್ಜನರ ಆದಾಯ ಪಾಪಾಸ್ಪದ.
17 ಶಿಸ್ತನ್ನು ಕೈಗೊಳ್ಳುವವನು ಜೀವಮಾರ್ಗದಲ್ಲಿರುವವನು; ತಿದ್ದುಪಾಟನ್ನು ತಿರಸ್ಕರಿಸುವವನು ದಾರಿ ತಪ್ಪುವನು.
18 ಹೊಟ್ಟೆಯಲ್ಲಿ ಹಗೆ ಇಟ್ಟುಕೊಳ್ಳುವವನು ಸಟೆಗಾರ; ಚಾಡಿಹೇಳಿ ಕೇಡುಮಾಡುವುದು ಮೂರ್ಖತನ.
19 ವಾಚಾಳಿಗೆ ಪಾಪ ತಪ್ಪದು; ಮೌನಿಗೆ ಜ್ಞಾನ ಕೆಡದು.
20 ಸಜ್ಜನರ ನಾಲಿಗೆ ಚಕ್ಕಬೆಳ್ಳಿ; ದುರ್ಜನರ ಹೃದಯ ಹುಲ್ಲುಕಡ್ಡಿ.
21 ಸಜ್ಜನರ ಭಾಷಣದಿಂದ ಬಹು ಜನರಿಗೆ ಪೋಷಣ; ಬುದ್ಧಿಹೀನತೆಯಿಂದ ಮೂರ್ಖರಿಗೆ ನಾಶನ.
22 ಸರ್ವೇಶ್ವರನ ಆಶೀರ್ವಾದ ಭಾಗ್ಯದಾಯಕ; ಅದಕ್ಕೆ ಬಾಹಿರವಾದುದು ಕಷ್ಟ ದುಃಖ.
23 ಮೂರ್ಖನಿಗೆ ಕೆಡುಕುಮಾಡುವ ಚಟ; ಬುದ್ಧಿವಂತನಿಗೆ ಜ್ಞಾನಗಳಿಸುವ ಹಟ.
24 ದುರ್ಜನರು ಭಯಪಡುವುದೇ ಸಂಭವಿಸುವುದು; ಸಜ್ಜನರು ಇಷ್ಟಪಡುವುದೇ ಲಭಿಸುವುದು.
25 ಬಿರುಗಾಳಿ ಬೀಸಿದರೆ ದುರ್ಜನರು ಇಲ್ಲವಾಗುವರು; ಸಜ್ಜನರಾದರೋ ಸದಾಕಾಲ ಸ್ಥಿರವಾಗಿ ನಿಲ್ಲುವರು.
26 ಹಲ್ಲಿಗೆ ಹುಳಿ ಹೇಗೋ, ಕಣ್ಣಿಗೆ ಹೊಗೆ ಹೇಗೋ; ಯಜಮಾನನಿಗೆ ಮೈಗಳ್ಳನು ಹಾಗೆ.
27 ಸರ್ವೇಶ್ವರನಲ್ಲಿ ಭಯಭಕ್ತಿಯುಳ್ಳವರು ಬಾಳುವರು ದೀರ್ಘಕಾಲ; ದುರುಳ ಜನರ ಜೀವಮಾನವೋ ಅಲ್ಪಕಾಲ.
28 ಸಜ್ಜನರ ನಂಬಿಕೆ ಆನಂದಕರ; ದುರ್ಜನರ ನಿರೀಕ್ಷೆ ವಿನಾಶಕರ.
29 ಸನ್ಮಾರ್ಗಿಗೆ ಸರ್ವೇಶ್ವರನೆ ಆಶ್ರಯ; ಕೆಡುಕನಿಗೆ ಆತನೆ ಪ್ರಳಯ.
30 ಸಜ್ಜನರು ಎಂದಿಗೂ ಕದಲರು; ದುರ್ಜನರು ನಾಡಿನಲ್ಲಿ ನಿಲ್ಲರು.
31 ಸಜ್ಜನರ ಬಾಯಲ್ಲಿ ಜ್ಞಾನ ಮೊಳೆಯುವುದು; ನೀಚನ ನಾಲಿಗೆಯೂ ಕತ್ತರಿಸಿ ಹೋಗುವುದು.
32 ಸಜ್ಜನರ ಬಾಯಲ್ಲಿ ಹಿತವಚನ; ದುರ್ಜನರ ಬಾಯಲ್ಲಿ ನೀಚವಚನ.

## ಕಳ್ಳತಕ್ಕಡಿ

**11** ಕಳ್ಳತಕ್ಕಡಿ ಸರ್ವೇಶ್ವರನಿಗೆ ಅಸಹ್ಯ; ನ್ಯಾಯವಾದ ತೂಕ ಆತನಿಗೆ ಪ್ರಿಯ.

2 ಅಹಂಕಾರವಿದ್ದಲ್ಲಿ ಅವಮಾನ; ಸ್ವಾರ್ಥ ನಿಗ್ರಹವಿದ್ದಲ್ಲಿ ಸುಜ್ಞಾನ.

3 ಸಜ್ಜನರಿಗೆ ಸರಳತೆ ಮಾರ್ಗದರ್ಶನ, ದುರ್ಜನರಿಗೆ ಅವರ ವಕ್ರತೆ ಸಂಹಾರಕ.

4 ತೀರ್ಪಿನ ದಿನ ನೆರವಾಗದು ಆಸ್ತಿಪಾಸ್ತಿ; ಸನ್ನಡತೆಯಿಂದಲೆ ಮರಣದಿಂದ ವಿಮುಕ್ತಿ.

5 ನಿರ್ದೋಷಿಯ ಮಾರ್ಗ ಸರಾಗ; ದುಷ್ಟತನದಿಂದ ದುರುಳನ ಪತನ.

6 ಸಜ್ಜನರ ಬಿಡುಗಡೆ ಸದಾಚಾರದಿಂದ; ವಂಚಕರ ಬಂಧನ ದುರಾಶೆಯಿಂದ.

7 ದುರುಳನೊಂದಿಗೆ ಸಾಯುವುದು ಅವನ ನಿರೀಕ್ಷೆ; ಅಳಿವುದು ಸಾಮರ್ಥ್ಯದ ಮೇಲಿಟ್ಟ ಅವನ ನಂಬಿಕೆ.

8 ಸಜ್ಜನನು ಇಕ್ಕಟ್ಟಿನಿಂದ ಪಾರಾಗುವನು; ದುರ್ಜನನು ಅದರೊಳಗೆ ಸಿಕ್ಕಿಬೀಳುವನು.

9 ಅನೀತಿವಂತನು ಮಾತಿನಿಂದ ನೆರೆಯವನನ್ನು ನಾಶಮಾಡುವನು; ನೀತಿವಂತನು ತಿಳುವಳಿಕೆಯಿಂದ ಅವನನ್ನು ಉದ್ಧಾರಮಾಡುವನು.

10 ಸಜ್ಜನರು ಸುಖಿಗಳಾದರೆ ಊರಿಗೆ ಉಲ್ಲಾಸ; ದುರ್ಜನರು ಹಾಳಾದರೆ ಮಾಡುವರು ಜಯಘೋಷ.

11 ಸತ್ಪುರುಷರ ಆಶೀರ್ವಾದದಿಂದ ಪುರೋದ್ಧಾರ; ದುಷ್ಟ ಜನರ ಕೆಟ್ಟ ಬಾಯಿಂದ ಅದರ ಸಂಹಾರ.

12 ನೆರೆಯವನನ್ನು ತೃಣೀಕರಿಸುವವನು ಬುದ್ಧಿಹೀನ; ವಿವೇಕಿಯು ಅದರ ಬಗ್ಗೆ ತಾಳುವನು ಮೌನ.

13 ಚಾಡಿಕೋರನು ಗುಟ್ಟನ್ನು ರಟ್ಟುಮಾಡುವನು; ನಂಬಿಕಸ್ತನು ಅದನ್ನು ಮುಚ್ಚಿ ಮರೆಮಾಡವನು.

14 ನಾಯಕನಿಲ್ಲದ ಜನತೆ ನಾಶವಾಗುವುದು; ಹಲವರು ಸುಮಂತ್ರಿಗಳಿರುವಲ್ಲಿ ಸಂರಕ್ಷಣೆ ಇರುವುದು.

15 ಅಪರಿಚಿತನಿಗೆ ಜಾಮೀನು ನಿಂತರೆ ಹಾನಿ; ಜಾಮೀನನ್ನು ತೊರೆದುಬಿಟ್ಟರೆ ನೆಮ್ಮದಿ.

16 ಸದ್ಗುಣಸ್ತ್ರೀ ಕಾಪಾಡಿಕೊಳ್ಳುತ್ತಾಳೆ ಸನ್ಮಾನವನ್ನು; ಬಲವಂತವ್ಯಕ್ತಿ ಕಾಪಾಡಿಕೊಳ್ಳುತ್ತಾನೆ ಆಸ್ತಿಪಾಸ್ತಿಯನ್ನು.

17 ಪರೋಪಕಾರಿ ತನಗೂ ಉಪಕಾರಿ; ಕ್ರೂರಿಯಾದವನು ತನ್ನ ದೇಹಕ್ಕೂ ಕ್ರೂರಿ.

18 ದುರುಳನು ಪಡೆವ ಸಂಬಳ ಜೊಳ್ಳು ಸಂಬಳ; ನೀತಿಯನ್ನು ಬಿತ್ತುವವನು ಪಡೆವನು ಸತ್ಫಲ.

19 ಧರ್ಮನಿರತನಿಗೆ ದೊರಕುವುದು ಜೀವ; ಅಧರ್ಮಾಸಕ್ತನಿಗೆ ಸಿಗುವುದು ಮರಣ.

20 ವಕ್ರಹೃದಯರು ಸರ್ವೇಶ್ವರನಿಗೆ ಅಸಹ್ಯರು; ಸನ್ಮಾರ್ಗಿಗಳು ಆತನ ಕೃಪೆಗೆ ಪಾತ್ರರು.

21 ದುಷ್ಟನಿಗೆ ದಂಡನೆ ಕಟ್ಟಿಟ್ಟ ಬುತ್ತಿ; ಶಿಷ್ಟ ಸಂತಾನಕ್ಕೆ ಸಿಗುವುದು ಮುಕ್ತಿ.

22 ಲಜ್ಜೆಗೆಟ್ಟು ನಡೆಯುವ ಸೌಂದರ್ಯವತಿ, ಹಂದಿಯ ಮೂತಿಗೆ ಚಿನ್ನದ ಮೂಗುತಿ.

23 ಸಜ್ಜನರ ಕೋರಿಕೆ ಕಲ್ಯಾಣ ಸಾಧಕ; ದುರ್ಜನರ ನಿರೀಕ್ಷೆ ಕೋಪಾಗ್ನಿ ಸಾಧಕ.

24 ಅಳತೆಯಿಲ್ಲದೆ ಕೊಡುವವನು ಧನಾಢ್ಯನಾಗುವನು; ಕೊಡಬೇಕಾದುದನ್ನೂ ಬಿಗಿಹಿಡಿದವನು ಬಡವನಾಗುವನು.

25 ದಾನ ಗುಣವುಳ್ಳವನು ಧನವಂತನಾಗುವನು; ನೀರುಹಾಯಿಸುವವನಿಗೆ ನೀರು ದೊರಕುವುದು.

26 ಧಾನ್ಯವನ್ನು ಕೊಡದೆ ತುಂಬಿಟ್ಟುಕೊಳ್ಳುವವನ ಮೇಲೆ ಜನರ ಶಾಪ; ಧಾನ್ಯವನ್ನು ಮಾರುವವನ ತಲೆಯ ಮೇಲೆ ಆಶೀರ್ವಾದ.

27 ಒಳಿತಿಗಾಗಿ ಹಂಬಲಿಸುವವನು ಕೃಪಾರ್ಥಿ; ಕೇಡನ್ನು ಹುಡುಕುವವನಿಗೆ ಕೇಡೇ ಗತಿ.

28 ದ್ರವ್ಯವನ್ನು ನಂಬಿದವನು ಉದುರಿಹೋಗುವನು; ದೈವಭಕ್ತನು ಕುಡಿಯಂತೆ ಚಿಗುರವನು.

29 ಮನೆಯವರನ್ನೆ ಬಾಧಿಸುವವನು ಗಳಿಸುವುದು ಗಾಳಿ; ಬಿದ್ದಿರುವನವನು ಜ್ಞಾನಿಗೆ ಊಳಿಗನಾಗಿ.

30 ಸಜ್ಜನರು ಈವುದು ಜೀವಫಲ; ದುರ್ಜನರು ಪಡೆವುದು ಅಕಾಲಮರಣ.

31 ಸಜ್ಜನರೇ ಜಗದೊಳು ತಮ್ಮ ಕರ್ಮದ ಫಲವನ್ನು ಅನುಭವಿಸುವಲ್ಲಿ; ಹೇಳಬೇಕೆ ಇನ್ನು ದುರ್ಜನರ, ಹಾಗೂ ಪಾಪಿಗಳ ಪರಿಸ್ಥಿತಿ?

**12** ಶಿಸ್ತನ್ನು ಹಾರೈಸುವವನು ಶಿಕ್ಷಣ ಪ್ರಿಯನು; ತಿದ್ದುವಿಕೆಯನ್ನು ಹಗೆಮಾಡುವವನು ಪಶುಪ್ರಾಯನು.

2 ಒಳ್ಳೆಯವನು ಸರ್ವೇಶ್ವರನ ದಯೆಯನ್ನು ಗಳಿಸುವನು; ಕೆಟ್ಟವನ ಕುಯುಕ್ತಿ ದೈವಖಂಡನೆಯನ್ನು ಪಡೆಯುವುದು.

3 ದುಷ್ಟತನದಿಂದ ಯಾವನೂ ಸ್ಥಿರತೆಯನ್ನು ಗಳಿಸಿಲ್ಲ; ಶಿಷ್ಟನ ಬೇರನ್ನು ಯಾರೂ ಕದಲಿಸುವಂತಿಲ್ಲ.

4 ಗುಣವಂತ ಸತಿ ಗಂಡನ ತಲೆಗೆ ಕಿರೀಟ; ಲಜ್ಜೆಗೆಟ್ಟ ಹೆಂಡತಿ ಆತನ ಎಲುಬಿಗೆ ಕ್ಷಯ.

5 ಸತ್ಪುರುಷನ ಉದ್ದೇಶ ನ್ಯಾಯಯುತ; ದುಷ್ಟರ ಆಲೋಚನೆ ಮೋಸಭರಿತ.

6 ದುರುಳರ ಮಾತು ಜೀವಕ್ಕೆ ಉರುಳು; ಸಜ್ಜನರ ಮಾತು ಪ್ರಾಣಕ್ಕೆ ನೆರವು.

7 ದುರ್ಜನರು ನೆಲಕ್ಕುರುಳಿ ನಿರ್ಮೂಲರಾಗುವರು; ಸಜ್ಜನರ ತಲೆಮಾರು ಸ್ಥಿರವಾಗಿ ನಿಲ್ಲುವುದು.

8 ಬುದ್ಧಿವಂತನನ್ನು ಅವರ ಬುದ್ಧಿಗೆ ತಕ್ಕಂತೆ ಜನ ಹೊಗಳುವರು; ವಕ್ರಬುದ್ಧಿಯುಳ್ಳವನನ್ನಾದರೊ ಅವರು ತೆಗಳುವರು.

9 ಹೊಟ್ಟೆಗಿಲ್ಲದೆ ಜಟ್ಟಿಯೆನಿಸಿಕೊಳ್ಳುವವನಿಗಿಂತ ಕಷ್ಟದಿಂದ ದುಡಿವ ಸಾಧಾರಣ ಬಂಟನೆ ಲೇಸು.

10 ಒಳ್ಳೆಯವನು ದನಕರುಗಳಿಗೂ ದಯೆತೋರುವನು; ಕೆಟ್ಟವನು ತೋರುವ ಕರುಣೆಯು ಕ್ರೂರತನವಾಗುವುದು.

11 ಉತ್ತು ವ್ಯವಸಾಯ ಮಾಡುವವನು ಹೊಟ್ಟೆ ತುಂಬ ಉಣ್ಣುವನು; ವ್ಯರ್ಥಕಾರ್ಯಗಳಲ್ಲಿ ಆಸಕ್ತಿಯುಳ್ಳವನು ಮತಿಹೀನನು.

12 ಕೆಡುಕರ ಕೋಟೆ ಪುಡಿಪುಡಿಯಾಗುವುದು; ಒಳ್ಳೆಯವರ ಬುಡ ಫಲಬಿಡುವುದು.

13 ಮಾತಿನ ದೋಷದಿಂದ ಕೆಡುಕನು ಬೋನಿಗೆ ಬೀಳುವನು; ನೀತಿವಂತನು ಆಪತ್ತಿನಿಂದ ತಪ್ಪಿಸಿಕೊಳ್ಳುವನು.

14 ಮಾತುಬಲ್ಲವನು ಬದುಕುವನು ಸಂತುಷ್ಟನಾಗಿ; ಕೈಯಿರುವವನು ಬಾಳುವನು ಬಹುಮಾನಿತನಾಗಿ.

15 ಮೂರ್ಖನ ನಡತೆ ಸ್ವಂತ ಮೆಚ್ಚುಗೆಗೆ; ಬುದ್ದಿವಂತ ಕಿವಿಗೊಡುವನು ಉಚಿತಾಲೋಚನೆಗೆ.

16 ಮೂರ್ಖನ ಸಿಟ್ಟು ತಟ್ಟನೆ ರಟ್ಟಾಗುವುದು; ಜಾಣನು ನಿಂದೆಯನ್ನು ಮರೆಮಾಚುವನು.

17 ಸತ್ಯವಾದಿ ಪ್ರಾಮಾಣಿಕ ಸಾಕ್ಷಿ; ಸುಳ್ಳುಸಾಕ್ಷಿ ಕಪಟ ವಾಚಾಳಿ.

18 ಕತ್ತಿ ಇರಿತದಂತೆ ದುಡುಕನ ಮಾತು; ಹುಣ್ಣಿಗೆ ಮದ್ದುಹಾಕಿದಂತೆ ಜ್ಞಾನಿಗಳ ಮಾತು.

19 ಸತ್ಯವಾದಿಯ ಮಾತು ಶಾಶ್ವತ; ಮಿಥ್ಯವಾದಿಯ ಮಾತು ಕ್ಷಣಿಕ.

20 ಕೇಡನ್ನು ಕಲ್ಪಿಸುವವರ ಮನದಲ್ಲಿ ಮೋಸ; ಒಳಿತನ್ನು ಬಯಸುವವರ ಮನದಲ್ಲಿ ಉಲ್ಲಾಸ.

21 ಸಜ್ಜನರಿಗೆ ಸಂಭವಿಸದು ಯಾವ ಕೆಡುಕು; ದುರ್ಜನರಿಗೆ ತುಂಬಿತುಳುಕುವುದು ಕೇಡು.

22 ಮಿಥ್ಯವಾದಿಗಳು ಸರ್ವೇಶ್ವರನಿಗೆ ಹೇಸು; ಸತ್ಯವಾದಿಗಳು ಆತನಿಗೆ ಲೇಸು.

23 ಜಾಣನು ತನ್ನ ಜ್ಞಾನವನ್ನು ಮುಚ್ಚಿಡುವನು; ಮೂಢನು ತನ್ನ ಮೂರ್ಖತನವನ್ನು ಪ್ರಕಟಿಸುವನು.

24 ಚೂಟಿಯಾದವನು ಆಳುವನು ಯಜಮಾನನಾಗಿ; ಮೈಗಳ್ಳನು ಬಾಳುವನು ಗುಲಾಮನಾಗಿ.

25 ಚಿಂತೆ ಮನಸ್ಸನ್ನು ಕುಗ್ಗಿಸುತ್ತದೆ; ಸವಿಮಾತು ಅದನ್ನು ಹಿಗ್ಗಿಸುತ್ತದೆ.

26 ನೀತಿವಂತ ನೆರೆಯವನಿಗೆ ದಾರಿತೋರಿಸುವನು; ಅನೀತಿವಂತನು ಅವನಿಗೆ ದಾರಿ ತಪ್ಪಿಸುವನು.

27 ಮೈಗಳ್ಳನು ಬೇಟೆಯಾಡಿದ್ದನ್ನೂ ಬೇಯಿಸನು; ಚೂಟಿಯಾದವನ ಪಾಲಿಗೆ ಬರುವುದು ಸಂಪತ್ತು.

28 ಸನ್ಮಾರ್ಗದಿಂದ ಜೀವಲಾಭ; ದುರ್ಮಾರ್ಗದಿಂದ ಮರಣ ಪ್ರಾಪ್ತಿ.

**13** ಬುದ್ಧಿವಂತ ಮಗ ತಂದೆಯ ಶಿಕ್ಷಣವನ್ನು ಕೇಳುವನು; ಕಿತ್ತಾಡುವ ಮಗ ಗದರಿಕೆಯನ್ನೂ ಕೇಳಲೊಲ್ಲನು.

2 ಸಜ್ಜನರ ಊಟ ಫಲಹಾರ; ವಂಚಕರ ಆಹಾರ ಹಿಂಸಾಚಾರ.

3 ಬಾಯಿಯನ್ನು ಕಾಯುವವನು ಜೀವವನ್ನು ಕಾಯುವನು; ತುಟಿಗಳನ್ನು ಹತೋಟಿಯಲ್ಲಿಡದವನು ನಾಶವಾಗುವನು.

4 ಸೋಮಾರಿಗೆ ಹಸಿದಿದ್ದರೂ ಊಟವಿಲ್ಲ; ಶ್ರಮಜೀವಿಗಳಿಗಾದರೋ ಬಲಿಷ್ಟರನ್ನಾಗಿಸುವ ಮೃಷ್ಟಾನ್ನ.
5 ಸಜ್ಜನನಿಗೆ ಮೋಸಮಾತು ಅಸಹ್ಯ; ದುರ್ಜನನ ನಡತೆ ನಿಂದಾಸ್ಪದ.
6 ನೀತಿ ಕಾಪಾಡುವುದು ನಿರ್ದೋಷಿಯನ್ನು; ಅನೀತಿ ಕೆಡವಿಬಿಡುವುದು ಪಾಪಿಯನ್ನು.
7 ಒಬ್ಬ ಹಣಕೂಡಿಸಿದ್ದರೂ ಘನದರಿದ್ರನಿರಬಹುದು; ಮತ್ತೊಬ್ಬ ಹಣವೆಚ್ಚಮಾಡಿ ಕಡುಬಡವನಾಗಿದ್ದರೂ ಐಶ್ವರ್ಯವಂತನಗಿರಬಹುದು.
8 ಹಣವಂತನ ಪ್ರಾಣರಕ್ಷಣೆಗೆ ಅವನ ಹಣವೇ ಈಡು; ಬಡವನಿಗೆ ಈಡಿನ ಬೆದರಿಕೆಯೂ ಇರದು.
9 ಸಜ್ಜನರ ಬೆಳಕು ಪ್ರಜ್ವಲಿಸುವುದು; ದುರ್ಜನರ ದೀಪವು ಆರಿಹೋಗುವುದು.
10 ಗರ್ವದಿಂದ ಹುಟ್ಟುವುದು ಕಲಹಕದನ; ಆಲೋಚನೆಯನ್ನು ಕೇಳುವುದು ಸುಜ್ಞಾನ.
11 ಬಿಟ್ಟಿಯಾಗಿ ಸಿಕ್ಕಿದ ಸಂಪತ್ತು ಬೇಗನೆ ಕರಗುವುದು; ದುಡಿದು ಕೂಡಿಸಿದ ಹಣ ಅಭಿವೃದ್ಧಿಯಾಗುವುದು.
12 ಕೋರಿದ್ದು ತಡವಾದರೆ ಮನಸ್ಸಿಗೆ ತುಡಿತ; ಕೈಗೂಡಿದ ಇಷ್ಟಾರ್ಥ ಜೀವವೃಕ್ಷ.
13 ದೇವವಾಕ್ಯವನ್ನು ಉಲ್ಲಂಘಿಸುವವನು ನಾಶವಾಗುವನು; ಆಜ್ಞೆಯನ್ನು ನಿಷ್ಠೆಯಿಂದ ಪಾಲಿಸುವವನು ಫಲಪಡೆಯುವನು.
14 ಜ್ಞಾನಿಯ ಬೋಧೆ ಜೀವದ ಬುಗ್ಗೆ; ಮಾಡುವುದದು ಮರಣದಿಂದ ಬಿಡುಗಡೆ.
15 ಸುಬುದ್ಧಿ ದಯಾಸ್ಪದ; ದುರಾಚಾರ ವಿನಾಶಕರ.
16 ಜಾಣನು ತಿಳುವಳಿಕೆಯಿಂದ ವರ್ತಿಸುತ್ತಾನೆ; ಮೂಢನು ಮೂರ್ಖತನವನ್ನು ತೋರ್ಪಡಿಸುತ್ತಾನೆ.
17 ಕೆಟ್ಟದೂತನು ಕೇಡಿಗೆ ಸಿಕ್ಕಿಸುವನು; ನಂಬಿಕಸ್ಥ ದೂತನು ಸುಕ್ಷೇಮಕಾರನು.
18 ಶಿಕ್ಷೆಯನ್ನು ಉಪೇಕ್ಷಿಸುವವನಿಗೆ ಕಾದಿದೆ ಬಡತನ ಹಾಗು ಅವಮಾನ; ಗದರಿಕೆಯನ್ನು ಗಮನಿಸುವವ ಹೊಂದುವನು ಸನ್ಮಾನ.
19 ಇಷ್ಟಸಿದ್ಧಿ ಮನಸ್ಸಿಗೆ ಸಿಹಿ; ಕೆಟ್ಟದ್ದನ್ನು ಬಿಡುವುದು ಮೂಢರಿಗೆ ಕಹಿ.
20 ಸುಜ್ಞಾನಿಗಳ ಸಹವಾಸದಿಂದ ಜನರು ಸುಜ್ಞಾನಿಗಳಾಗುವರು; ಅಜ್ಞಾನಿಗಳ ಒಡನಾಟದಿಂದ ಸಂಕಟಪಡುವರು.
21 ಅಮಂಗಳವು ಪಾಪಿಗಳನ್ನು ಹಿಂಬಾಲಿಸುವುದು; ಮಂಗಳವು ಸತ್ಪುರುಷರಿಗೆ ಸಿಗುವ ಪ್ರತಿಫಲವು.
22 ಒಳ್ಳೆಯವನ ಆಸ್ತಿ ಸಂತತಿಯವರಿಗೆ ಬಾಧ್ಯದ ಸೊತ್ತು; ಪಾಪಿಯ ಸೊತ್ತು ಸತ್ಪುರುಷರಿಗೆ ಸೇರುವ ಸಂಪತ್ತು.
23 ಬಡವರಿಗೆ ಬಂಜರುಭೂಮಿಯೂ ಬೆಳೆಯನ್ನೀಯುವುದುಂಟು; ಭಂಡತನ ಇರುವಲ್ಲಿ ಅದು ಕೂಡ ಹಾಳಾಗುವುದುಂಟು.
24 ಬೆತ್ತಹಿಡಿಯದ ತಂದೆ ಮಗನಿಗೆ ಶತ್ರು; ಎಚ್ಚರಿಕೆಯಿಂದ ಶಿಕ್ಷಿಸುವ ತಂದೆ ಮಗನಿಗೆ ಮಿತ್ರನು.
25 ನೀತಿವಂತನು ಹೊಟ್ಟೆತುಂಬ ಉಣ್ಣುವನು; ದುಷ್ಟನು ಹೊಟ್ಟೆ ಹಸಿವಿನಿಂದ ಬಳಲುವುದು.

**14** ಬುದ್ಧಿವಂತೆ ತನ್ನ ಮನೆಯನ್ನು ಕಟ್ಟೆಬ್ಬಿಸುತ್ತಾಳೆ; ಬುದ್ಧಿಹೀನೆ ಅದನ್ನು ಕೈಯಿಂದ ಕೆಡವಿಹಾಕುತ್ತಾಳೆ.
2 ಸನ್ಮಾರ್ಗಿಯು ಸರ್ವೇಶ್ವರನಿಗೆ ಭಯಪಡುತ್ತಾನೆ; ದುರ್ಮಾರ್ಗಿಯು ಆತನನ್ನು ಅಸಡ್ಡೆಮಾಡುತ್ತಾನೆ.
3 ಮೂರ್ಖನ ಬಾಯಲ್ಲಿ ಗರ್ವವು ಅಂಕುರಿಸುವುದು; ಜ್ಞಾನಿಗಳ ವಚನಗಳು ಅವರನ್ನು ಕಾಪಾಡುವುವು.
4 ಎತ್ತುಗಳಿಲ್ಲದಿರುವಾಗ ಗೋದಲಿ ಶುದ್ಧ; ಆದರೆ ಎತ್ತಿನ ಶಕ್ತಿಯಿಂದಲೇ ಬೆಳೆಯ ಉತ್ಪನ್ನ.
5 ಸತ್ಯಸಾಕ್ಷಿ ಸುಳ್ಳಾಡದ ವ್ಯಕ್ತಿ; ಸುಳ್ಳುಸಾಕ್ಷಿ ಅಬದ್ಧಪ್ರಿಯ ವ್ಯಕ್ತಿ.
6 ಕುಚೋದ್ಯನಿಗೆ ಜ್ಞಾನ ಹುಡುಕಿದರೂ ಸಿಕ್ಕದು; ವಿವೇಕಿಗೆ ತಿಳುವಳಿಕೆ ಸುಲಭವಾಗಿ ದಕ್ಕುವುದು.
7 ಮೂರ್ಖನಿಂದ ದೂರವಿರು; ಜ್ಞಾನವಚನ ಅವನಲ್ಲಿ ಕಾಣಸಿಗದು.
8 ವಿವೇಕಿಯ ಜ್ಞಾನ ಸನ್ಮಾರ್ಗದಲ್ಲಿ ನಡೆಸುತ್ತದೆ; ಮೂಢರ ಮೂರ್ಖತನ ಮೋಸಗೊಳಿಸುತ್ತದೆ.

9 ಪಾಪ ಪರಿಹಾರವನ್ನು ಪರಿಹಾಸ್ಯಮಾಡುತ್ತಾರೆ ಮೂರ್ಖರು; ಪಾಪಕ್ಷಮೆಯನ್ನು ಕೋರುತ್ತಾರೆ ಸತ್ಪುರುಷರು.

10 ಆಯಾಯ ಹೃದಯಕ್ಕೆ ಗೊತ್ತು ಅದರ ಗೋಳು; ಅದರ ಸಂತೋಷದಲ್ಲೂ ಪಾಲುಗೊಳ್ಳಲಾಗದು ಬೇರೆಯವರು.

11 ದುಷ್ಟರ ಮನೆಮಠ ನಿರ್ಮೂಲವಾಗುವುದು; ಸಜ್ಜನರ ಗುಡಾರ ಉದ್ಧಾರವಾಗುವುದು.

12 ಒಂದು ಮಾರ್ಗ ಒಬ್ಬನಿಗೆ ನೇರವೆಂದು ತೋರಬಹುದು; ಕೊನೆಗೆ ಅದು ಮರಣಕ್ಕೊಯ್ಯುವ ಹಾದಿಯಾಗಬಹುದು.

13 ನಗೆಯಲ್ಲೂ ಅಳು ಉಂಟು; ನಲಿವು ನೋವಾಗಿ ಕೊನೆಗೊಳ್ಳುವುದುಂಟು.

14 ಕೆಟ್ಟವನು ತನ್ನ ಕರ್ಮದ ಕಹಿಫಲದಿಂದ ತಿಂದುತೇಗುವನು; ಒಳ್ಳೆಯವನು ತನ್ನ ಕಾರ್ಯದ ಸತ್ಫಲದಿಂದ ತೃಪ್ತನಾಗುವನು.

15 ಪೆದ್ದನು ಕಿವಿಗೆ ಬಿದ್ದುದೆಲ್ಲವನ್ನು ನಂಬಿ ಬಿಡುವನು; ಜಾಣನು ವಿವೇಚನೆ ಮಾಡಿ ಹೆಜ್ಜೆ ಇಡುವನು.

16 ಬುದ್ಧಿವಂತನು ಕೇಡಿಗೆ ಅಂಜಿ ಓರೆಯಾಗುವನು; ಬುದ್ಧಿಹೀನನು ಸೊಕ್ಕಿನಿಂದ ಅದರತ್ತ ಧಾವಿಸುವನು.

17 ಮುಂಗೋಪಿಗೆ ಬುದ್ಧಿಮಟ್ಟುಂಟು; ವಿವೇಕಿಗಾದರೊ ಸಹನೆಯುಂಟು.

18 ದಡ್ಡರ ಸೊತ್ತು ಮೂಢತನ; ಜಾಣರಿಗೆ ಜ್ಞಾನವೆ ಭೂಷಣ.

19 ಕೆಟ್ಟವರು ಒಳ್ಳೆಯವರಿಗೆ ಬಾಗಬೇಕಾಗುವುದು; ದುಷ್ಟರು ಸಜ್ಜನರ ಬಾಗಿಲಿಗೆ ಅಡ್ಡ ಬೀಳಬೇಕಾಗುವುದು.

20 ಬಡವನನ್ನು ನೆರೆಯವರೂ ತುಚ್ಛವಾಗಿ ಕಾಣುವರು; ಹಣವಂತನಿಗಾದರೊ ಬಹು ಜನ ಮಿತ್ರರು.

21 ಹಸಿದವನನ್ನು ತಿರಸ್ಕರಿಸುವವನು ಪಾಪಿಷ್ಠನು; ದಲಿತರಿಗೆ ದಯೆತೋರಿಸುವವನು ಭಾಗ್ಯವಂತನು.

22 ಕೆಟ್ಟದ್ದನ್ನು ಕಲ್ಪಿಸುವವರು ಮಾರ್ಗಭ್ರಷ್ಟರು; ಒಳ್ಳೆಯದನ್ನು ಕಲ್ಪಿಸುವವರು ಮರ್ಯಾದಸ್ಥರು.

23 ದುಡಿಮೆಯಿಂದ ಸದಾ ಲಾಭವುಂಟು; ಬರಿಮಾತಿನಿಂದ ಬಡತನ ಬರುವುದುಂಟು.

24 ಬುದ್ಧಿವಂತಹ ಕಿರೀಟ ಅವರ ಜ್ಞಾನವೇ; ದಡ್ಡರ ಶಿರಮುಕುಟ ಅವರ ದಡ್ಡತನವೆ.

25 ಸತ್ಯವಾಡುವವನ ಸಾಕ್ಷಿ ಪ್ರಾಣಕ್ಕೆ ರಕ್ಷಣೆ; ಸುಳ್ಳಾಡುವವನ ಮಾತು ಬರೀ ವಂಚನೆ.

26 ಸರ್ವೇಶ್ವರನಲ್ಲಿ ಭಯಭಕ್ತಿಯುಳ್ಳವನಿಗೆ ಇದೆ ದೃಢಭರವಸೆ; ಆತನ ಮಕ್ಕಳಿಗೆ ಆಶ್ರಯ ಇದ್ದೇ ಇರುತ್ತದೆ.

27 ಸರ್ವೇಶ್ವರನಲ್ಲಿ ಭಯಭಕ್ತಿಯು ಜೀವಜಲದ ಚಿಲುಮೆಯು; ಮರಣಪಾಶದಿಂದ ತಪ್ಪಿಸಿಕೊಳ್ಳಲು ಅದುವೆ ಸಾಧನವು.

28 ಪ್ರಜೆಗಳ ಬಹುಸಂಖ್ಯೆ ಅರಸನಿಗೆ ಅತಿ ಹಿರಿಮೆ; ಪ್ರಜೆಗಳ ಕೊರತೆ ರಾಜಕುವರನಿಗೂ ಅಂಜಿಕೆ.

29 ದೀರ್ಘಶಾಂತನು ಬಹುಬುದ್ಧಿವಂತನು; ಉಗ್ರಕೋಪಿ ಎತ್ತಿಹಿಡಿವನು ಮೂರ್ಖತನವನ್ನು.

30 ಶಾಂತಗುಣವು ದೇಹಕ್ಕೆ ಆರೋಗ್ಯದಾಯಕವು; ಹೊಟ್ಟೆಕಿಚ್ಚು ಎಲುಬಿಗೆ ಕ್ಷಯ ರೋಗವು.

31 ಬಡವರನ್ನು ಹಿಂಸಿಸುವವನು ತನ್ನ ಸೃಷ್ಟಿಕರ್ತನನ್ನೇ ಹೀನೈಸುತ್ತಾನೆ; ನಿರ್ಗತಿಕನಿಗೆ ದಯೆ ತೋರಿಸುವವನು ಆತನನ್ನು ಘನಪಡಿಸುತ್ತಾನೆ.

32 ಆಪತ್ಕಾಲ ಬಂದಾಗ ದುಷ್ಟನು ಹಾಳಾಗುತ್ತಾನೆ; ಮರಣವೇಳೆಯಲ್ಲೂ ನೀತಿವಂತ ನಂಬಿಕೆ ಯಿಂದಿರುತ್ತಾನೆ.

33 ಬುದ್ಧಿವಂತರ ಹೃದಯ ಜ್ಞಾನದ ಆಶ್ರಯ; ಬುದ್ಧಿಹೀನರ ಹೃದಯ ಜ್ಞಾನದ ಶೂನ್ಯ.

34 ಸದಾಚಾರದಿಂದ ನಾಡಿನ ಉನ್ನತಿ; ಅನಾಚಾರದಿಂದ ಅದರ ಅವನತಿ.

35 ಜಾಣನಾದ ಸೇವಕನ ಮೇಲೆ ರಾಜನ ಕೃಪೆಯಿರುತ್ತದೆ; ಲಜ್ಜಾಸ್ಪದ ಸೇವಕನ ಮೇಲೆ ಅವನ ಕೋಪ ಎರಗುತ್ತದೆ.

**15** ಮೃದುವಾದ ಮಾತು ಸಿಟ್ಟನ್ನಾರಿಸುತ್ತದೆ; ಬಿರುಸಾದ ನುಡಿ ಸಿಟ್ಟನ್ನೇರಿಸುತ್ತದೆ.

2 ಜ್ಞಾನಿಗಳ ನಾಲಿಗೆ ತಿಳುವಳಿಕೆಯನ್ನು ಸಾರ್ಥಕಪಡಿಸುತ್ತದೆ; ಜ್ಞಾನಹೀನರ ಬಾಯಿ ಮೂರ್ಖತನವನ್ನು ಕಕ್ಕುತ್ತದೆ.

3 ಸರ್ವೇಶ್ವರನ ದೃಷ್ಟಿ ಸರ್ವವ್ಯಾಪ್ತ; ಕೆಟ್ಟವರ ಮೇಲೂ ಒಳ್ಳೆಯವರ ಮೇಲೂ ಆತನ ನೋಟ.

4 ಸಂತೈಸುವ ನಾಲಿಗೆ ಜೀವವೃಕ್ಷಕ್ಕೆ ಸಮಾನ; ಹಿಂಸಾತ್ಮಕ ನಾಲಿಗೆ ಮನಮುರಿತಕ್ಕೆ ಸಾಧನ.

5 ಮೂರ್ಖನು ತಂದೆಯ ಶಿಕ್ಷಣವನ್ನು ನಿರ್ಲಕ್ಷ್ಯ ಮಾಡುತ್ತಾನೆ; ಜಾಣನು ಆತನ ಗದರಿಕೆಯನ್ನೂ ಗಮನಿಸುತ್ತಾನೆ.

6 ನೀತಿವಂತನ ಮನೆಯೊಳು ನಿಧಿನಿಕ್ಷೇಪ; ಅನೀತಿವಂತನ ಆದಾಯ ದುಃಖತಾಪ.

7 ತಿಳುವಳಿಕೆಯ ಬಿತ್ತನೆ ಜ್ಞಾನಿಗಳ ಬಾಯಿಂದ; ದುರುಳರ ಹೃದಯಕ್ಕೆ ಅದು ಅಸಾಧ್ಯ.

8 ದುರುಳರು ಅರ್ಪಿಸುವ ಬಲಿ ಸರ್ವೇಶ್ವರನಿಗೆ ಅಸಹ್ಯ; ಸಜ್ಜನರು ಮಾಡುವ ಪ್ರಾರ್ಥನೆ ಆತನಿಗೆ ಪ್ರಿಯ.

9 ದುರುಳರ ನಡತೆ ಸರ್ವೇಶ್ವರನಿಗೆ ಹೇಯ; ನೀತಿವಂತರ ನಡತೆ ಆತನಿಗೆ ಸುಪ್ರಿಯ.

10 ಸನ್ಮಾರ್ಗವನ್ನು ತೊರೆದವನಿಗೆ ಬರುವ ಶಿಕ್ಷೆ ಕಠಿಣ; ಬುದ್ಧಿವಾದವನ್ನು ಕೇಳಲೊಲ್ಲದವನಿಗೆ ಬರುವುದು ಮರಣ.

11 ನರಕಪಾತಾಳಗಳೇ ಸರ್ವೇಶ್ವರನ ಕಣ್ಣಿಗೆ ಬಟ್ಟಬಯಲಾಗಿರಲು, ನರಮಾನವರ ಹೃದಯ ಆತನಿಗೆ ಮುಚ್ಚುಮರೆಯೇ?

12 ಕುಚೋದ್ಯನಿಗೆ ಬೇಡ ಬುದ್ದಿವಾದ; ಅವನಿಗೆ ಬೇಡ ಜ್ಞಾನಿಗಳ ಸತ್ಸಂಘ.

13 ಹರ್ಷಹೃದಯದಿಂದ ಮುಖ ಅರಳುವುದು; ಮನೋವ್ಯಥೆಯಿಂದ ಚೈತನ್ಯ ಕುಂದುವುದು.

14 ವಿವೇಕಿಯ ಮನ ತಿಳುವಳಿಕೆಯನ್ನು ಅರಸುವುದು; ಮತಿಹೀನನ ಬಾಯಿ ಮೂರ್ಖತನವನ್ನು ಮುಕ್ಕುವುದು.

15 ದಲಿತರ ದಿನಗಳೆಲ್ಲ ದುಃಖಭರಿತ; ಹರ್ಷ ಹೃದಯನಿಗೆ ಸದಾ ಹಬ್ಬದ ಆನಂದ.

16 ನೆಮ್ಮದಿಯಿಲ್ಲದ ಸಿರಿಸಂಪತ್ತಿಗಿಂತಲು, ಸರ್ವೇಶ್ವರನ ಭಯಭಕ್ತಿಯಿಂದ ಕೂಡಿದ ಕಿಂಚಿತ್ತೇ ಮೇಲು.

17 ದ್ವೇಷವಿರುವಲ್ಲಿ ಕೊಬ್ಬಿದ ಮಾಂಸ ಭೋಜನಕ್ಕಿಂತ ಪ್ರೀತಿಯಿರುವಲ್ಲಿ ಸೊಪ್ಪಿನ ಊಟವೇ ಲೇಸು.

18 ಉಗ್ರಕೋಪಿ ವ್ಯಾಜ್ಯವೆಬ್ಬಿಸುತ್ತಾನೆ; ದೀರ್ಘಶಾಂತನು ಜಗಳ ತೀರಿಸುತ್ತಾನೆ.

19 ಸೋಮಾರಿಯ ದಾರಿ ಮುಳ್ಳಿನಬೇಲಿ; ಸಜ್ಜನರ ಮಾರ್ಗ ರಾಜಬೀದಿ.

20 ಬುದ್ಧಿವಂತ ಮಗ ತಂದೆಯನ್ನು ಸಂತೋಷಗೊಳಿಸುತ್ತಾನೆ; ಬುದ್ಧಿಹೀನನು ಹೆತ್ತ ತಾಯಿಯನ್ನು ತಿರಸ್ಕರಿಸುತ್ತಾನೆ.

21 ಬುದ್ಧಿಹೀನನು ಮೂರ್ಖತನದಲ್ಲಿ ಆನಂದಿಸುತ್ತಾನೆ; ಬುದ್ಧಿವಂತನು ಸನ್ಮಾರ್ಗದಲ್ಲಿ ಮುಂದುವರಿಯುತ್ತಾನೆ.

22 ಆಲೋಚನೆಯಿಲ್ಲದೆ ಉದ್ದೇಶಗಳು ಈಡೇರವು; ಹಲವಾರು ಆಲೋಚನಾಪರರಿರುವಲ್ಲಿ ಅವು ಕೈಗೂಡುವುವು.

23 ಸದುತ್ತರ ಕೊಡುವವನಿಗೆ ಎಷ್ಟೋ ಸಂತೋಷ; ಸಮಯೋಚಿತ ವಚನ ಎಷ್ಟೋ ಸ್ವಾರಸ್ಯ.

24 ವಿವೇಕಿಗಳ ಮಾರ್ಗ ಏರಿಸುವುದು ಸಜ್ಜೀವಕ್ಕೆ; ಅದನ್ನು ಕೈಗೊಳ್ಳುವವರು ಇಳಿಯರು ಪಾತಾಳಕ್ಕೆ.

25 ಗರ್ವಿಷ್ಠನ ಮನೆಯನ್ನು ಸರ್ವೇಶ್ವರ ಕೆಡವಿಬಿಡುವನು; ವಿಧವೆಯ ಎಲ್ಲೆ ಮೇರೆಯನ್ನು ಸುಭದ್ರಪಡಿಸುವನು.

26 ದುರುಳರ ಕುಯುಕ್ತಿ ಸರ್ವೇಶ್ವರನಿಗೆ ಅಸಹ್ಯ; ಸಜ್ಜನರ ಸುಸೂಕ್ತಿ ಆತನಿಗೆ ಪ್ರಿಯ.

27 ಸೂರೆಮಾಡುವವನು ಸವಂತ ಮನೆಗೇ ಕೇಡು ಮಾಡುತ್ತಾನೆ; ಲಂಚವನ್ನು ದ್ವೇಷಿಸುವವನು ಸುಖವಾಗಿ ಬಾಳುತ್ತಾನೆ.

28 ಸಜ್ಜನರು ಸಮಾಲೋಚಿಸಿ ಉತ್ತರಿಸುತ್ತಾರೆ; ದುರ್ಜನರು ಕೆಟ್ಟದ್ದನ್ನು ಕಕ್ಕುತ್ತಿರುತ್ತಾರೆ.

29 ಸರ್ವೇಶ್ವರನು ದುರುಳರಿಗೆ ದೂರ; ನೀತಿವಂತರ ಪ್ರಾರ್ಥನೆಗೆ ಹತ್ತಿರ.

30 ಹಸನ್ಮುಖ ಕಂಡಾಗ ಹೃದಯಕ್ಕೆ ಆನಂದ; ಶುಭಸಮಾಚಾರದಿಂದ ದೇಹಕ್ಕೆ ಉತ್ತೇಜನ.

31 ಹಿತಕರ ಬುದ್ಧಿವಾದಕ್ಕೆ ಕಿವಿಗೊಡುವವನು ಸಜ್ಜನರ ಸತ್ಸಂಘದಲ್ಲಿ ಪಾಲ್ಗೊಳ್ಳುವನು.

32 ಶಿಸ್ತನ್ನು ನಿರಾಕರಿಸುವವನು ತನ್ನನ್ನೇ ತೃಣೀಕರಿಸುತ್ತಾನೆ; ಬುದ್ಧಿವಾದವನ್ನು ಅಂಗೀಕರಿಸುವವನು ಜ್ಞಾನ ಹೊಂದುತ್ತಾನೆ.

33 ಸರ್ವೇಶ್ವರನಲ್ಲಿ ಭಯಭಕ್ತಿಯುಳ್ಳವರಿಗೆ ಜ್ಞಾನೋದಯ; ಘನತೆಗೌರವಕ್ಕೆ ಮುಂಚೆ ಸವಿನಯ.

**16** ಆಲೋಚನೆ ಮಾಡುವುದು ಮನುಷ್ಯನ ಇಚ್ಛೆ; ಅದನ್ನು ಸಫಲವಾಗಿಸುವುದು ಸರ್ವೇಶ್ವರನ ಇಚ್ಛೆ.

2 ಮನುಷ್ಯನ ನಡತೆಯೆಲ್ಲಾ ಸ್ವಂತ ದೃಷ್ಟಿಗೆ ಶುದ್ಧ; ಆದರೆ ಅವನ ಅಂತರಂಗವನ್ನು ವೀಕ್ಷಿಸುವಂಥವನು ಸರ್ವೇಶ್ವರ.

3 ನಿನ್ನ ಕಾರ್ಯಭಾರವನ್ನು ಸರ್ವೇಶ್ವರನಿಗೆ ವಹಿಸು; ಆಗ ಸಫಲವಾಗುವುದು ನಿನ್ನ ಯೋಜನೆಯು.

4 ಸರ್ವೇಶ್ವರ ಒಂದೊಂದನ್ನೂ ಸೃಷ್ಟಿಸಿರುವುದು ಒಂದು ಗುರಿಯಿಟ್ಟೇ ಹೌದು; ಕೆಡುಕರನ್ನು ಉಂಟುಮಾಡಿರುವುದು ಕೇಡಿನ ದಿನಕ್ಕಾಗಿಯೇ.

5 ಗರ್ವಿಷ್ಠನು ಯಾರೇ ಆಗಿರಲಿ, ಅವನು ಸರ್ವೇಶ್ವರನಿಗೆ ಅಸಹ್ಯ; ಅವನಿಗೆ ದಂಡನೆ ತಪ್ಪದು, ಇದು ಖಂಡಿತ.

6 ಪ್ರೀತಿ ಸತ್ಯತೆಗಳಿಂದ ಪಾಪನಿವಾರಣೆ; ಸರ್ವೇಶ್ವರನ ಭಯಭಕ್ತಿಯಿಂದ ಹಾನಿ ನಿವಾರಣೆ.

7 ಒಬ್ಬನ ನಡತೆಯನ್ನು ಸರ್ವೇಶ್ವರ ಮೆಚ್ಚಿದರೆ, ಅವನ ಶತ್ರುಗಳನ್ನು ಆತ ಮಿತ್ರರನ್ನಾಗಿಸುತ್ತಾನೆ.

8 ಅನ್ಯಾಯದಿಂದ ಗಳಿಸಿದ ಅಪಾರ ನಿಧಿಗಿಂತಲು ನ್ಯಾಯದಿಂದ ಕೂಡಿಸಿದ ಅಲ್ಪ ಧನ ಲೇಸು.

9 ಮನುಷ್ಯ ಮನಬಂದಂತೆ ಮಾರ್ಗವನ್ನಾರಿಸಿಕೊಂಡರೂ ಸರ್ವೇಶ್ವರನೇ ಅವನ ನಡತೆಯನ್ನು ಪರಾಂಬರಿಸುವವನು.

10 ದೈವೋಕ್ತಿ ಹೊರಡುವುದು ಅರಸನ ಬಾಯಿಂದ; ತಪ್ಪುಮಾಡದು ಅವನ ಬಾಯಿ ತೀರ್ಪು ನೀಡುವಾಗ.

11 ನ್ಯಾಯದ ತ್ರಾಸುತಕ್ಕಡಿಗಳೆಲ್ಲ ಸರ್ವೇಶ್ವರನ ಏರ್ಪಾಡು; ಚೀಲದ ಕಲ್ಲುತೂಕಗಳೆಲ್ಲ ಆತನ ಕೈಕೆಲಸ.

12 ರಾಜರಲ್ಲಿ ದುಷ್ಟಕಾರ್ಯ ಖಂಡನೀಯ; ಸದಾಚಾರ ಸಿಂಹಾಸನಕ್ಕೆ ನಿಜ ಆಧಾರ.

13 ನೀತಿಯುತ ಮಾತನ್ನು ಅರಸನು ಮೆಚ್ಚುವನು; ಸತ್ಯವಾದಿಯನ್ನು ಆತನು ಪ್ರೀತಿಸುವನು.

14 ಭೂಪನ ಕೋಪ ಮೃತ್ಯುವಿನ ದೂತ; ಅದನ್ನು ಶಮನಪಡಿಸಲು ಜಾಣನು ಶಕ್ತ.

15 ಪ್ರಭುವಿನ ಮುಖಪ್ರಸನ್ನತೆ ಜೀವದ ಒರತೆ; ಆತನ ಕರುಣೆ ಮುಂಗಾರು ಮಳೆ.

16 ಬಂಗಾರಕ್ಕಿಂತ ಜ್ಞಾನಾರ್ಜನೆ ಎಷ್ಟೋ ಮೇಲು; ಬೆಳ್ಳಿಗಿಂತ ವಿವೇಕಾರ್ಜನೆ ಎಷ್ಟೋ ಲೇಸು.

17 ಸಜ್ಜನರ ರಾಜಮಾರ್ಗ ಹಾನಿಗೆ ದೂರ; ಸನ್ನಡತೆಯುಳ್ಳವ ಪ್ರಾಣಸಂರಕ್ಷಕ.

18 ವಿನಾಶಕ್ಕೆ ಮುಂಚೆ ವಿಪರೀತ ಬುದ್ಧಿ; ನೆಲಕ್ಕುರುಳುವುದಕ್ಕೆ ಮುಂಚೆ ನೆತ್ತಿಗೇರಿತು ಸೊಕ್ಕು.

19 ಸೊಕ್ಕಿನವರ ಸಂಗಡ ಸೂರೆಹಂಚಿಕೊಳ್ಳುವುದಕ್ಕಿಂತಲು ದೀನದಲಿತರ ಸಂಗಡ ದೈನ್ಯದಿಂದಿ ರುವುದು ಮೇಲು.

20 ದೇವರ ವಾಕ್ಯ ಸ್ಮರಿಸುವವನು ಸುಕ್ಷೇಮದಿಂದ ಬಾಳುವನು; ಸರ್ವೇಶ್ವರನಲ್ಲಿ ಭರವಸೆ ಇಡುವವನು ಭಾಗ್ಯವಂತನು.

21 ಜ್ಞಾನ ಹೃದಯರಿಗೆ ಜಾಣರೆಂಬ ಬಿರುದು; ಮಧುರ ಮಾತಿನಿಂದ ಬೋಧನಾಶಕ್ತಿ ಹಿರಿದು.

22 ವಿವೇಕಿಗೆ ವಿವೇಕವೇ ಜೀವದ ಬುಗ್ಗೆ; ಮೂರ್ಖನಿಗೆ ಮೂರ್ಖತನವೇ ತಕ್ಕ ದಂಡನೆ.

23 ಜ್ಞಾನಿಯ ಹೃದಯದಿಂದ ಬಾಯಿಗೆ ಜಾಣತನ; ಅವನ ತುಟಿಗಳಿಗೆ ಕಲಿಕೆಯ ಚೂಟಿತನ.

24 ಸವಿನುಡಿಯು ಜೇನಿನ ಕೊಡವು; ಅದು ಆತ್ಮಕ್ಕೆ ಇಂಪು, ದೇಹಕ್ಕೆ ತಂಪು.

25 ಒಂದು ಮಾರ್ಗ ಒಬ್ಬನಿಗೆ ನೇರವೆಂದು ತೋರಬಹುದು; ಕೊನೆಗೆ ಅದು ಮರಣಕ್ಕೆ ಒಯ್ಯುವ ಹಾದಿಯಾಗಬಹುದು.

26 ದುಡಿಯುವವನು ಹೊಟ್ಟೆಪಾಡಿಗಾಗಿ ದುಡಿಯುತ್ತಾನೆ; ಹೊಟ್ಟೆಕಾಟವೆ ಸಾಕು ಅವನನ್ನು ದುಡಿಸಲಿಕ್ಕೆ.
27 ನೀಚನು ಕೇಡೆಂಬ ಗುಳಿಯನ್ನು ತೋಡುತ್ತಾನೆ; ಸುಡುವ ಬೆಂಕಿಯ ಜ್ವಾಲೆ ಅವನ ನಾಲಿಗೆ.
28 ತುಂಟನು ಜಗಳವನ್ನು ಹುಟ್ಟಿಸುತ್ತಾನೆ; ಚಾಡಿಕೋರನು ಮಿತ್ರರನ್ನು ಬೇರ್ಪಡಿಸುತ್ತಾನೆ.
29 ಹಿಂಸಾತ್ಮಕನು ನೆರೆಯವನನ್ನು ಮರುಳುಗೊಳಿಸುತ್ತಾನೆ; ಅವನನ್ನು ದುರ್ಮಾರ್ಗಕ್ಕೆ ಎಳೆಯುತ್ತಾನೆ.
30 ಕಣ್ಣು ಮಿಟುಕಿಸುವವನು ಕುಯುಕ್ತಿಯನ್ನು ಕಲ್ಪಿಸುತ್ತಾನೆ; ತುಟಿಕಚ್ಚುವವನು ಕೇಡನ್ನು ಸಾಧಿಸುತ್ತಾನೆ.
31 ನರೆಗೂದಲು ಸುಂದರ ಕಿರೀಟ, ಸನ್ನಡತೆಗೆ ಸಿಗುವ ಪ್ರತಿಫಲ.
32 ದೀರ್ಘಶಾಂತನು ಪರಾಕ್ರಮಶಾಲಿಗಿಂತ ಶ್ರೇಷ್ಠ; ತನ್ನನ್ನು ತಾನೆ ಗೆದ್ದವನು ಪಟ್ಟಣ ಗೆದ್ದವನಿಗಿಂತ ಬಲಿಷ್ಠ.
33 ಅದೃಷ್ಟದ ಚೀಟನ್ನು ಕುಲುಕಿ ಮಡಲಿಗೆ ಹಾಕಬಹುದು; ಆದರೆ ತೀರ್ಪು ಸರ್ವೇಶ್ವರನ ಕೈಯಲ್ಲಿರುವುದು.

**17** ಜಗಳ ತುಂಬಿದ ಮನೆಯಲ್ಲಿ ಹಬ್ಬದೂಟ ಮಾಡುವುದಕ್ಕಿಂತಲು ಶಾಂತಿ ಸಮಾಧಾನದಿಂದ ಕೂಡಿದ ಒಣ ತುತ್ತೇ ಲೇಸು.
2 ಜಾಣನಾದ ಆಳು ಮಾನಕಳೆದ ಮನೆಮಗನ ಮೇಲೆ ಅಧಿಕಾರ ನಡೆಸುವನು, ಮನೆಮಕ್ಕಳ ಬಾಧ್ಯತೆಯಲ್ಲೂ ಪಾಲುಗಾರನಾಗುವನು.
3 ಪುಟಕುಲುಮೆಗಳು ಬೆಳ್ಳಿಬಂಗಾರಗಳನ್ನು ಶೋಧಿಸುತ್ತವೆ; ಸರ್ವೇಶ್ವರನು ಹೃದಯಗಳನ್ನು ಶೋಧಿಸುತ್ತಾನೆ.
4 ಕೆಡುಕನು ಕೆಟ್ಟತುಟಿ ಆಡುವುದನ್ನು ಗಮನಿಸುತ್ತಾನೆ; ಸುಳ್ಳುಗಾರ ನಷ್ಟಮಾಡುವ ನಾಲಿಗೆಗೆ ಕಿವಿಗೊಡುತ್ತಾನೆ.
5 ಬಡವರನ್ನು ಗೇಲಿಮಾಡುವವನು ತನ್ನ ಸೃಷ್ಟಿಕರ್ತನನ್ನೆ ಹೀನೈಸುತ್ತಾನೆ; ಪರರ ಕಷ್ಟ ದುಃಖಗಳನ್ನು ನೋಡಿ ಹಿಗ್ಗುವವನು ದಂಡನೆಗೆ ಗುರಿಯಾಗುತ್ತಾನೆ.
6 ಮಕ್ಕಳ ಮಕ್ಕಳು ಮುದುಕರ ಮುಕುಟ; ಮಕ್ಕಳಿಗೆ ಹೆತ್ತವರೇ ಭೂಷಣ.
7 ಉತ್ತಮವಾದ ಮಾತು ಮೂರ್ಖನಿಗೆ ಹಿಡಿಸದು; ಸುಳ್ಳುಮಾತು ಉತ್ತಮನಿಗೆ ಮತ್ತೂ ಹಿಡಿಸದು.
8 ಕೊಡುವವನ ಕಣ್ಣಿಗೆ ಲಂಚವು ಚಿಂತಾಮಣಿಯಂತೆ; ಎತ್ತ ತಿರುಗಿದರತ್ತ ಅದರಿಂದ ಜಯವಂತೆ!
9 ತಪ್ಪನ್ನು ಮನ್ನಿಸುವವನು ಪ್ರೀತಿಯನ್ನು ಅರಸುತ್ತಾನೆ; ತಪ್ಪನ್ನು ಎತ್ತಿ ಆಡುವವನು ಆಪ್ತನನ್ನೂ ಕಳೆದುಕೊಳ್ಳುತ್ತಾನೆ.
10 ಮಂದಮತಿಗೆ ನೂರು ಗುದ್ದು; ಬುದ್ಧಿವಂತನಿಗೆ ಒಂದು ಮಾತು.
11 ದುರಾತ್ಮನ ಕಣ್ಣೆಲ್ಲಾ ದಂಗೆ ಏಳುವುದರ ಮೇಲೆ; ಕ್ರೂರದೂತನು ಎರಗಿ ಬರುವನು ಅವನ ಮೇಲೆ.
12 ಮೂರ್ಖತನದಲ್ಲಿ ಮುಳುಗಿರುವ ಮೂಢನಿಗೆ ಎದುರಾಗುವುದಕ್ಕಿಂತಲು ಮರಿಗಳನ್ನು ಕಳೆದುಕೊಂಡ ಕರಡಿಗೆ ಎದುರಾಗುವುದು ಲೇಸು.
13 ಯಾರು ಉಪಕಾರಕ್ಕೆ ಅಪಕಾರ ಮಾಡುತ್ತಾರೊ ಅಂಥವರ ಮನೆಯಿಂದ ಕೇಡು ತೊಲಗದು.
14 ವಾಗ್ವಾದವು ಏರಿಗೆ ಬಿರುಕು ಬಿದ್ದಂತೆ; ಸಿಟ್ಟೇರುವುದಕ್ಕೆ ಮುಂಚೆ ಜಗಳವನ್ನು ತೊರೆದು ಬಿಡು.
15 ದುರ್ಜನರನ್ನು ಸಜ್ಜನರೆಂದೂ, ಸಜ್ಜನರನ್ನು ದುರ್ಜನರೆಂದೂ ನಿರ್ಣಯಿಸುವ ಇಬ್ಬರೂ ಸರ್ವೇಶ್ವರನಿಗೆ ಅಸಹ್ಯರು.
16 ಜ್ಞಾನವನ್ನು ಕೊಳ್ಳಲು ಮೂಢನ ಕೈಯಲ್ಲಿ ಹಣವೇಕೆ? ಇದನ್ನು ಕೊಳ್ಳಲು ಬೇಕಾದ ಬುದ್ಧಿಯೇ ಅವನಿಗಿಲ್ಲವಲ್ಲಾ !
17 ಮಿತ್ರನ ಪ್ರೀತಿ ನಿರಂತರ; ಕಷ್ಟಕ್ಕಾದವನೆ ಹುಟ್ಟುನಂಟ.
18 ಬೇರೆಯವನ ಸಾಲಕ್ಕಾಗಿ ಕೈ ಮೇಲೆ ಕೈ ಹಾಕಿ ಹೊಣೆಯಾಗಿ ನಿಂತವನು ಬುದ್ಧಿಹೀನನೆ ಸರಿ.
19 ಕಲಹಪ್ರಿಯನು ಪಾಪಪ್ರಿಯನು; ಕದವನ್ನು ಎತ್ತರಿಸಿದವನು ಕೇಡನ್ನು ಬರಮಾಡಿಕೊಳ್ಳುವನು.

20 ವಕ್ರಮನಸ್ಸುಳ್ಳುವನು ಒಳಿತನ್ನು ಕಾಣನು; ಕೆಟ್ಟ ನಾಲಿಗೆಯವನು ಸಂಕಟಕ್ಕೆ ಸಿಕ್ಕಿಕೊಳ್ಳುವನು.
21 ಹೆಡ್ಡನನ್ನು ಹೆತ್ತವನಿಗೆ ವ್ಯಥೆ; ಮೂರ್ಖನ ತಂದೆಗೆ ಕಡುಚಿಂತೆ.
22 ಹರ್ಷ ಹೃದಯ ಒಳ್ಳೆಯ ಔಷಧ; ಕುಗ್ಗಿದ ಮನದಿಂದ ಅಸ್ಥಿಪಂಜರ.
23 ಲಂಚವನ್ನು ಗುಟ್ಟಾಗಿ ಪಡೆದ ದುಷ್ಟನು ಡೊಂಕಾಗಿಸುತ್ತಾನೆ ನ್ಯಾಯ ನಿರ್ಣಯವನ್ನು.
24 ವಿವೇಕಿಗೆ ಜ್ಞಾನವೇ ಗುರಿಧ್ಯೇಯ; ಮೂಢನ ದೃಷ್ಟಿ ದಿಗಂತದಷ್ಟು ವಿಶಾಲ.
25 ಬುದ್ಧಿಹೀನನಾದ ಮಗನು ತಂದೆಗೆ ಕಿರಿಕಿರಿ; ಹೆತ್ತತಾಯಿಗೆ ಅವನು ಕರಕರೆ.
26 ನೀತಿವಂತನಿಗೆ ದಂಡ ಸರಿಯಲ್ಲ; ಸಜ್ಜನನಿಗೆ ಶಿಕ್ಷೆ ನ್ಯಾಯವಲ್ಲ.
27 ಹಿಡಿದು ಮಾತಾಡುವವನು ಜ್ಞಾನಿ; ಶಾಂತ ಗುಣವುಳ್ಳವನು ವಿವೇಕಿ.
28 ಮೂಢನು ಕೂಡ ಮೌನತಾಳಿದರೆ ಜ್ಞಾನಿಯೆನಿಸಿಕೊಳ್ಳುವನು; ತುಟಿಗಳನ್ನು ಬಿಗಿ ಹಿಡಿದರೆ ವಿವೇಕಿ ಎನಿಸಿಕೊಳ್ಳುವನು.

**18** ಬೇರೆಯವರೊಡನೆ ಸೇರದವನು ಸ್ವೇಚ್ಛಾನುಸಾರ ನಡೆಯುವನು; ಇತರರು ಸುಜ್ಞಾನ ವೆನ್ನುವುದನ್ನೇ ವಿರೋಧಿಸುವನು.
2 ಮತಿಗೆಟ್ಟವನಿಗೆ ವಿವೇಕವು ಅನಿಷ್ಟ; ಸ್ವರ್ಥವನ್ನು ಪ್ರಕಟಿಸುವುದೆಂದರೆ ಅವನಿಗೆ ಬಲು ಇಷ್ಟ.
3 ದುರಾಚಾರವಿದ್ದಲ್ಲಿ ತಾತ್ಸಾರ; ಮಾನ ಕಳೆದುಕೊಂಡಲ್ಲಿ ಧಿಕ್ಕಾರ.
4 ಸತ್ಪುರುಷನ ನುಡಿ ಜಲನಿಧಿ; ಜ್ಞಾನದ ಬುಗ್ಗೆ ಹರಿಯುವ ತೊರೆ.
5 ದುಷ್ಟನಿಗೆ ಪಕ್ಷಪಾತ ತೋರುವುದು ಸಲ್ಲ; ಸಜ್ಜನನಿಗೆ ನ್ಯಾಯ ತಪ್ಪಿಸುವುದು ಸರಿಯಲ್ಲ.
6 ಕಲಹವೆಬ್ಬಿಸುವುದು ಬುದ್ಧಿಹೀನನ ತುಟಿ; ಪೆಟ್ಟಿಗಾಗಿ ಕೂಗಿಕೊಳ್ಳುವುದು ಅವನ ಬಾಯಿ.
7 ಬುದ್ಧಿಹೀನನಿಗೆ ಬಾಯೇ ನಾಶ, ತುಟಿಗಳೇ ಅವನಿಗೆ ಪಾಶ.
8 ಚಾಡಿಕೋರನ ಮಾತುಗಳು ರುಚಿಕರವಾದ ತುತ್ತುಗಳು; ಅವು ಅಡಿಹೊಟ್ಟೆಗೆ ಇಳಿಯುವ ಕವಳಗಳು.
9 ಸೋಮಾರಿಯಾದ ಕೆಲಸಗಳ್ಳನು, ಕೇಡುಕನಿಗೆ ರಕ್ತಸಂಬಂಧಿಕನು.
10 ಸರ್ವೇಶ್ವರನ ನಾಮ ಬಲವಾದ ಗೋಪುರ; ಅದರೊಳಗೆ ಓಡಿ ಆಶ್ರಯ ಪಡೆದರೆ ಸುಭದ್ರ.
11 ಐಶ್ವರ್ಯವಂತನಿಗೆ ಹಣವೆ ಬಲವಾದ ಕೋಟೆ; ಅದುವೇ ಎತ್ತರವಾದ ಪೌಳಿಗೋಡೆ.
12 ಭಂಗಕ್ಕೆ ಮುಂಚೆ ಗರ್ವದ ಗುಂಡಿಗೆ; ಗೌರವಕ್ಕೆ ಮೊದಲು ನಮ್ರತೆ.
13 ಕೇಳಿಸಿಕೊಳ್ಳದೆ ಉತ್ತರಕೊಡುವವನು ಹುಚ್ಚ; ನಿಂದೆ ಅವಮಾನಕ್ಕೆ ಅವನು ಯೋಗ್ಯ.
14 ಆತ್ಮವು ವ್ಯಾಧಿಯನ್ನು ಸಹಿಸಬಲ್ಲದು; ಆತ್ಮವೇ ನೊಂದರೆ ಸಹಿಸುವವರಾರು?
15 ಬುದ್ಧಿವಂತನ ಮನಸ್ಸು ತಿಳುವಳಿಕೆಯನ್ನು ಗಳಿಸುತ್ತದೆ; ಜ್ಞಾನಿಯ ಕಿವಿಯು ತಿಳುವಳಿಕೆಯನ್ನು ಹುಡುಕುತ್ತದೆ.
16 ಕಾಣಿಕೆ ತರುವವನಿಗೆ ಬಾಗಿಲು ತೆರೆಯುತ್ತದೆ; ಶ್ರೀಮಂತನ ಸಾನ್ನಿಧ್ಯಕ್ಕೂ ಅದು ನಡೆಸುತ್ತದೆ.
17 ಮೊದಲು ವಾದಿಸುವವನು ನ್ಯಾಯವಾದಿಯೆಂದೇ ತೋರುವನು; ಅವನ ಬಂಡವಾಳ ಗೊತ್ತಾಗುವುದು ಪ್ರತಿವಾದಿ ಎದ್ದ ಮೇಲೆ.
18 ಚೀಟುಹಾಕುವುದರಿಂದ ವ್ಯಾಜ್ಯಗಳ ಶಮನ; ಜಟ್ಟಿಗಳ ನಡುವೆ ಕಾಳಗದ ವಿರಾಮ.
19 ಸಹಾಯ ಹೊಂದಿದ ಸೋದರ ದುರ್ಗಕ್ಕಿಂತಲು ದುಸ್ತರ; ಅವನೊಡನೆ ಜಗಳ ಕೋಟೆ ಮನೆಗೆ ಹಾಕಿದ ಅಗುಳಿ.
20 ಬಾಯಿಬಿತ್ತಿದ ಬೆಳೆಯಿಂದ ಮನುಷ್ಯ ಹೊಟ್ಟೆ ತುಂಬುವನು; ತುಟಿಗಳು ಕೊಟ್ಟ ಫಲದಿಂದ ತಿಂದು ತೇಗುವನು.
21 ಜನನ ಮರಣಗಳ ಶಕ್ತಿ ನಾಲಿಗೆಗಿದೆ; ವಚನ ಪ್ರಿಯರು ಅದರ ಫಲವನ್ನು ರುಚಿಸುವರು.
22 ಮಡದಿಯನ್ನು ಪಡೆಯುವುದು ಪುಣ್ಯ ಪಡೆದ ಹಾಗೆ, ಅದು ಸರ್ವೇಶ್ವರನ ಅನುಗ್ರಹ ಪಡೆದ ಹಾಗೆ.
23 ಬಡವರು ಮಾಡುವ ಬಿನ್ನಹ ನಮ್ರ; ಬಲ್ಲಿದರು ಕೊಡುವ ಬದಲು ಉಗ್ರ.

24 ಗೆಳೆಯರಂತೆ ನಟಿಸಿ ನಾಶಗೊಳಿಸುವವರು ಅನೇಕರುಂಟು; ಸಹೋದರನಿಗಿಂತ ಪ್ರಿಯನಾದ ಸ್ನೇಹಿತನೂ ಉಂಟು.

**19** ಕಪಟವಾಗಿ ಮಾತಾಡುವ ಮೂಢನಿಗಿಂತ ನಿರ್ದೋಷಿಯಾಗಿ ನಡೆವ ಬಡವನೇ ಲೇಸು.

2 ಅರಿವಿಲ್ಲದ ಹುರುಪು ಸರಿಯಲ್ಲ; ದುಡುಕುವ ಕಾಲು ದಾರಿತಪ್ಪುವುದು ದಿಟ.

3 ಮನುಷ್ಯನ ಬಾಳಿನ ಅಳಿವು ತನ್ನ ಮೂರ್ಖತನದಿಂದ; ಆದರೂ ಅವನು ಸಿಡಿದೇಳುವುದು ಸರ್ವೇಶ್ವರನ ವಿರುದ್ಧ.

4 ಧನವಂತನಿಗೆ ಸ್ನೇಹಿತರು ಬಹು ಮಂದಿ; ಬಡವನಿಗಿದ್ದ ಗೆಳೆಯನೂ ಪರಾರಿ.

5 ಕಳ್ಳಸಾಕ್ಷಿ ದಂಡನೆಯನ್ನು ಪಡೆಯದಿರನು; ಸುಳ್ಳಾಡುವವನು ಅದನ್ನು ತಪ್ಪಿಸಿಕೊಳ್ಳಲಾರನು.

6 ಉದಾರಿಯ ಕೃಪೆಕೋರುವವರು ಅನೇಕರು; ದಾನಶೂರನಿಗೆ ಎಲ್ಲರು ಸ್ನೇಹಿತರು.

7 ಬಡವನನ್ನು ಬಂಧುಗಳೆಲ್ಲರು ಹಗೆಮಾಡುವರು; ಮಿತ್ರರೋ ಖರೆಯಾಗಿ ಅವನಿಗೆ ದೂರವಾಗುವರು; ಹಿಂಬಾಲಿಸಿ ಬರುವವರು ಅವನ ಬಾಯಿ ಮಾತನ್ನು ನಂಬರು.

8 ಬುದ್ಧಿಯನ್ನು ಗಳಿಸುವವನು ತನಗೆ ತಾನೇ ಗೆಳೆಯನು; ವಿವೇಕವನ್ನು ಕಾಪಾಡುವವನು ಪಡೆಯುವನು ಏಳಿಗೆಯನ್ನು.

9 ಕಳ್ಳಸಾಕ್ಷಿ ದಂಡನೆಯನ್ನು ಹೊಂದದಿರನು; ಸುಳ್ಳಾಡುವವನು ಹಾಳಾಗಿ ಹೋಗುವನು.

10 ಭೋಗಜೀವನ ಬುದ್ಧಿಹೀನನಿಗೆ ಯೋಗ್ಯವಲ್ಲ; ದೊರೆಗಳ ಮೇಲೆ ದೊರೆತನ ದಾಸನಿಗೆ ತಕ್ಕುದಲ್ಲ.

11 ವಿವೇಕಿಯು ಸಿಟ್ಟುಗೊಳ್ಳಲು ತಡಮಾಡುತ್ತಾನೆ; ತಪ್ಪನ್ನು ಕ್ಷಮಿಸುವುದೆಂದರೆ ಅವನಿಗೆ ಹೆಮ್ಮೆ.

12 ರಾಜನ ರೋಷ ಸಿಂಹದ ಗರ್ಜನೆಯು; ಅವನ ದಯೆ ಹುಲ್ಲಿನ ಮೇಲಣ ಇಬ್ಬನಿಯು.

13 ಬುದ್ಧಿಹೀನನಾದ ಮಗ ತಂದೆಗೆ ತರುತ್ತಾನೆ ಹಾನಿ; ಜಗಳವಾಡುವ ಹೆಂಡತಿ ತಟತಟನೆ ತೊಟ್ಟಿಕ್ಕುವ ಹನಿ.

14 ಮನೆಮಾರು, ಆಸ್ತಿಪಾಸ್ತಿ ಬರುತ್ತವೆ ಪಿತ್ರಾರ್ಜಿತವಾಗಿ; ವಿವೇಕಿಯಾದ ಹೆಂಡತಿ ಸಿಕ್ಕುವುದು ಸರ್ವೇಶ್ವರನ ಅನುಗ್ರಹವಾಗಿ.

15 ಮೈಗಳ್ಳತನ ಗಾಢನಿದ್ರೆಯಲ್ಲಿ ಮುಳುಗಿಸುವುದು; ಸೋಮಾರಿಯು ಹಸಿವಿನಿಂದ ಬಳಲುವನು.

16 ದೈವಾಜ್ಞೆಯನ್ನು ಪಾಲಿಸುವವನು ತನ್ನನ್ನೇ ಕಾಪಾಡಿಕೊಳ್ಳುವನು; ದೈವವಾರ್ತೆಯ ಬಗ್ಗೆ ಅಜಾಗ್ರತನಾಗಿರುವವನು ಸಾಯುವನು.

17 ಬಡವರಿಗೆ ತೋರುವ ದಯೆ ಸರ್ವೇಶ್ವರನಿಗೆ ಕೊಟ್ಟ ಸಾಲ; ಆ ಉಪಕಾರಕ್ಕೆ ಸರ್ವೇಶ್ವರನಿಂದಲೆ ಪ್ರತ್ಯುಪಕಾರ.

18 ತಿದ್ದಿಕೊಳ್ಳುವನೆಂಬ ನಂಬಿಕೆಯಿರುವಾಗಲೆ ಮಗನನ್ನು ಶಿಕ್ಷಿಸು; ಇಲ್ಲವಾದರೆ ಅವನ ಅಳಿವಿಗೆ ನೀನೇ ಕಾರಣವಾಗುವೆ.

19 ಕಡುಕೋಪಿ ದಂಡನೆಯನ್ನು ಅನುಭವಿಸಲಿ ಬಿಡು; ಒಮ್ಮೆ ಬಿಡಿಸಿದರೆ, ಬಾರಿಬಾರಿಗೂ ಬಿಡಿಸಬೇಕಾಗುವುದು.

30 ಬುದ್ಧಿವಾದವನ್ನು ಕೇಳು, ತಿದ್ದುಪಾಟನ್ನು ಅಂಗೀಕರಿಸು; ಹಾಗೆ ಮಾಡಿದರೆ ಮುಂದಕ್ಕೆ ಜ್ಞಾನಿಯಾಗಿ ಬಾಳುವೆ.

21 ಮನುಜನ ಮನದಲ್ಲಿ ಏಳುವ ಯೋಜನೆಗಳು ಹಲವು; ಈಡೇರುವುದಾದರೊ ಸರ್ವೇಶ್ವರನ ಸಂಕಲ್ಪವು.

22 ಅತಿಯಾಸೆ ಗತಿಕೇಡು; ಇದ್ದೂ ಇಲ್ಲವೆನ್ನುವವನಿಗಿಂತ ಏನೂ ಇಲ್ಲದವನೆ ಲೇಸು.

23 ಸರ್ವೇಶ್ವರನಲ್ಲಿ ಭಯಭಕ್ತಿಯುಳ್ಳವನಿಗೆ ಜೀವಪ್ರಾಪ್ತಿ; ಅಂಥವನು ಸಂತುಷ್ಟನಾಗಿ ಬಾಳುವನು, ಅವನಿಗೆ ಕೇಡು ಸಂಭವಿಸದು.

24 ಮೈಗಳ್ಳ ಕೈ ಹಾಕುತ್ತಾನೆ ತುತ್ತಿಗೆ; ಆದರೆ ಎತ್ತಲಾರ ಬಾಯ ಹತ್ತಿರಕ್ಕೆ.

25 ಕುಚೋದ್ಯನಿಗೆ ಹೊಡೆ, ಮುಗ್ಧರು ಅದನ್ನು ಕಂಡು ಜಾಣರಾಗುವರು; ಜ್ಞಾನಿಯನ್ನು ಗದರಿಸಿದರೆ ಸಾಕು, ಅವನು ಮತ್ತಷ್ಟು ಜ್ಞಾನಿಯಾಗುವನು.
26 ತಂದೆಯನ್ನು ಹೊಡೆದು, ತಾಯಿಯನ್ನು ಓಡಿಸುವ ಮಗನು ನಿಂದೆ ಅವಮಾನಗಳಿಗೆ ತುತ್ತಾಗುವನು.
27 ಮಗನೇ, ಉಪದೇಶ ಕೇಳುವುದನ್ನು ನಿಲ್ಲಿಸಬೇಡ; ನಿಲ್ಲಿಸಿದೆಯಾದರೆ ಬುದ್ಧಿಮಾತಿನಿಂದ ವಂಚಿತನಾಗುವೆ.
28 ನೀಚಸಾಕ್ಷಿ ನ್ಯಾಯತೀರ್ಪನ್ನು ಮರ್ಯಾದಿಸನು; ದುಷ್ಟಸಾಕ್ಷಿ ದ್ರೋಹವನ್ನೂ ನುಂಗಿ ಬಿಡುವನು.
29 ಕುಚೋದ್ಯನಿಗೆ ಕಾದಿದೆ ನ್ಯಾಯತೀರ್ಪು; ದಡ್ಡನ ಬೆನ್ನಿಗೆ ಬೀಳಲಿದೆ ದೊಣ್ಣೆಪೆಟ್ಟು.

**20** ದ್ರಾಕ್ಷಾರಸದಿಂದ ನಗೆಯಾಟ, ಮದ್ಯದಿಂದ ಕೂಗಾಟ; ಇವುಗಳಿಂದ ತೂರಾಟಕ್ಕೆ ತುತ್ತಾಗುವವನು ಜ್ಞಾನಿಯಲ್ಲ.
2 ರಾಜನು ಗರ್ಜಿಸುವ ಸಿಂಹದಂತೆ ಭಯಂಕರನು; ಅವನನ್ನು ಕೆಣಕುವವನು ಪ್ರಾಣಕ್ಕೆ ಅಪಾಯ ತಂದುಕೊಳ್ವನು.
3 ಕಲಹಕ್ಕೆ ದೂರವಿರುವವನು ಮಾನಕ್ಕೆ ಯೋಗ್ಯನು; ಕಲಹಕ್ಕೆ ಕೈಹಾಕುವ ಪ್ರತಿಯೊಬ್ಬನು ಮೂರ್ಖನು.
4 ಮೈಗಳ್ಳನು ಮಳೆಗಾಲದಲ್ಲೂ ಹೊಲ ಉಳಲಾರನು; ಸುಗ್ಗಿಕಾಲದಲ್ಲಿ ಅಂಗಲಾಚಿದರೂ ಅವನಿಗೆ ಬೆಳೆಸಿಗಲಾರದು.
5 ಮಾನವನ ಅಂತರಾಲೋಚನೆಗಳು ಆಳವಾದ ಜಲನಿಧಿ; ವಿವೇಕಿಯಾದ ವ್ಯಕ್ತಿ ಅದನ್ನು ಹೊರತೆಗೆಯಬಲ್ಲ ಸೇದಿ.
6 ಸ್ನೇಹಿತರೆಂದು ಹೇಳಿಕೊಳ್ಳುವವರು ಬಹುಮಂದಿ; ಆದರೆ ನಂಬಿಗಸ್ತ ಸ್ನೇಹಿತನು ಸಿಗುವುದೆಲ್ಲಿ?
7 ನಿರ್ದೋಷಿಗಳಾಗಿ ನಡೆಯುತ್ತಾರೆ ನೀತಿವಂತರು; ಅವರು ಗತಿಸಿದ ಮೇಲೂ ಅವರ ಸಂತತಿಯವರು ಭಾಗ್ಯವಂತರು.
8 ರಾಜನು ನ್ಯಾಯಾಸನದ ಮೇಲೆ ವಿರಾಜಿಸುವಾಗ ಕೆಟ್ಟತನವನ್ನು ತೂರಿಬಿಡುವನು ದೃಷ್ಟಿಯಿಂದ.
9 "ಹೃದಯವನ್ನು ಪರಿಶುದ್ಧವಾಗಿ ಇಟ್ಟುಕೊಂಡಿದ್ದೇನೆ; ಪಾಪವಿಮುಕ್ತನಾಗಿ ಪವಿತ್ರನಾಗಿದ್ದೇನೆ" ಎಂದು ಹೇಳಬಲ್ಲವನಾರು?
10 ಕಳ್ಳ ತೂಕಕಲ್ಲುಗಳನ್ನೂ ಕಳ್ಳ ಅಳತೆಪಾತ್ರೆಗಳನ್ನೂ ಬಳಸುವವರನ್ನು ಕಂಡರೆ ಸರ್ವೇಶ್ವರನಿಗೆ ಅಸಹ್ಯ.
11 ಹುಡುಗನಾದರೂ ನಡತೆಯಲ್ಲೇ ತೋರ್ಪಡಿಸಿಕೊಳ್ಳುವನು ತನ್ನ ಗುಣ ಶುದ್ಧವೋ, ಸತ್ಯವೋ ಎಂಬುದನ್ನು.
12 ಕೇಳುವ ಕಿವಿ, ನೋಡುವ ಕಣ್ಣು ಇವೆರಡನ್ನು ಉಂಟುಮಾಡಿದವ ಸರ್ವೇಶ್ವರ.
13 ನಿದ್ದೆಯಲ್ಲೆ ನಿರತನಾಗಿರಬೇಡ, ಬಡವನಾಗಿ ಬಿಡುವೆ. ಕಣ್ಣು ತೆರೆದು ದುಡಿ, ಹೊಟ್ಟೆ ತುಂಬ ಊಟ ಪಡೆವೆ.
14 ಕೊಳ್ಳುವಾಗ 'ಅದು ಚೆನ್ನಾಗಿಲ್ಲ, ಇದು ಚೆನ್ನಾಗಿಲ್ಲ' ಅನ್ನುತ್ತಾನೆ; ಕೊಂಡಾದ ಮೇಲೆ ಮಾಡಿದ ಚೌಕಾಶಿಗಾಗಿ ಹೆಚ್ಚಳ ಪಡುತ್ತಾನೆ.
15 ಹೊನ್ನು ಉಂಟು, ಹವಳದ ರಾಶಿ ಉಂಟು; ಆದರೆ ತಿಳುವಳಿಕೆಯುಳ್ಳ ತುಟಿಗಳು ಬೆಲೆಮೀರಿದ ಆಭರಣಗಳು.
16 ಅಪರಿಚಿತನಿಗೆ ಹೊಣೆಯಾದವನ ಬಟ್ಟೆ ಕಿತ್ತುಕೊ; ಅಪರಿಚಿತಳಿಗೆ ಹೊಣೆ ನಿಲ್ಲುವವನನ್ನೆ ಒತ್ತೆ ಇಟ್ಟುಕೊ.
17 ವಂಚಿಸಿ ಪಡೆದ ಊಟ ಬಲು ರುಚಿ; ಆಮೇಲೆ ಬಾಯಿ ತುಂಬ ಕಲ್ಲುಜಲ್ಲಿ.
18 ಉದ್ದೇಶಗಳು ಕೈಗೂಡುವುವು ಹಿತಾಲೋಚನೆಯಿಂದ; ಬುದ್ಧಿವಂತರ ಆಲೋಚನೆ ಕೇಳದೆ ಹೂಡಬೇಡ ಯುದ್ಧ.
19 ಗುಟ್ಟನ್ನು ರಟ್ಟು ಮಾಡದಿರನು ಚಾಡಿಕೋರ; ತುಟಿ ಬಿಗಿಹಿಡಿಯದವನ ಗೊಡವೆ ನಿನಗೆ ಬೇಡ.

20 ಹೆತ್ತವರನ್ನು ಶಪಿಸುವವನ ದೀಪ ಕಾರಿರುಳಲ್ಲೆ ಆರಿಹೋಗುವುದು ಖಚಿತ.

21 ಬೇಗಬೇಗನೆ ಬಾಚಿಕೊಂಡ ಮೊದಲ ಸೊತ್ತು, ಕೊನೆಯಲ್ಲಿ ಕಳೆದು ಹೋಗುವುದು ನಿಶ್ಚಿತ.

22 "ಕೇಡಿಗೆ ಕೇಡು" ಎಂದು ಮುಯ್ಯಿತೀರಿಸುವುದು ಬೇಡ; ಸರ್ವೇಶ್ವರನಲ್ಲಿ ಭರವಸೆಯಿಡು, ಆತ ನಿನ್ನ ಕೈ ಬಿಡ.

23 ತಾರತಮ್ಯದ ತೂಕದ ಕಲ್ಲು ಸರ್ವೇಶ್ವರನಿಗೆ ಅಸಹ್ಯ; ಮೋಸದ ತಕ್ಕಡಿಯನ್ನು ಬಳಸುವುದು ಸರಿಯಲ್ಲ.

24 ಮಾನವನ ಸ್ಥಿತಿಗತಿ ಸರ್ವೇಶ್ವರನ ಏರ್ಪಾಡು; ಮನುಷ್ಯ ತನ್ನ ಮಾರ್ಗವನ್ನು ತಾನೇ ಹೇಗೆ ತಿಳಿದಾನು?

25 ದುಡುಕಿ ದೇವರಿಗೆ ಮುಡಿಕಟ್ಟುವುದು, ಹರಕೆ ಹೊತ್ತ ಮೇಲೆ ವಿಚಾರಮಾಡುವುದು, ಉರುಳಿಗೆ ಸಿಕ್ಕಿಕೊಂಡಂತೆ ಆಗುವುದು.

26 ಜ್ಞಾನಿಯಾದ ಅರಸ ಚದರಿಸಿಬಿಡುವನು ದುಷ್ಟರನ್ನು; ಅವರ ಮೇಲೆ ಉರುಳಿಸುವನು ಕಣದ ಗುಂಡನ್ನು.

27 ಮನುಷ್ಯನ ಆತ್ಮ ಸರ್ವೇಶ್ವರನು ಕೊಟ್ಟ ದೀಪ; ಅಂತರಂಗವನ್ನೆಲ್ಲ ಶೋಧಿಸಬಲ್ಲುದು ಅದರ ಪ್ರಕಾಶ.

28 ಪ್ರೀತಿ ಸತ್ಯತೆಗಳು ರಾಜನನ್ನು ಕಾಪಾಡುವ ಕವಚ; ಕರುಣೆಯೇ ಅವನ ಸಿಂಹಾಸನಕ್ಕೆ ಸ್ಥಿರಾಧಾರ.

29 ಯುವಕರಿಗೆ ಬಲವೆ ಭೂಷಣ; ಮುದುಕರಿಗೆ ನರೆಯೆ ಕಿರೀಟ.

30 ಗಾಯಗೊಳಿಸುವ ಏಟು ಕೆಟ್ಟದ್ದನ್ನು ತೊಳೆಯಬಲ್ಲ ಮದ್ದು; ಅಂತರಂಗವನ್ನೂ ಮುಟ್ಟಬಲ್ಲದು ಆ ಪೆಟ್ಟು.

**21** ರಾಜನ ಹೃದಯ ಸರ್ವೇಶ್ವರನ ಕೈಯಲ್ಲಿ; ತಿರುಗಿಸಬಲ್ಲ ಆತ ಅದನ್ನು ನೀರಿನ ಕಾಲುವೆಯ ಪರಿ.

2 ಮಾನವರ ನಡವಳಿಕೆ ಅವರವರ ನೋಟಕ್ಕೆ ನೇರ; ಅವರ ಅಂತರಂಗವನ್ನು ವೀಕ್ಷಿಸಬಲ್ಲವನೋ ಸರ್ವೇಶ್ವರ.

3 ನ್ಯಾಯನೀತಿಗಳು ಬಲಿಯರ್ಪಣೆಗಿಂತ ಶ್ರೇಷ್ಠ; ಸರ್ವೇಶ್ವರನಿಗೆ ಅವು ಬಲು ಇಷ್ಟ.

4 ಗರ್ವದ ನೋಟ, ಉಬ್ಬಿದ ಎದೆ, ಇವು ದುರುಳರೊಳು ಕಾಣುವ ಪಾಪದ ಕಿಡಿಗಳು.

5 ಶ್ರಮಜೀವಿಗಳ ಯೋಜನೆಯಿಂದ ಸಮೃದ್ಧಿ; ತಾಳ್ಮೆಯಿಲ್ಲದ ತ್ವರೆಯಿಂದ ಅಧೋಗತಿ.

6 ಹಬೆಯಂತೆ ನಾಪತ್ತೆ ಸುಳ್ಳಿನಿಂದ ಸಿಕ್ಕಿದ ಸಂಪತ್ತು; ಮೃತ್ಯುಪಾಶದಂತೆ ಅದೊಂದು ವಿಪತ್ತು.

7 ದುಷ್ಟರು ನ್ಯಾಯವನ್ನು ನಿರಾಕರಿಸುವ ಕಾರಣ, ಅವರನ್ನೇ ಎಳೆದೊಯ್ಯುವುದು ಅವರ ಹಿಂಸಾಚಾರ.

8 ದೋಷಿಯ ದಾರಿ ಸೊಟ್ಟಗೆ; ದೋಷರಹಿತನ ನಡತೆ ನೆಟ್ಟಗೆ.

9 ಜಗಳಗಂಟಿಯೊಡನೆ ಮಹಡಿ ಮನೆಯಲ್ಲಿರುವುದಕ್ಕಿಂತ ಗುಡಿಸಲಿನ ಮೂಲೆಯಲ್ಲಿ ಒಂಟಿಯಾಗಿ ವಾಸಿಸುವುದು ಲೇಸು.

10 ದುರಾತ್ಮನ ಮನಸ್ಸು ಕೇಡಿನ ಮೇಲೆ; ದಯೆತೋರಿಸನಾತ ನೆರೆಯವನ ಮೇಲೆ.

11 ಕುಚೋದ್ಯನಿಗೆ ದಂಡನೆಯಾದರೆ ಮುಗ್ಧನಿಗೆ ಜ್ಞಾನಗಳಿಗೆ; ಜ್ಞಾನಿಗೆ ಶಿಕ್ಷೆಯಾದರೆ ತಾನೆ ಹೊಂದುವನು ತಿಳುವಳಿಕೆ.

12 ಸತ್ಯಸ್ವರೂಪನ ದೃಷ್ಟಿ ದುಷ್ಟರ ಮನೆಯ ಮೇಲೆ; ಆ ದುರುಳರನ್ನು ದಬ್ಬಿಬಿಡುವನು ಕೇಡಿಗೆ.

13 ಬಡವನ ಮೊರೆಗೆ ಕಿವಿ ಮುಚ್ಚಿಕೊಳ್ಳುವವನೇ ನೀನೇ ಮೊರೆಯಿಡುವಾಗ ಉತ್ತರ ಕೊಡುವವರಾರು ನಿನಗೆ?

14 ಗುಟ್ಟಾಗಿ ಬಹುಮಾನ ಕೊಟ್ಟು ಸಿಟ್ಟನ್ನು ಅಡಗಿಸುತ್ತಾರೆ; ಮಡಿಲಲ್ಲಿ ಲಂಚವನ್ನು ಮುಚ್ಚಿಟ್ಟು ಕೋಪವನ್ನು ಆರಿಸುತ್ತಾರೆ.

15 ನ್ಯಾಯವಾದ ತೀರ್ಪಿನಿಂದ ಸಜ್ಜನರಿಗೆ ಸಂತಸ; ದುರ್ಜನರಿಗಾದರೊ ಅದು ತರುತ್ತದೆ ಸಂಕಟ.

16 ಬುದ್ಧಿಮಾರ್ಗ ಬಿಟ್ಟು ನಡೆದವನು ಪ್ರೇತಗಳ ನಡುವೆ ವಿಶ್ರಾಂತಿ ಪಡೆಯುವನು.

17 ಭೋಗಾಸಕ್ತನು ಬಡವನಾಗುವನು, ಮದ್ಯ ಸುಗಂಧಗಳನ್ನು ಬಯಸುವವನು ಧನವಂತನಾಗನು.
18 ದುರ್ಜನರು ಸಜ್ಜನರಿಗೆ ದ್ರೋಹಿಗಳು; ನೀತಿವಂತರಿಗೆ ಮಾಡಲಾಶಿಸುವ ಕೇಡಿಗೆ ತಾವೇ ಈಡಾಗುವರು.
19 ಕಾಡುವ ಜಗಳಗಂಟಿಯ ಸಹವಾಸಕ್ಕಿಂತಲು ಕಾಡಿನಲ್ಲಿ ಒಂಟಿಯಾಗಿ ವಾಸಿಸುವುದೇ ಲೇಸು.
20 ಬುದ್ಧಿವಂತನ ಮನೆಯ ಸಿರಿ, ಎಣ್ಣೆ ಬೆಣ್ಣೆ; ಬುದ್ಧಿಹೀನನು ನುಂಗಿಬಿಡುವನು ಸರ್ವಸ್ವವನ್ನೆ.
21 ನೀತಿ ಪ್ರೀತಿ ಪಾಲಿಸುವವನಿಗೆ ಲಭಿಸುವುದು ಆಯುಸ್ಸು ಕೀರ್ತಿ, ದೊಡ್ಡಸ್ತಿಕೆ.
22 ಜ್ಞಾನಿ ಹಿಡಿಯಬಲ್ಲನು ಬಲಿಷ್ಠರ ಪಟ್ಟಣವನ್ನು, ಕೆಡವಬಲ್ಲನು ಅವರ ಬಲವಾದ ಕೋಟೆಯನ್ನು.
23 ಬಾಯನ್ನೂ ನಾಲಿಗೆಯನ್ನೂ ಕಾಯಬಲ್ಲವನು ಜಯಿಸುವನು ತೊಂದರೆ ತಾಪತ್ರಯಗಳನ್ನು.
24 ಸೊಕ್ಕೇರಿದ ಗರ್ವಿ ಕುಚೋದ್ಯನೆನಿಸಿಕೊಳ್ಳುವನು; ಅಹಂಕಾರ, ಮದಮತ್ಸರಗಳಿಂದ ಅವನು ವರ್ತಿಸುವನು.
25 ಮೈಗಳ್ಳನನ್ನು ಕೊಲ್ಲುವುದು ಅವನ ಇಚ್ಛೆಯೆ; ಬಗ್ಗದು ಅವನ ಕೈ ದುಡಿಮೆಗೆ.
26 ಇಲ್ಲವೆನ್ನದೆ ಕೊಡುವವರು ಸಜ್ಜನರು; ದಾನವೆಲ್ಲ ಬೇಕೆನ್ನುತ್ತಿರುವವನು ಜಿಪುಣನು.
27 ದುಷ್ಟರು ಅರ್ಪಿಸುವ ಬಲಿಯಜ್ಞ ಅಸಹ್ಯ; ದುರಾಲೋಚನೆಯಿಂದ ಅರ್ಪಿಸುವುದು ಮತ್ತೂ ಅಸಹ್ಯ.
28 ಸುಳ್ಳು ಸಾಕ್ಷಿ ಹೇಳುವವನೇ ಅಳಿದು ಹೋಗುವನು; ಕೇಳಿದ್ದನ್ನೆ ಹೇಳುವವನ ಸಾಕ್ಷಿ ಅಳಿಯದೆ ಉಳಿಯುವುದು.
29 ದುಷ್ಟನ ಮುಖದಲ್ಲಿ ಹಟಭಾವನೆ; ಸಜ್ಜನನ ನಡತೆಯಲ್ಲಿ ಸದೃಢತೆ.
30 ಸರ್ವೇಶ್ವರನ ಮುಂದೆ ನಿಲ್ಲಬಲ್ಲ ಜ್ಞಾನವಿಲ್ಲ, ವಿವೇಚನೆಯಿಲ್ಲ, ಆಲೋಚನೆಯಿಲ್ಲ.
31 ಯುದ್ಧಕ್ಕಾಗಿ ಸನ್ನದ್ಧವಾಗಿರಬಹುದು ಅಶ್ವ ಬಲ; ಜಯಸಿಗುವುದಾದರೋ ಸರ್ವೇಶ್ವರನಿಂದ.

**22** ಅತುಳ ಐಶ್ವರ್ಯಕ್ಕಿಂತ ಒಳ್ಳೆಯ ಹೆಸರು ಉತ್ತಮ; ಬೆಳ್ಳಿಬಂಗಾರಕ್ಕಿಂತ ಪ್ರೀತಿ ವಿಶ್ವಾಸ ಅಮೂಲ್ಯ.
2 ಬಡವರು ಬಲ್ಲಿದರು ಸ್ಥಿತಿಯಲ್ಲಿ ಎದುರು ಬದುರು; ಅವರೆಲ್ಲರನ್ನು ಸೃಷ್ಟಿಸಿದಾತ ಸರ್ವೇಶ್ವರನು.
3 ಜಾಣ ಕೇಡನ್ನು ಕಂಡು ಅಡಗಿಕೊಳ್ಳುತ್ತಾನೆ; ಕೋಣ ಮುನ್ನುಗ್ಗಿ ಹಾನಿಗೆ ಈಡಾಗುತ್ತಾನೆ.
4 ಸರ್ವೇಶ್ವರನಲ್ಲಿ ಭಯಭಕ್ತಿ, ದೀನ ಮನೋಭಾವ, ಇವು ನೀಡುವ ಫಲ–ಸಂಪತ್ತು ಸನ್ಮಾನ, ಆಯುಸ್ಸು.
5 ವಕ್ರಬುದ್ಧಿಯುಳ್ಳವನ ಹಾದಿತುಂಬ ಮುಳ್ಳು, ಉರುಳು; ಅದರಿಂದ ದೂರವಿರುವನು ಪ್ರಾಣದಾಸೆಯುಳ್ಳವನು.
6 ಬಾಲ್ಯದಲ್ಲೇ ಮಕ್ಕಳನ್ನು ಸರಿದಾರಿಯಲ್ಲಿ ಪಳಗಿಸು; ಮುಪ್ಪಿನಲ್ಲೂ ಅವರು ಆ ಪದ್ಧತಿ ಮೀರಿ ನಡೆಯದಿರಲಿ.
7 ಬಲ್ಲಿದನು ಬಡವನಿಗೆ ಒಡೆಯ; ಸಾಲಗಾರನು ಸಾಲಕೊಟ್ಟವನಿಗೆ ಸೇವಕ.
8 ಕೆಟ್ಟತನವನ್ನು ಬಿತ್ತುವವನು ಕೇಡನ್ನೆ ಕೊಯ್ಯುವನು; ಅವನ ಸಿಟ್ಟು ಅವನನ್ನೆ ಸುಟ್ಟು ಬಿಡುವುದು.
9 ಉದಾರ ದೃಷ್ಟಿಯುಳ್ಳವನು ಆಶೀರ್ವದಿತನು; ಆಹಾರವನ್ನು ಬಡವರೊಂದಿಗೆ ಆತ ಹಂಚಿಕೊಳ್ಳುವನು.
10 ಕುಚೋದ್ಯನನ್ನು ಓಡಿಸಿಬಿಟ್ಟರೆ ಜಗಳ ನಿಲ್ಲುವುದು, ವ್ಯಾಜ್ಯ ಮುಗಿಯುವುದು, ನಿಂದೆ ಅವಮಾನ ಇಲ್ಲದಾಗುವುದು.
11 ಸವಿಮಾತಿನಿಂದ ಅರಸನ ಗೆಳೆತನ ಪಡೆಯಬಹುದು; ಸರ್ವೇಶ್ವರ ಬಯಸುವುದು ಅಂತರಂಗ ಶುದ್ಧಿಯನ್ನು.
12 ಸರ್ವೇಶ್ವರನ ದೃಷ್ಟಿ ಸಜ್ಜನರನ್ನು ಕಾಯುವುದು; ವಂಚಕರ ಮಾತನ್ನು ನಿರರ್ಥಕಗೊಳಿಸುವುದು.
13 "ಹೊರಗಡೆ ಕಾದಿದೆ ಸಿಂಹ, ಬೀದಿಗೆ ಕಾಲಿಟ್ಟರೆ ತಿಂದುಬಿಡುವುದು!" ಇದು ಮೈಗಳ್ಳನ ಪಿಳ್ಳೆಯ ನೆವ.
14 ವ್ಯಭಿಚಾರಿಣಿಯ ಬಾಯಿ ಆಳವಾದ ಬಾವಿ; ಸರ್ವೇಶ್ವರನಿಗೆ ಸಿಟ್ಟೆಬ್ಬಿಸಿದವನು ಬೀಳುವನು ಅದರಲ್ಲಿ.
15 ಮಂಕುತನ ಮಕ್ಕಳ ಮನಸ್ಸಿಗೆ ಸಹಜ; ಬೆತ್ತದ ಬಿಸಿಯಿಂದ ಅದನ್ನು ತೊಲಗಿಸಲು ಸಾಧ್ಯ.

16 ಹಣ ಹೆಚ್ಚಿಸಲು ಬಡವರನ್ನು ಪೀಡಿಸುವವನಿಗೆ, ಲಂಚಕೊಟ್ಟು ಬಲ್ಲಿದರನ್ನು ಒಲಿಸುವವನಿಗೆ, ಕೊರತೆಯೆ ಕಟ್ಟಿಟ್ಟ ಬುತ್ತಿ.

**ಮುತ್ತಿನಂಥ ಮೂವತ್ತು ಮಾತುಗಳು**

17 ಜ್ಞಾನಿಗಳ ನುಡಿಗಳನ್ನು ಕಿವಿಗೊಟ್ಟು ಕೇಳು; ನನ್ನ ಬೋಧನೆಯನ್ನು ಮನಸ್ಸಿನಲ್ಲಿಡು. 18ಆ ನುಡಿಗಳನ್ನು ನಿನ್ನ ಅಂತರಂಗದಲ್ಲಿ ಕಾದಿಡು; ಅವು ನಿನ್ನ ತುಟಿಯ ಮೇಲೆ ಸಿದ್ಧವಿದ್ದರೆ ಒಳಿತು. 19ಸರ್ವೇಶ್ವರನಲ್ಲಿ ನೀನು ಭರವಸೆ ಇಡುವಂತೆ, ಅವುಗಳನ್ನು ತಿಳಿಸಿರುವೆನು ಇಂದೆ. 20ಉಚಿತಾಲೋಚನೆಯನ್ನೂ ತಿಳುವಳಿಕೆಯನ್ನೂ ನೀಡಬಲ್ಲ ಮೂವತ್ತು ವಚನಗಳನ್ನು ನಿನಗೆ ಈ ಮುಂಚೆಯೆ ಬರೆದಿರುವೆನಲ್ಲಾ. 21ಸತ್ಯವಾದ ಆ ವಚನಗಳು ಎಷ್ಟೋ ಯಥಾರ್ಥವೆಂದು ತಿಳಿದು ನಿನ್ನನ್ನು ಪ್ರಶ್ನಿಸಿದವರಿಗೆ ಅವುಗಳನ್ನು ಅರಿಕೆಮಾಡು.

**–1–**

22 ಬಡವರಿಗೆ ದಿಕ್ಕಿಲ್ಲವೆಂದು ಅವರನ್ನು ಶೋಷಣೆಗೆ ಗುರಿಮಾಡಬೇಡ; ನ್ಯಾಯಾಲಯದಲ್ಲಿ ಆ ದಟ್ಟದರಿದ್ರರನ್ನು ಬಾಧಿಸಬೇಡ. 23ಸರ್ವೇಶ್ವರನೇ ಅವರ ಪರವಾಗಿ ವಾದಿಸುವನು; ಸೂರೆ ಮಾಡಬಂದವರ ಪ್ರಾಣವನ್ನು ಆತನೆ ಸೂರೆ ಮಾಡುವನು.

**–2–**

24 ಕೋಪಿಷ್ಠನ ಸಂಗಡ ಸ್ನೇಹಬೆಳೆಸಬೇಡ, ಸಿಟ್ಟುಗಾರನ ಸಹವಾಸ ಮಾಡಬೇಡ. 25ಹಾಗೆ ಮಾಡಿದರೆ ಅವರ ದುರ್ನಡತೆಯನ್ನು ಕಲಿತುಕೊಳ್ಳುವೆ, ನಿನ್ನ ಪ್ರಾಣ ಉರುಲಿಗೆ ತುತ್ತಾಗುವುದು, ಎಚ್ಚರಿಕೆ!

**–3–**

26 ಬೇರೆಯವರ ಸಾಲಕ್ಕೆ ಹೊಣೆಯಾಗಬೇಡ, ಅದಕ್ಕಾಗಿ ಕೈ ಮೇಲೆ ಕೈ ಇಟ್ಟು ಜಾಮೀನು ನಿಲ್ಲಬೇಡ. 27ಆ ಸಾಲತೀರಿಸಲು ನಿನ್ನಿಂದ ಸಾಧ್ಯವಾಗದಿರಲು, ಅವನೇಕೆ ನೀನು ಮಲಗಿರುವ ಹಾಸಿಗೆಯನ್ನೇ ಕಿತ್ತುಕೊಳ್ಳಬೇಕು?

**–4–**

28 ನಿನ್ನ ಪೂರ್ವಜರು ಹಾಕಿರುವರು ಎಲ್ಲೆ ಗುರುತನ್ನು, ಸ್ಥಳಾಂತರಿಸಬೇಡ ನೀನು.

**–5–**

29 ತನ್ನ ಕೆಲಸದಲ್ಲಿ ನಿಪುಣನಾದವನನ್ನು ಗುರುತುಹಚ್ಚು; ಅಂಥವನು ರಾಜರನ್ನಲ್ಲದೆ ನೀಚರನ್ನು ಸೇವಿಸಲಾರನು.

**–6–**

**23** ಒಡೆಯನ ಸಂಗಡ ಊಟಕ್ಕೆ ಕುಳಿತುಕೊಂಡಾಗ ಯಾರ ಮುಂದಿರುವೆ ಎಂಬುದನ್ನು ಮರೆಯಬೇಡ.

2 ತಡೆಯಲಾಗದ ಹಸಿವು ನಿನಗಿದ್ದರೂ ಕಂಠದಲ್ಲಿ ಕತ್ತಿಯಿರುವಂತೆ ಸಂಯಮದಿಂದಿರು. 3ಒಡೆಯನ ರುಚಿಪದಾರ್ಥಗಳನ್ನು ಬಯಸಬೇಡ, ಅವುಗಳಲ್ಲಿ ಮರೆಮೋಸ ಅಡಗಿರಲು ಸಾಧ್ಯ.

**–7–**

4 ದುಡ್ಡಿನಾಸೆಗಾಗಿಯೆ ದುಡಿಯಬೇಡ; ಬುದ್ಧಿಯನ್ನೆಲ್ಲಾ ಅದಕ್ಕಾಗಿಯೇ ವ್ಯಯಮಾಡಬೇಡ. 5ನಿನ್ನ ದೃಷ್ಟಿ ಅದರ ಮೇಲೆ ಬೀಳುವಷ್ಟರಲ್ಲೆ ಅದು ಮಾಯಾ, ರೆಕ್ಕೆ ಕಟ್ಟಿಕೊಂಡ ಗರುಡನಂತೆ ಆಗಸದತ್ತ ಅದರ ಓಟ.

**–8–**

6 ಜಿಪುಣ ದೃಷ್ಟಿಯವನು ಬಡಿಸುವ ಅನ್ನವನ್ನು ಉಣಬೇಡ; ಅವನ ರುಚಿಪದಾರ್ಥಗಳನ್ನು ಬಯಸಬೇಡ. 7ಅವನು ತನ್ನ ಮನದಲ್ಲೆ ಲೆಕ್ಕಿಸುತ್ತಿರುತ್ತಾನೆ "ಉಣ್ಣು, ಕುಡಿ" ಎಂದರೂ; ಅವನಿಗಿಲ್ಲ ನಿನ್ನ ಮೇಲೆ ಅಕ್ಕರೆ. 8ನೀನು ತಿಂದ ತುತ್ತನ್ನೆ ಕಕ್ಕಿ ಬಿಡುವೆ, ನೀನು ಆಡಿದ ಸವಿಮಾತೆಲ್ಲ ವ್ಯರ್ಥವೆ.

**–9–**

9 ಮೂಢನ ಸಂಗಡ ಮಾತನಾಡಬೇಡ; ನಿನ್ನ ಬುದ್ಧಿಮಾತನ್ನು ಅವನು ಮಾನ್ಯಮಾಡ.

**–10–**

10 ಪುರಾತನ ಎಲ್ಲೆ ಗುರುತನ್ನು ಒತ್ತರಿಸಬೇಡ; ಅನಾಥರ ಹೊಲಗದ್ದೆಯನ್ನು ಆಕ್ರಮಿಸಬೇಡ. 11ಅವರನ್ನು ಕಾಪಾಡುವ ಸರ್ವೇಶ್ವರ ಬಲಶಾಲಿ, ಆತ ನಿನ್ನೊಡನೆ ವಾದಿಸಬಲ್ಲ ಅವರ ಪರವಾಗಿ.

**–11–**

12 ಉಪದೇಶವನ್ನು ಕೇಳುವುದರತ್ತ ಮನಸ್ಸಿಡು; ತಿಳುವಳಿಕೆಯ ಮಾತುಗಳಿಗೆ ಕಿವಿಗೊಡು.

**–12–**

13 ಮಕ್ಕಳನ್ನು ದಂಡಿಸಿ ತಿದ್ದಲು ಹಿಂಜರಿಯಬೇಕಾಗಿಲ್ಲ; ಬೆತ್ತದ ಏಟಿಗೆ ಅವರು ಸತ್ತು ಹೋಗುವುದಿಲ್ಲ. 14ಬೆತ್ತದಿಂದ ಬೇಕಾದರೆ ಹೊಡೆ; ಮಗುವಿನ ಆತ್ಮ ಪಾತಾಳಕ್ಕೆ ಬೀಳದಂತೆ ತಡೆ.

**–13–**

15 ಮಗನೇ, ನೀನು ಬುದ್ಧಿವಂತನಾದರೆ ಆನಂದವೇ ಆನಂದ ನನ್ನ ಮನಸ್ಸಿಗೆ. 16ನಿನ್ನ ಬಾಯಿಂದ ಹಿತೋಕ್ತಿಗಳು ಬಂದರೆ ಸಂತೋಷ ನನ್ನ ಅಂತರಾತ್ಮಕ್ಕೆ.

**–14–**

17 ಪಾಪಿಗಳನ್ನು ನೋಡಿ ಅಸೂಯೆಪಡಬೇಡ; ಸರ್ವೇಶ್ವರನಲ್ಲಿರಲಿ ನಿರಂತರ ಭಯ ಭಕ್ತಿ. 18ಆಗ ನಿನ್ನ ಭವಿಸ್ಯ ಶುಭದಾಯಕವಾಗಿರುವುದು, ನಿನ್ನ ನಿರೀಕ್ಷೆ ಸಾರ್ಥಕವಾಗುವುದು.

**–15–**

19 ಮಗನೇ ಕೇಳು, ಬುದ್ಧಿವಂತನಾಗಿರು, ನಿನ್ನ ಮನಸ್ಸನ್ನು ಸನ್ಮಾರ್ಗದತ್ತ ಹರಿಸು. 20 ಕುಡುಕರೊಡನೆ, ಹೊಟ್ಟೆಬಾಕರೊಡನೆ ಸೇರಬೇಡ; ಮಿತಿ ಮೀರಿ ಮಾಂಸ ತಿನ್ನುವ ಜನರ ಜೊತೆ ನಿನಗೆ ಬೇಡ. 21ಕುಡುಕನಿಗೂ ಹೊಟ್ಟೆಬಾಕನಿಗೂ ಕಾದಿದೆ ದುರ್ಗತಿ; ಹರಕುಬಟ್ಟೆಗಳನ್ನು ಹೊದಿಸುವುದು ಅವರ ನಿದ್ರಾಸಕ್ತಿ.

**–16–**

22 ಹೆತ್ತ ತಂದೆಯ ಮಾತಿಗೆ ಕಿವಿಗೊಡು; ಮುಪ್ಪಿನ ತಾಯಿಯನ್ನು ಅಸಡ್ಡೆಮಾಡದಿರು. 23ಸತ್ಯವನ್ನು, ಅಂದರೆ ಜ್ಞಾನ, ಸುಶಿಕ್ಷೆ, ವಿವೇಕ ಇವನ್ನು ಬೆಲೆಕೊಟ್ಟಾದರೂ ಕೊಂಡುಕೊ, ಮಾರಿ ಬಿಡಬೇಡ! 24ನೀತಿವಂತನ ತಂದೆಗೆ ಅತಿ ಸಂತೋಷ; ಜ್ಞಾನಿಯನ್ನು ಹೆತ್ತವನಿಗೆ ಅತಿ ಉಲ್ಲಾಸ. 25ಹರ್ಷಗೊಳಿಸು ನಿನ್ನ ತಂದೆತಾಯಿಗಳನ್ನು; ಆನಂದಪಡಿಸು ನಿನ್ನ ಹೆತ್ತವಳನ್ನು.

**–17–**

26 ಮಗನೇ, ನಾನು ಹೇಳುವುದು ನಾಟಲಿ ನಿನ್ನ ಮನಸ್ಸಿಗೆ; ನನ್ನ ನಡತೆ ಆದರ್ಶಕವಾಗಿರಲಿ ನಿನ್ನ ಕಣ್ಣುಗಳಿಗೆ. 27ವೇಶ್ಯೆ ಒಂದು ಆಳವಾದ ಬಾವಿ; ವ್ಯಭಿಚಾರಿಣಿ ಇಕ್ಕಟ್ಟಾದ ಗುಳಿ. 28ಆಕೆ ಕಳ್ಳನಂತೆ ಹೊಂಚುಹಾಕುತ್ತಾಳೆ; ಅನೇಕರನ್ನು ದ್ರೋಹಿಗಳನ್ನಾಗಿಸುತ್ತಾಳೆ.

**–18–**

29 ಕಿರಿಚಾಟ, ಕೂಗಾಟ, ಕಿತ್ತಾಟ, ಗೋಳಾಟವು ನಿರ್ನಿಮಿತ್ತ ಹುಣ್ಣು, ಕೆಂಪೇರಿದ ಕಣ್ಣು; ಇವುಗಳನ್ನು ಅನುಭವಿಸುವವರು ಯಾರು? 30ಮಿಶ್ರಮದ್ಯಪಾನಗಳಲ್ಲಿ ಆಸಕ್ತನಾಗಿರುವವನೇ, ದ್ರಾಕ್ಷಾರಸ ಕುಡಿಯುತ್ತ ಕಾಲಹರಣ ಮಾಡುವವನೇ. 31ಪಾತ್ರೆಯಲ್ಲಿ ಕೆಂಪಗೆ ಥಳ ಥಳಿಸುವ, ಗಂಟಲಿನೊಳಗೆ, ಸುಲಭವಾಗಿ, ಇಳಿಯುವ, ದ್ರಾಕ್ಷಾರಸದ ಮೇಲೆ ಕಣ್ಣಿಡಬೇಡ. 32ಕುಡಿದಾದ ಮೇಲೆ ಅದು ಹಾವಿನಂತೆ ಕಚ್ಚುವುದು; ಹೌದು, ವಿಷಸರ್ಪದಂತೆ ಕಡಿಯುವುದು. 33ನಿನ್ನಾ ಕಣ್ಣು ಇಲ್ಲದ್ದನ್ನೇ ಕಾಣುವುದು; ಮನಸ್ಸು ವಕ್ರವಾದುವುಗಳನ್ನೇ ಹೊರ ಪಡಿಸುವುದು. 34ನೀನು ಸಮುದ್ರ ಮಧ್ಯದಲ್ಲಿ ಮಲಗಿ ಇರುವವನಂತೆ ಇರುವೆ, ಹಡಗಿನ ಕಂಬದ ತುದಿಯಲ್ಲಿ ನಿದ್ರಿಸುವವನಂತೆ ಇರುವೆ. 35"ಜನರು ನನ್ನನ್ನು ಹೊಡೆದರೂ ನೋವಾಗಲಿಲ್ಲ; ಬಡಿದರೂ ನನಗೆ ತಿಳಿಯಲಿಲ್ಲ; ಎಚ್ಚರವಾಗುವುದು ಯಾವಾಗ? ಮತ್ತೆ ಒಂದು ಸಾರಿ ಕುಡಿಯುವೆನು" ಎಂದುಕೊಳ್ಳುವೆ.

**–19–**

**24** ಕೆಟ್ಟವರನ್ನು ನೋಡಿ ಹೊಟ್ಟೆಕಿಚ್ಚು ಪಡಬೇಡ. ಅವರ ಒಡನಾಟವನ್ನು ಬಯಸಬೇಡ. 2ಅವರ ಮನಸ್ಸು ಯೋಚಿಸುವುದು ಹಿಂಸೆಯನ್ನು, ಅವರ ತುಟಿ ಪ್ರಸ್ತಾಪಿಸುವುದು ಹಾನಿಯನ್ನು.

**–20–**

3 ಮನೆಕಟ್ಟುವುದಕ್ಕೆ ಜ್ಞಾನವೇ ಸಾಧನ, ಅದನ್ನು ಸ್ಥಿರಗೊಳಿಸುವುದಕ್ಕೆ ವಿವೇಕವೇ ಆಧಾರ. 4ಮೌಲ್ಯವೂ ಸುಂದರವೂ ಆದವುಗಳಿಂದ ಅದರ ಕೋಣೆಗಳನ್ನು ತುಂಬಿಸಲು ತಿಳುವಳಿಕೆಯೇ ಉಪಕರಣ.

**–21–**

5 ಬಲವಂತನಿಗಿಂತ ಬುದ್ಧಿವಂತ ಶಕ್ತಿಶಾಲಿ; ಶೂರನಿಗಿಂತ ಜ್ಞಾನಿಯೇ ಬಲಶಾಲಿ. 6ಬುದ್ಧಿವಂತನು ನಾಯಕನನ್ನಿಟ್ಟು ಯುದ್ಧ ನಡೆಸುವನು; ಸುಮಂತ್ರಿಗಳು ಹಲವರಿದ್ದರೆ ಸಂರಕ್ಷಣೆಯಿರುವುದು.

**–22–**

7 ಜ್ಞಾನವು ಮೂರ್ಖನಿಗೆ ಎಟುಕದಷ್ಟು ಎತ್ತರ; ನ್ಯಾಯಸ್ಥಾನದಲ್ಲಿ ಅವನು ಬಾಯಿಬಿಡಲಾರ.

**–23–**

8 ಕೇಡನ್ನು ಯೋಚಿಸುವವನು ತುಂಟನು ಎನಿಸಿಕೊಳ್ಳುವನು. 9ಮೂರ್ಖನ ಯೋಜನೆ ಪಾಪಮಯ; ಕುಚೋದ್ಯನು ಜನರಿಂದ ತಿರಸ್ಕೃತನು.

**–24–**

10 ಆಪತ್ತುಕಾಲದಲ್ಲಿ ನೀನು ಎದೆಗುಂದಿದವನಾದರೆ ನನ್ನ ಬಲವು ಅಸಮರ್ಪಕವಾದುದೆ.

**–25–**

11 ಮರಣಕ್ಕೆ ಒಯ್ಯಲ್ಪಟ್ಟವನನ್ನು ಬಿಡಿಸಲು ಯತ್ನಿಸು; ಕೊಲೆಗೆ ಗುರಿಯಾದವನನ್ನು ತಪ್ಪಿಸಲು ಯತ್ನಿಸು. 12ಈ ಸಂಗತಿ ಗೊತ್ತಿರಲಿಲ್ಲವೆಂದು ನೆವ ಹೇಳಬೇಡ; ಅಂತರಂಗ ಪರಿಶೋಧಕನಿಗೆ ನಿನ್ನ ಯೋಜನೆ ತಿಳಿದಿಲ್ಲವೆ? ನಿನ್ನ ಮನಸ್ಸನ್ನು ಸಮೀಕ್ಷಿಸುವ ಆತನಿಗೆ ಇದು ಮರೆಯೇ? ಮಾನವನ ಕಾರ್ಯಗಳಿಗೆ ತಕ್ಕಂತೆ ಪ್ರತಿಫಲವನ್ನಾತ ನೀಡುವನಲ್ಲವೆ?

**–26–**

13 ಮಗನೇ, ಜೇನು ತಿನ್ನು, ಅದು ಚೆನ್ನಾಗಿದೆ; ತೊಟ್ಟಿಕ್ಕುವ ಜೇನುತುಪ್ಪ ನಿನ್ನ ಬಾಯಿಗೆ ಸಿಹಿ ಅಲ್ಲವೇ? 14ಅಂತೆಯೇ ಜ್ಞಾನ ನಿನ್ನ ಆತ್ಮಕ್ಕೆ ಸಿಹಿಯೆಂದು ತಿಳಿ; ಅದನ್ನು ಪಡೆದೆಯಾದರೆ ನಿನ್ನ ಭವಿಷ್ಯ ಶುಭಕರ, ನಿನ್ನ ನಿರೀಕ್ಷೆ ಆಗದು ನಿರರ್ಥಕ.

**–27–**

15 ದುಷ್ಟನೇ, ನೀತಿವಂತನ ಮನೆಗೆ ಕನ್ನಹಾಕಬೇಡ; ಅವನು ಕೂಡಿಸಿದ್ದನ್ನು ಕೊಳ್ಳೆಹೊಡೆಯಬೇಡ. 16ನೀತಿವಂತನು ಏಳುಸಾರಿ ಬಿದ್ದರೂ ಮತ್ತೆ ಏಳುವನು; ದುಷ್ಟನು ಕೇಡುಬಂದಾಗಲೆ ಕುಸಿದು ಬೀಳುವನು.

**–28–**

17 ನಿನ್ನ ಶತ್ರುಬಿದ್ದರೆ ಹಿಗ್ಗಬೇಡ; ಎಡವಿದರೆ ಮನೋಲ್ಲಾಸ ಪಡಬೇಡ. 18ಸರ್ವೇಶ್ವರ ನಿನ್ನ ಹರ್ಷವನ್ನು ಕಂಡು ಬೇಸರಗೊಂಡಾನು; ತನ್ನ ಕೋಪವನ್ನು ಅವನ ಕಡೆಯಿಂದ ತಿರುಗಿಸಿಬಿಟ್ಟಾನು.

**–29–**

19 ಕೆಡುಕರನ್ನು ಕಂಡು ಉರಿಗೊಳ್ಳಬೇಡ; ದುಷ್ಟರನ್ನು ನೋಡಿ ಹೊಟ್ಟೆಕಿಚ್ಚುಪಡಬೇಡ. 20ಕೆಟ್ಟವನಿಗೆ ಶುಭಕಾಲ ಬಾರದು, ದುಷ್ಟರ ದೀಪ ಆರಿಹೋಗುವುದು.

**–30–**

21 ಮಗನೇ, ಸರ್ವೇಶ್ವರನಿಗೂ ರಾಜನಿಗೂ ಭಯಪಡು; ಅವರನ್ನು ವಿರೋಧಿಸುವವರ ಗೊಡವೆಗೆ ಹೋಗಬೇಡ. 22ಅವರಿಬ್ಬರು ವಿಧಿಸುವ ವಿಪತ್ತು ಫಕ್ಕನೆ ಸಂಭವಿಸೀತು, ಅವರಿಂದಾಗುವ ನಾಶವು ಯಾರಿಗೆ ತಿಳಿದೀತು?

**ಬೇರೆ ಕೆಲವು ಹೇಳಿಕೆಗಳು**

23 ಜ್ಞಾನಿಗಳ ಬೇರೆ ಕೆಲವು ಹೇಳಿಕೆಗಳು ಇವು:

ನ್ಯಾಯವಿಚಾರಣೆಯಲ್ಲಿ ಪಕ್ಷಪಾತ ಸರಿಯಲ್ಲ. 24ಅಪರಾಧಿಗೆ "ನೀನು ನಿರಪರಾಧಿ" ಎಂದು ತೀರ್ಪು ಕೊಡುವವನನ್ನು ಜನರು ಶಪಿಸುವರು, ಪ್ರಜೆಗಳು ದೂಷಿಸುವರು. 25ತಪ್ಪು ಮಾಡಿದವರನ್ನು ದಂಡಿಸುವವರಿಗೆ ಶುಭವಾಗುವುದು, ಸುಖಕರವಾದ ಆಶೀರ್ವಾದವು ಅವರಿಗೆ ಲಭಿಸುವುದು.

26 ಸತ್ಯವಾದ ಉತ್ತರ ತುಟಿಗೊಂದು ಚುಂಬನ.

27 ಕೆಲಸದ ಸಾಮಾನುಗಳನ್ನು ಅಣಿಮಾಡು, ಹೊಲಗದ್ದೆಗಳ ಕೆಲಸವನ್ನು ಮುಗಿಸು, ಆ ಬಳಿಕ ಮನೆ ಕಟ್ಟಲು ತೊಡಗು.

28 ನೆರೆಯವನಿಗೆ ವಿರುದ್ಧ ಆಧಾರವಿಲ್ಲದ ಸಾಕ್ಷಿಹೇಳಬೇಡ; ಮಾತಿನಲ್ಲಿ ಅವನಿಗೆ ಮೋಸ
ಮಾಡಬೇಡ. 29"ಅವನು ನನಗೆ ಮಾಡಿದಂತೆ ನಾನೂ ಅವನಿಗೆ ಮಾಡುವೆ, ಅವನು ಮಾಡಿದ್ದಕ್ಕೆ ಸರಿಯಾಗಿ
ಮುಯ್ಯಿತೀರಿಸುವೆ" ಎನ್ನಬೇಡ.

30 ಸೋಮಾರಿಯ ಹೊಲದ ಮೇಲೆ ನಡೆದು ಹೋದೆ; ಮತಿಗೆಟ್ಟವನ ತೋಟದ ಮೇಲೆ ಹಾದು
ಹೋದೆ. 31ಅವುಗಳಲ್ಲಿ ಮುಳ್ಳುಗಿಡಗಳು ಹರಡಿಕೊಂಡಿದ್ದವು, ಕಳೆಗಳು ಮುಚ್ಚಿಕೊಂಡಿದ್ದವು, ಕಲ್ಲಿನಗೋಡೆ
ಹಾಳಾಗಿತ್ತು. 32ಅದನ್ನು ನೋಡಿ ಚಿಂತಿಸತೊಡಗಿದೆ; ಆ ದೃಶ್ಯದಿಂದ ಈ ಪಾಠ ಕಲಿತೆ: 33"ಇನ್ನೂ ಸ್ವಲ್ಪ
ನಿದ್ರೆ, ಇನ್ನೂ ತುಸು ತೂಕಡಿಕೆ, ಕೈ ಮುದುಡಿಕೊಂಡು ಇನ್ನೂ ಕೊಂಚ ಮಲಗಿಕೊಳ್ಳುವೆ" ಎನ್ನುವೆಯಾ?
34ಆಗ ಬಡತನ ಎರಗುವುದು ದಾರಿಗಳ್ಳನಂತೆ; ಕೊರತೆಯು ನಿನ್ನ ಮೇಲೆ ಬೀಳುವುದು ಪಂಜುಗಳ್ಳನಂತೆ.

### ಸೊಲೊಮೋನನ ಇನ್ನೂ ಕೆಲವು ಜ್ಞಾನೋಕ್ತಿಗಳು

**25** ಇವು ಕೂಡ ಸೊಲೊಮೋನನ ಜ್ಞಾನೋಕ್ತಿಗಳು: ಜುದೇಯದ ಅರಸ ಹಿಜ್ಕೀಯನ ಲೇಖಕರು ಸಂಗ್ರಹಿಸಿದ ನುಡಿಗಳು:

2 ವಿಷಯಗಳನ್ನು ರಹಸ್ಯವಾಗಿಡುವ ದೇವರಿಗೆ ಮಹಿಮೆ; ವಿಷಯಗಳನ್ನು ವಿಮರ್ಶಿಸುವ ರಾಜರಿಗೆ ಹಿರಿಮೆ.

3 ಆಕಾಶವು ಉನ್ನತ, ಭೂಮಿಯು ಅಗಾಧ, ಅಂತೆಯೇ ರಾಜರ ಮನಸ್ಸು ಅಗೋಚರ.

4 ಬೆಳ್ಳಿಯಿಂದ ಕಲ್ಮಷವನ್ನು ತೆಗೆದು ಹಾಕಿದರೆ ಅಕ್ಕಸಾಲಿಗನಿಗೆ ದಕ್ಕುವುದು ಚೊಕ್ಕ ಒಡವೆ.
5ಅಂತೆಯೆ ರಾಜನ ಸನ್ನಿಧಾನದಿಂದ ದುಷ್ಟರನ್ನು ತೆಗೆದುಹಾಕಿದರೆ ಅವನ ರಾಜ್ಯಭಾರ ನೀತಿಯಾಧಾರದಿಂದ
ಸುಸ್ಥಿರ.

6 ರಾಜನ ಸನ್ನಿಧಾನದಲ್ಲಿ ನಿನ್ನನ್ನೇ ಹೆಚ್ಚಿಸಿಕೊಳ್ಳಬೇಡ; ದೊಡ್ಡವರಿಗೆ ಏರ್ಪಡಿಸಿದ ಸ್ಥಾನದಲ್ಲಿ
ನಿಂತುಕೊಳ್ಳಬೇಡ. 7ಘನವಂತರ ಮುಂದೆ ಕೆಳಗಣ ಸ್ಥಾನಕ್ಕೆ ನೂಕಿಸಿಕೊಳ್ಳುವುದಕ್ಕಿಂತ "ಇನ್ನೂ ಮೇಲಕ್ಕೆ
ಬಾ" ಎಂದು ಕರೆಸಿಕೊಳ್ಳುವುದು ಲೇಸು.

8 ದುಡುಕಿ ನೆರೆಯವನ ಮೇಲೆ ವ್ಯಾಜ್ಯಕ್ಕೆ ಓಡಬೇಡ; ಕಡೆಗೆ ಅವನು ನಿನ್ನ ಮಾನಕಳೆದಾಗ ಏನು ಮಾಡುವೆ, ಯೋಚಿಸು.

9 ವ್ಯಾಜ್ಯವನ್ನು ನೆರೆಯವನ ಸಂಗಡವೆ ಚರ್ಚಿಸಿ ತೀರ್ಮಾನಿಸಿಕೊ; ನೆರೆಹೊರೆಯವರ ಗುಟ್ಟನ್ನು
ಬಯಲು ಮಾಡಬೇಡ. 10ಬಯಲು ಮಾಡಿದರೆ ಕೇಳುವವನು ನಿನ್ನನ್ನೆ ಅವಮಾನ ಗೊಳಿಸಾನು, ನಿನಗೆ
ಬರುವ ಅಪಕೀರ್ತಿ ಅಳಿಯದೆ ಉಳಿದೀತು.

11 ಸಮಯೋಚಿತ ಮಾತು ಬೆಳ್ಳಿ ತಟ್ಟೆಯಲ್ಲಿ ಖಚಿತವಾದ ಬಂಗಾರದ ಹಣ್ಣು.

12 ಕೇಳುವ ಕಿವಿಗೆ ಕೊಡುವ ಬುದ್ಧಿವಾದವು ಹೊನ್ನಿನ ಮುರುವು, ಅಪರಂಜಿಯ ಆಭರಣವು.

13 ಸುಗ್ಗಿಯ ಕಾಲದಲ್ಲಿ ಹಿಮದ ತಂಪು ಹೇಗೋ ಹಾಗೆ ಕಳುಹಿಸುವ ಒಡೆಯನಿಗೆ ಪ್ರಾಮಾಣಿಕ ದೂತನೂ ಹಾಗೆ.

14 ಗಾಳಿಯಿದೆ, ಮೋಡವಿದೆ, ಆದರೆ ಮಳೆಯಿಲ್ಲ; ಕೊಡದೆಯೆ ತಾನೊಬ್ಬ ದಾನಿಯೆಂದು ಕೊಚ್ಚಿಕೊಳ್ಳುವವನೂ ಹಾಗೆಯೆ.

15 ಸಹನೆಶೀಲತೆಯಿಂದ ಅರಸನನ್ನೂ ಒಲಿಸಿಕೊಳ್ಳಬಹುದು; ಮೃದುವಾದ ನಾಲಿಗೆ ಎಲುಬನ್ನೂ ಮುರಿಯಬಲ್ಲದು.

16 ಜೇನು ಸಿಕ್ಕಿದರೆ ಅಳತೆಯಿಂದ ತಿನ್ನು, ಮಿತಿ ಮೀರಿದರೆ ವಾಂತಿಯಾದೀತು. 17ಪದೇ ಪದೇ
ನೆರೆಯವನ ಮನೆಗೆ ಹೋಗಬೇಡ, ಬೇಸರಗೊಂಡು ನಿನ್ನನ್ನು ಹಗೆಮಾಡಾನು.

18 ನೆರೆಯವನ ವಿರುದ್ಧ ಸುಳ್ಳುಸಾಕ್ಷಿ ಹೇಳುವವನು ಕೊಡತಿಗೆ, ಕತ್ತಿಗೆ, ಹರಿತವಾದ ಬಾಣಕ್ಕೆ ಸಮಾನನು.

19 ಕಷ್ಟಕಾಲದಲ್ಲಿ ಕಪಟಿಯನ್ನು ನಂಬುವುದು, ಮುರುಕು ಹಲ್ಲನ್ನು, ಕುಂಟಕಾಲನ್ನು ನಂಬಿದಂತಾಗುವುದು.

20 ಮನಗುಂದಿದವನಿಗೆ ಸಂಗೀತ ಹಾಡುವುದೆಂದರೆ ಚಳಿಯಲ್ಲಿ ಬಟ್ಟೆ ಬಿಚ್ಚಿದ ಹಾಗೆ, ಉರಿಗಾಯಕ್ಕೆ ಉಪ್ಪು ಹಚ್ಚಿದಂತೆ.

21 ಹಗೆಯವನು ಹಸಿದಿದ್ದರೆ ಅನ್ನ ನೀಡು, ಬಾಯಾರಿದ್ದರೆ ಕುಡಿಯಲು ಕೊಡು. 22ಹೀಗೆ ಅವನ ತಲೆಯಮೇಲೆ ಉರಿಕೆಂಡ ಸುರಿವೆ; ಸರ್ವೇಶ್ವರನಿಂದಲೂ ಪ್ರತಿಫಲ ಪಡೆಯುವೆ.

23 ಮಳೆ ಬರುವುದು ಪಡುವಣ ಗಾಳಿಯಿಂದ; ಮುಖಕ್ಕೆ ಸಿಟ್ಟು ಬರುವುದು ಚಾಡಿ ನಾಲಿಗೆಯಿಂದ.

24 ಜಗಳಗಂಟಿಯೊಡನೆ ಮಹಡಿ ಮನೆಯಲ್ಲಿರುವುದಕ್ಕಿಂತ ಗುಡಿಸಿಲಿನ ಮೂಲೆಯಲ್ಲಿ ಒಂಟಿಯಾಗಿ ವಾಸಿಸುವುದು ಲೇಸು.

25 ದೂರನಾಡಿನಿಂದ ಬಂದ ಶುಭವರದಿ, ದಣಿದ ಪ್ರಾಣಕ್ಕೆ ತಣ್ಣೀರ ತೃಪ್ತಿ.

26 ದುಷ್ಟರಿಗೆ ಬಿಟ್ಟುಕೊಡುವ ನೀತಿವಂತ ಕೆಸರಿನ ಬುಗ್ಗೆಗೆ, ಕೊಳಕು ಚಿಲುಮೆಗೆ ಸಮಾನ.

27 ಜೇನನ್ನು ಹೆಚ್ಚಾಗಿ ತಿನ್ನುವುದು ಹಿತವಲ್ಲ, ಗೌರವದ ಮೇಲೆ ಗೌರವ ಬಯಸುವುದು ಸರಿಯಲ್ಲ.

28 ಆತ್ಮಸ್ವಾಧೀನವಲ್ಲದ ಮನುಷ್ಯ ಗೋಡೆ ಬಿದ್ದು ಕಾವಲಿಲ್ಲದ ಹಾಳೂರು.

**26** ಬೇಸಿಗೆಯಲ್ಲಿ ಮಂಜು ಬೀಳುತ್ತದೆಯೇ? ಸುಗ್ಗಿಯಲ್ಲಿ ಮಳೆ ಬರುತ್ತದೆಯೇ? ಹಾಗೆಯೆ ಬುದ್ಧಿಹೀನನಿಗೆ ತೋರುವ ಮಾನಮರ್ಯಾದೆ.

2 ಕುಪ್ಪಳಿಸುವ ಗುಬ್ಬಿಯಂತೆ, ಹಾರಾಡುವ ಬಾನಕ್ಕಿಯಂತೆ, ಕಾರಣವಿಲ್ಲದೆ ಕೊಟ್ಟ ಶಾಪ ಗಾಳಿ ಪಾಲಾಗುತ್ತದೆ.

3 ಕುದುರೆಗೆ ಚಬುಕು, ಕತ್ತೆಗೆ ಕಡಿವಾಣ, ಮೂಢನಿಗಾದರೊ ಬೆನ್ನಿಗೆ ಬೆತ್ತ.

4 ಮೂಢನ ಪ್ರಶ್ನೆಗೆ ಉತ್ತರಕೊಡಬೇಡ; ಮೂರ್ಖನಂತೆ ಕೊಟ್ಟರೆ ನೀನೂ ಆದಿಯೇ ಅವನಂತೆ.

5 ಮೂಢನಿಗೆ ಅವನ ಮೂರ್ಖತನ ತಿಳಿಯುವಂತೆ ಉತ್ತರಕೊಡು; ಇಲ್ಲವಾದರೆ ತನ್ನನ್ನೆ ಜ್ಞಾನಿಯೆಂದು ಎಣಿಸಿಕೊಂಡಾನು.

6 ಮೂಢನನ್ನು ದೂತನನ್ನಾಗಿ ಕಳುಹಿಸುವವನು ತನ್ನ ಕಾಲನ್ನು ತಾನೆ ಕಡಿದುಕೊಳ್ಳುವನು, ತನ್ನ ಕೇಡನ್ನು ತಾನೆ ಕುಡಿಯುವನು.

7 ತುಂಟ ಆಡುವ ಜ್ಞಾನೋಕ್ತಿಯು ಕುಂಟ ಕಾಲಿನ ಜೋಲಾಟವು.

8 ಮೂಢನಿಗೆ ಕೊಡುವ ಮಾನ ಕವಣೆಗೆ ಕಟ್ಟಿದ ಕಲ್ಲು.

9 ಮೂಢನ ಬಾಯಿಗೆ ಸಿಕ್ಕಿದ ಜ್ಞಾನೋಕ್ತಿಯು ಕುಡುಕನ ಕೈಗೆ ಸಿಕ್ಕಿದ ಮುಳ್ಳುಗೋಲು.

10 ಮೂಢರನ್ನೂ ದಾರಿಹೋಕರನ್ನೂ ಕೂಲಿಗೆ ಕರೆಯುವವನು ಯಾರಿಗಾದರೂ ತಗಲಲಿ ಎಂದು ಬಾಣ ಎಸೆಯುವವನಿಗೆ ಸಮಾನ.

11 ನಾಯಿ ತಾನು ಕಕ್ಕಿದ್ದನ್ನು ನೆಕ್ಕಲು ತಿರುಗಿ ಬರುವುದು; ಮೂಢನು ತಾನು ಮಾಡಿದ ಮೂರ್ಖತನಕ್ಕೆ ಹಿಂದಿರುಗುವನು.

12 ತಾನೇ ಜ್ಞಾನಿಯೆಂದು ಎಣಿಸಿಕೊಳ್ಳುವವನನ್ನು ನೋಡು; ಅಂಥವನಿಗಿಂತ ಮೂಢನ ಸುಧಾರಣೆ ಹೆಚ್ಚು ಸಾಧ್ಯ.

13 "ಬೀದಿಯಲ್ಲಿದೆ, ಹೊರಗೆ ಓಡಾಡುತ್ತಿದೆ ಸಿಂಹ", ಇದು ಮೈಗಳ್ಳನ ಪಿಳ್ಳೆಯ ನೆವ.

14 ಕೀಲುಗುಣಿಯಲ್ಲಿ ಬಾಗಿಲು ತಿರುಗುವಂತೆ ಸುತ್ತಾಡುತ್ತಾನೆ ಸೋಮಾರಿ ಹಾಸಿಗೆಯಲ್ಲೆ.

15 ಮೈಗಳ್ಳ ಕೈಹಾಕುತ್ತಾನೆ ತುತ್ತಿಗೆ, ಅದನ್ನು ಬಾಯಿಗೆ ಎತ್ತಲಾರದಷ್ಟು ಆಯಾಸ ಅವನಿಗೆ.

16 ವಿವೇಕದಿಂದ ಉತ್ತರಿಸಬಲ್ಲ ಏಳು ಬುದ್ಧಿವಂತರಿಗಿಂತ ತಾನೇ ಜ್ಞಾನಿ ಎಂದುಕೊಳ್ಳುತ್ತಾನೆ ಸೋಮಾರಿ.

17 ಬೇರೆಯವರ ವ್ಯಾಜ್ಯದಲ್ಲಿ ತಲೆಹಾಕುವವನು ಬೀದಿ ನಾಯಿಯ ಬಾಲಎಳೆದ ದಾರಿ ಹೋಕನಿಗೆ ಸಮಾನನು;

18 ನೆರೆಯವನನ್ನು ಮೋಸಗೊಳಿಸಿ "ತಮಾಷೆಗಾಗಿ ಮಾಡಿದೆ" ಎನ್ನುವನವನು
19ಬೆಂಕಿಕೊಳ್ಳಿಗಳನ್ನೂ ಕೊಲ್ಲುವ ಬಾಣಗಳನ್ನೂ ಬೀರುವ ದೊಡ್ಡ ಹುಚ್ಚನಿಗೆ ಸಮಾನನು.

20 ಸೌದೆಯಿಲ್ಲದಿದ್ದರೆ ಬೆಂಕಿ ಆರುವುದು; ಚಾಡಿಕೋರನಿಲ್ಲದಿದ್ದರೆ ಜಗಳ ಶಮನವಾಗುವುದು.

21 ಕೆಂಡಕ್ಕೆ ಇದ್ದಲುಬೇಕು, ಬೆಂಕಿಗೆ ಸೌದೆ ಬೇಕು; ವ್ಯಾಜ್ಯ ಕೆರಳಿಸಲು ಜಗಳಗಂಟಿ ಇರಲೇಬೇಕು.

22 ಚಾಡಿಕೋರನ ಮಾತು ರುಚಿಕರವಾದ ತುತ್ತು; ಹೊಟ್ಟೆಯೊಳಕ್ಕೆ ಗುಳುಕ್ಕನೆ ಇಳಿಯುತ್ತದೆ ಅದು.

23 ಕೆಟ್ಟ ಹೃದಯದಿಂದ ಸವಿನುಡಿಯು ತುಟಿ, ಬೆಳ್ಳಿ ಮೆರುಗಿನಿಂದ ಥಳಿಸುವ ಮಣ್ಣಿನ ಬೋಕಿ.

24 ಹಗೆಗಾರನ ತುಟಿಯಲ್ಲಿ ಸ್ನೇಹಭಾವದ ನಟನೆ; ಹೊಟ್ಟೆಯಲ್ಲಾದರೊ ಹುದುಗಿದ ವಂಚನೆ.
25ಹಗೆಗಾರ ಸವಿನುಡಿದರೂ ನಂಬಬೇಡ; ಹೃದಯದಲ್ಲಿದೆ ಏಳ್ಮಡಿ ಹೇಯ ಕೃತ್ಯ. 26ಹಗೆಯನ್ನು
ವಂಚನೆಯಿಂದ ಮರೆಮಾಚಿದ್ದರೂ ಸಭೆಯಲ್ಲಿ ಕೆಟ್ಟತನ ಬಟ್ಟಬಯಲಾಗದಿರದು.

27 ಗುಂಡಿಯನ್ನು ತೋಡುವವನು ತಾನೇ ಅದರಲ್ಲಿ ಬೀಳುವನು; ಹೊರಳಿಸುವವನ ಮೇಲೆಯೆ ಗುಂಡು ಹೊರಳುವುದು.

28 ಸುಳ್ಳುನಾಲಿಗೆ ಹಗೆಮಾಡುತ್ತದೆ ಸತ್ಯವನ್ನು; ಹೊಗಳುಭಟ್ಟನ ಬಾಯಿ ತರುತ್ತದೆ ನಷ್ಟವನ್ನು.

**27** ನಾಳೆ ಕುರಿತು ಕೊಚ್ಚಿಕೊಳ್ಳಬೇಡ; ಇಂದು ಒದಗಲಿರುವುದೇ ನಿನಗೆ ತಿಳಿದಿಲ್ಲ.

2 ನಿನ್ನ ಬಾಯಿ ಅಲ್ಲ, ಬೇರೆಯವರು ಹೊಗಳಲಿ ನಿನ್ನ; ಆತ್ಮಸ್ತುತಿ ಸಲ್ಲ, ಅನ್ಯರು ಸ್ತುತಿಸಲಿ ನಿನ್ನ.

3 ಕಲ್ಲು ಭಾರ, ಮರಳು ಭಾರ, ಮೂಢನ ರೇಗಾಟ ಇವೆರಡಕ್ಕೂ ಬಲುಭಾರ.

4 ಕೋಪವು ಕ್ರೂರ, ಕ್ರೋಧವು ಪ್ರವಾಹ, ಮತ್ಸರದ ಮುಂದೆ ನಿಲ್ಲಬಲ್ಲವರಾರು?

5 ಮರೆಯಾದ ಪ್ರೀತಿಗಿಂತ ಬಹಿರಂಗವಾದ ಗದರಿಕೆ ಲೇಸು.

6 ಮಿತ್ರನು ಕೊಡುವ ಗುದ್ದು ಹಿತಕರ; ಶತ್ರುವು ಕೊಡುವ ಮುದ್ದು ಮೋಸಕರ.

7 ಹೊಟ್ಟೆ ತುಂಬಿದವನಿಗೆ ಜೇನುಕೊಟ್ಟರೂ ಕಹಿ; ಹೊಟ್ಟೆ ಹಸಿದವನಿಗೆ ಏನು ಕೊಟ್ಟರು ಸಿಹಿ.

8 ಮನೆಬಿಟ್ಟು ಅಲೆಯುವ ವ್ಯಕ್ತಿ, ಗೂಡುಬಿಟ್ಟು ಅಲೆಯುವ ಹಕ್ಕಿ.

9 ತೈಲ, ಸುಗಂಧ ದ್ರವ್ಯಗಳು ಮನೋಹರ; ಮಿತ್ರನ ಆದರಣೆ, ಸಲಹೆ ಅತಿ ಮಧುರ.

10 ನಿನಗೂ ನಿನ್ನ ಹೆತ್ತವನಿಗೂ ಮಿತ್ರನಾದವನನ್ನು ಬಿಡಬೇಡ; ಇಕ್ಕಟ್ಟಿನ ದಿನದಲ್ಲಿ ಒಡ ಹುಟ್ಟಿದವರನ್ನು ಆಶ್ರಯಿಸಬೇಡ; ದೂರವಿರುವ ಅಣ್ಣನಿಗಿಂತ ಹತ್ತಿರವಿರುವ ನೆರೆಯವನೆ ಲೇಸು.

11 ಮಗನೇ, ಜ್ಞಾನಗಳಿಸಿ ನನ್ನ ಮನಸ್ಸನ್ನು ಸಂತೋಷಪಡಿಸು; ಆಗ ನನ್ನ ನಿಂದಕರಿಗೆ ಸರಿಯಾದ ಉತ್ತರ ಸಿಕ್ಕುವುದು.

12 ಜಾಣ ಕೇಡನ್ನು ಕಂಡು ಅಡಗಿಕೊಳ್ಳುತ್ತಾನೆ; ಕೋಣ ಮುನ್ನುಗ್ಗಿ ಹಾನಿಗೆ ಈಡಾಗುತ್ತಾನೆ.

13 ಅಪರಿಚಿತನಿಗೆ ಹೊಣೆಯಾದವನ ಬಟ್ಟೆ ಕಿತ್ತುಕೊ; ಅಪರಿಚಿತಳಿಗೆ ಹೊಣೆ ನಿಲ್ಲುವವನನ್ನೆ ಒತ್ತೆ ಇಟ್ಟುಕೊ.

14 ಮುಂಜಾನೆಯೆ ಅಬ್ಬರದಿಂದ ನೆರೆಯವನನ್ನು ಎಬ್ಬಿಸಿ ಮಾಡುವ ಆಶೀರ್ವಾದ, ಶಾಪವೆಂದೇ ಪರಿಗಣಿಸಲ್ಪಡುವುದು.

15 ತಂಟೆ ಮಾಡುವ ಹೆಂಡತಿ ತಟತಟನೆ ತೊಟ್ಟಿಕ್ಕುವ ಹನಿ. 16ಅಂಥವಳನ್ನು ಅಡಗಿಸಬಲ್ಲವನು
ಗಾಳಿಯನ್ನು ಅಡಗಿಸಬಲ್ಲ, ಕೈ ಎಣ್ಣೆ ಜಿಡ್ಡನ್ನೂ ಬಿಗಿಹಿಡಿಯಬಲ್ಲ.

17 ಕಬ್ಬಿಣ ಕಬ್ಬಿಣವನ್ನು ಹರಿತ ಮಾಡುವಂತೆ ಮಿತ್ರನು ಮಿತ್ರನ ಬುದ್ಧಿಯನ್ನು ಹರಿತ ಮಾಡಬಲ್ಲ.

18 ಅಂಜೂರವನ್ನು ಕಾಯುವವನು ಅದರ ಹಣ್ಣನ್ನು ತಿನ್ನುವನು; ಯಜಮಾನನನ್ನು ಕಾಯುವವನು ಸನ್ಮಾನವನ್ನು ಸವಿಯುವನು.

19 ನೀರು ಮುಖಕ್ಕೆ ಮುಖವನ್ನು ಪ್ರತಿಬಿಂಬಿಸುತ್ತದೆ; ಹೃದಯ ಮನುಷ್ಯನಿಗೆ ಮನುಷ್ಯನನ್ನು ತೋರ್ಪಡಿಸುತ್ತದೆ.

20 ನರಕ ಪಾತಾಳಗಳಿಗೆ ತೃಪ್ತಿಯೇ ಇಲ್ಲ; ಮನುಷ್ಯನ ಕಣ್ಣುಗಳಿಗೂ ತೃಪ್ತಿಯಿಲ್ಲ.

21 ಬೆಳ್ಳಿಬಂಗಾರಗಳಿಗೆ ಪುಟಕುಲುಮೆಗಳಿಂದ ಶೋಧನೆ; ಮನುಷ್ಯನಿಗೆ ತನ್ನ ಸ್ತುತಿಕೀರ್ತಿಯಿಂದ ಪರಿಶೋಧನೆ.

22 ಮೂರ್ಖನನ್ನು ಕಾಳಿನ ಸಂಗಡ ಒರಳಿಗೆ ಹಾಕಿ ಒನಕೆಯಿಂದ ಕುಟ್ಟಿದರೂ ಮೂರ್ಖತನ ತೊಲಗದು.

23 ನಿನ್ನ ಹಿಂಡುಗಳ ಪರಿಸ್ಥಿತಿಯನ್ನು ತಿಳಿದುಕೊ; ನಿನ್ನ ಮಂದೆಗಳನ್ನು ಚೆನ್ನಾಗಿ ನೋಡಿಕೊ.

24 ಸಿರಿಸಂಪತ್ತು ಶಾಶ್ವತವಲ್ಲ; ಕಿರೀಟ ತಲತಲಾಂತರಕ್ಕೂ ಇರುವುದಿಲ್ಲ.

25 ಹುಲ್ಲು ಕೊಯ್ದು ತಂದಮೇಲೆ, ಗುಡ್ಡದ ಸೊಪ್ಪು ಕೂಡಿಸಿಟ್ಟ ಮೇಲೆ, ಹಸಿ ಹುಲ್ಲು ಚಿಗುರುತ್ತದೆ.

26 ಕುರಿಗಳಿಂದ ನಿನ್ನ ಬಟ್ಟೆ ಬರೆ; ಆಡುಗಳಿಂದ ನಿನ್ನ ಹೊಲಗದ್ದೆ.

27 ನಿನ್ನ, ನಿನ್ನ ಮನೆಯವರ ಊಟ ತಿಂಡಿಗೆ, ನಿನ್ನ ದಾಸಿಯರ ಜೀವನಕ್ಕೆ ಮೇಕೆಗಳ ಹಾಲೇ ಸಾಕು.

**28** ಹಿಂದಟ್ಟದಿದ್ದರೂ ದುಷ್ಟನು ಹೆದರಿ ಓಡುವನು; ಸತ್ಯಸಂಧನು ಸಿಂಹದಂತೆ ಧೈರ್ಯದಿಂದಿರುವನು.

2 ಅರಾಜಕತೆಯಿಂದ ನಾಡಿನಲ್ಲಿ ನಾಯಕರನೇಕರು ತಲೆಯೆತ್ತುವರು; ಜ್ಞಾನ ಹಾಗೂ ವಿವೇಕದಿಂದ ನಾಡು ಸುಸ್ಥಿರವಾಗುವುದು.

3 ದಲಿತರನ್ನೇ ಹಿಂಸಿಸುವ ಬಡವ, ಕಾಳೂ ಉಳಿಯದಂತೆ ಜಡಿಯುವ ಮಳೆಗೆ ಸಮಾನ.

4 ಧರ್ಮಶಾಸ್ತ್ರವನ್ನು ಕೈಗೊಳ್ಳದವರು ದುಷ್ಟರನ್ನು ಹೊಗಳುವರು; ಕೈಗೊಳ್ಳುವವರು ಅವರ ವಿರುದ್ಧ ಹೋರಾಡುವರು.

5 ಕೆಟ್ಟವರು ನ್ಯಾಯ ನೀತಿಯನ್ನು ಗ್ರಹಿಸರು; ಸರ್ವೇಶ್ವರನ ಭಕ್ತರು ಅದನ್ನು ಪೂರ್ತಿಯಾಗಿ ಗ್ರಹಿಸುವರು.

6 ದುರ್ಮಾರ್ಗಿಯಾದ ಧನವಂತನಿಗಿಂತ ನಿರ್ದೋಷಿಯಾಗಿ ನಡೆವ ದರಿದ್ರನೇ ಲೇಸು.

7 ಜ್ಞಾನಿಯಾದ ಮಗ ಧರ್ಮಶಾಸ್ತ್ರವನ್ನು ಕೈಗೊಳ್ಳುವನು; ಹೊಟ್ಟೆಬಾಕರ ಗೆಳೆಯ ತಂದೆಗೆ ಅಪಕೀರ್ತಿ ತರುವನು.

8 ಬಡ್ಡಿಬಾಕಿಗಳಿಂದ ಬೆಳೆದ ಆಸ್ತಿ, ಬಡವರಲ್ಲಿ ಕನಿಕರವುಳ್ಳವನಿಗೆ ನಿಧಿ.

9 ಧರ್ಮಶಾಸ್ತ್ರಕ್ಕೆ ಕಿವಿಮುಚ್ಚಿಕೊಳ್ಳುವವನ ಪ್ರಾರ್ಥನೆ, ದೇವರಿಂದ ತಿರಸ್ಕೃತವಾದ ಪ್ರಾರ್ಥನೆ.

10 ನೆಟ್ಟಗೆ ನಡೆವವರನ್ನು ಕೆಟ್ಟದಾರಿಗೆ ಎಳೆಯುವವನು ತಾನು ತೋಡಿದ ಗುಂಡಿಯಲ್ಲಿ ತಾನೇ ಬೀಳುವನು; ನಿರ್ದೋಷಿಗು ಸುಖ ಸಂತೋಷಕ್ಕೆ ಬಾಧ್ಯಸ್ತರು.

11 ಹಣವಂತ ತಾನೇ ಜ್ಞಾನಿಯೆಂದು ಎಣಿಸಿಕೊಳ್ಳುವನು; ವಿವೇಕಿಯಾದ ಬಡವ ಅವನೆಂಥವನೆಂದು ಅರ್ಥಮಾಡಿಕೊಳ್ಳುವನು.

12 ಸತ್ಯಸಂಧರಿಗೆ ಜಯವಾದರೆ ಸಂಭ್ರಮ ಸಡಗರ; ದುಷ್ಟರನ್ನು ಉನ್ನತಿಗೇರಿಸಿದರೆ ಬೇರೆಯವರು ಮರೆಯಾಗುವರು.

13 ಪಾಪಗಳನ್ನು ಮುಚ್ಚಿಟ್ಟುಕೊಳ್ಳುವವನಿಗೆ ಮುಕ್ತಿ ದೊರಕದು; ಅವುಗಳನ್ನು ಒಪ್ಪಿಕೊಂಡು ಬಿಟ್ಟರೆ ಕರುಣೆ ದೊರಕುವುದು.

14 ಭಯದಿಂದ ನಡೆದುಕೊಳ್ಳುವವನು ಭಾಗ್ಯವಂತನು; ಕಠಿಣ ಹೃದಯನು ಕೇಡಿಗೆ ತುತ್ತಾಗುವನು.

15 ದಲಿತರನ್ನಾಳುವ ದುರುಳರಾಜ ಗರ್ಜಿಸುವ ಸಿಂಹ, ಹುಡುಕಾಡುವ ಕರಡಿ.

16 ವಿವೇಕಶೂನ್ಯನಾದ ಒಡೆಯ ಮಹಾಹಿಂಸಕ; ದುರ್ಲಾಭವನ್ನು ವಿರೋಧಿಸುವವನಿಗೆ ದೀರ್ಘಾಯುಷ್ಯ.

17 ನರಹತ್ಯಮಾಡಿದ ಪಾಪಾತ್ಮನು ಪಾತಾಳದತ್ತ ಓಡೋಡುತ್ತಿರುವನು; ಅವನನ್ನು ಯಾರೂ ತಡೆಯಬಾರದು.

18 ಸನ್ಮಾರ್ಗಿಗಳಿಗೆ ಸಂರಕ್ಷಣೆ, ದುರ್ಮಾರ್ಗಿಗಳಿಗೆ ಪತನ ತಟ್ಟನೆ.

19 ದುಡಿದು ಹೊಲ ಗೇಯುವವನಿಗೆ ಹೊಟ್ಟೆ ತುಂಬ ಅನ್ನ; ವ್ಯರ್ಥಕಾರ್ಯಗಳಲ್ಲಿ ಆಸಕ್ತನಾದವನಿಗೆ ಬೇಕಾದಷ್ಟು ಬಡತನ.

20 ಪ್ರಾಮಾಣಿಕನಿಗೆ ಪೂರ್ಣಾಶೀರ್ವಾದ; ಹಣವಂತನಾಗಲು ಹಾತೊರೆಯುವವನು ಶಿಕ್ಷಾರ್ಹ.

21 ಪಕ್ಷಪಾತ ತಕ್ಕುದಲ್ಲ; ತುತ್ತನ್ನಕ್ಕಾಗಿ ತಪ್ಪು ಮಾಡುವವರುಂಟು.

22 ಆಸ್ತಿಗಳಿಸಲು ಲೋಭಿಗೆ ಆತುರ; ತನಗೆ ಕೊರತೆ ಕಾದಿದೆಯೆಂದು ಆತ ಅರಿಯ.

23 ಮುಖಸ್ತುತಿ ಮಾಡುವವನಿಗಿಂತ ಗದರಿಸುವವನೇ ಕೊನೆಗೆ ಹೆಚ್ಚು ದಯಾವಂತ.

24 "ಅದು ತಪ್ಪಲ್ಲ" ಎಂದು ಹೆತ್ತವರ ಆಸ್ತಿಯನ್ನು ಕದಿಯುವವನು ಕೊಳ್ಳೆ ಹೊಡೆಯುವವರ ಸಂಗಡಿಗನು.

25 ಅತ್ಯಾಸೆಪಡುವವನು ಜಗಳವೆಬ್ಬಿಸುವನು; ಸರ್ವೇಶ್ವರನಲ್ಲಿ ಭರವಸೆಯಿಟ್ಟವನು ಬಲಿಷ್ಠನು.

26 ತನ್ನ ಶಕ್ತಿಯಲ್ಲೆ ಭರವಸೆ ಇಡುವವನು ಮೂಢನು; ಜ್ಞಾನಿಗಳ ಮಾರ್ಗದಲ್ಲಿ ನಡೆವವನು ವಿಮುಕ್ತನಾಗುವನು.

27 ಬಡವರಿಗೆ ಕೊಡುವವನು ಕೊರತೆಪಡನು; ಅವರನ್ನು ಕಂಡೂ ಕಾಣದಂತೆ ಇರುವವನು ಬಹುಶಾಪಗ್ರಸ್ಥನು.

28 ದುಷ್ಟರು ಪ್ರಬಲವಾದರೆ ಜನರು ತಲೆ ಮರೆಸಿಕೊಳ್ಳುವರು; ದುಷ್ಟರು ನಾಶವಾದರೆ ಶಿಷ್ಟರು ವೃದ್ಧಿಯಾಗುವರು.

**29** ಎಷ್ಟು ಗದರಿಸಿದರೂ ತಗ್ಗದ ಹಟಮಾರಿ ಫಕ್ಕನೆ ಬೀಳುವನು, ಮತ್ತೆ ಏಳನು.

2 ಸಜ್ಜನರ ಅಧಿಕಾರದಿಂದ ಜನರಿಗೆ ನಲಿದಾಟ; ದುರ್ಜನರ ಆಳ್ವಿಕೆಯಿಂದ ಜನರಿಗೆ ನರಳಾಟ.

3 ಜ್ಞಾನಪ್ರಿಯ ಮಗನಿಂದ ತಂದೆಗೆ ಸಂತೋಷ; ವೇಶ್ಯೆಯರ ಸಂಗದಿಂದ ಆಸ್ತಿ ವಿನಾಶ.

4 ನ್ಯಾಯಪಾಲಕ ರಾಜನಿಂದ ನಾಡಿನ ಅಭಿವೃದ್ಧಿ; ಲಂಚಕೋರ ಅರಸನಿಂದ ದೇಶ ಹಿಡಿವುದು ವಿನಾಶದ ಹಾದಿ.

5 ನೆರೆಯವನನ್ನು ಅಳತೆಮೀರಿ ಹೊಗಳುವವನು ಅವನ ಕಾಲಿಗೆ ಬಲೆಯನ್ನು ಒಡ್ಡುವನು.

6 ಕೆಟ್ಟವನು ತನ್ನ ಪಾಪಪಾಶದಲ್ಲೆ ಸಿಕ್ಕಿಬೀಳುವನು; ಒಳ್ಳೆಯವನು ಉಲ್ಲಾಸದಿಂದ ಹಾಡಿ ಹರ್ಷಿಸುವನು.

7 ನೀತಿವಂತನು ದಲಿತರ ಹಕ್ಕುಬಾಧ್ಯತೆಯನ್ನು ಕಾದಿರಿಸುವನು; ದುಷ್ಟರಿಗಿಲ್ಲ ಅದನ್ನು ಗ್ರಹಿಸುವಷ್ಟು ಅಕ್ಕರೆ.

8 ಕುಚೋದ್ಯರು ಪಟ್ಟಣಕ್ಕೆ ಬೆಂಕಿ ಹಚ್ಚುವರು; ಜ್ಞಾನಿಗಳೊ ರೋಷಾಗ್ನಿಯನ್ನು ಆರಿಸುವರು.

9 ಮೂರ್ಖನ ಸಂಗಡ ಜ್ಞಾನಿ ತರ್ಕಮಾಡಿದ್ದೆ ಆದರೆ ಆ ಮೂರ್ಖ ರೇಗಬಹುದು, ನಗಬಹುದು, ತರ್ಕಮಾತ್ರ ಮುಗಿಯದು.

10 ಕೊಲೆಪಾತಕರು ನೀತಿವಂತನನ್ನು ದ್ವೇಷಿಸುವರು; ಅಂಥವನ ಪ್ರಾಣಕ್ಕೂ ಹೊಂಚುಹಾಕುವರು.

11 ಮೂಢನು ತನ್ನ ಕೋಪವನ್ನೆಲ್ಲ ವ್ಯಕ್ತಪಡಿಸುವನು; ಜ್ಞಾನಿ ತನ್ನ ಕೋಪವನ್ನು ತಡೆಹಿಡಿದು ಶಮನಗೊಳ್ಳುವನು.

12 ಸುಳ್ಳುವರದಿಗೆ ಕಿವಿಗೊಡುವ ರಾಜಸೇವಕರೆಲ್ಲರು ದುರುಳರು.

13 ದಲಿತನೂ, ದಬ್ಬಾಳಿಕೆ ನಡೆಸುವವನೂ ಸ್ಥಿತಿಯಲ್ಲಿ ಎದುರುಬದುರು; ಆದರೆ ಸರ್ವೇಶ್ವರನೆ ಅವರಿಬ್ಬರ ಕಣ್ಣುಗಳನ್ನು ಬೆಳಗಿಸುವವನು.

14 ಬಡಬಗ್ಗರನ್ನು ನ್ಯಾಯವಾಗಿ ಆಳುವ ಅರಸನ ಸಿಂಹಾಸನ ಸದಾ ಸುಭದ್ರ.

15 ಬೆತ್ತ ಬೆದರಿಕೆಗಳು ಜ್ಞಾನ ತರುತ್ತವೆ; ಶಿಕ್ಷಿಸದೆ ಬಿಟ್ಟ ಮಗನು ತಾಯಿಗೆ ತರುತ್ತಾನೆ ಅಪಕೀರ್ತಿ.

16 ದುಷ್ಟರ ವೃದ್ಧಿ ಪಾಪಾಭಿವೃದ್ಧಿ; ಅವರ ಪತನವನ್ನು ಸಜ್ಜನರು ಕಣ್ಣಾರೆಕಾಣುವರು.

17 ನಿನ್ನ ಮಗನನ್ನು ದಂಡಿಸಿ ಸರಿಪಡಿಸು; ಅವನು ನಿನ್ನನ್ನು ಸಂತೋಷಪಡಿಸುವನು, ಮನೋಲ್ಲಾಸ ಗೊಳಿಸುವನು.

18 ಪ್ರವಾದನೆಗಳಿಲ್ಲದಿರುವಾಗ ಪ್ರಜೆಗಳು ಅಂಕೆ ಮೀರಿ ನಡೆಯುತ್ತಾರೆ, ಧರ್ಮಶಾಸ್ತ್ರಾನುಸಾರ ನಡೆಯುವವನು ಭಾಗ್ಯವಂತನು.

19 ಮಾತಿನಿಂದ ಮಾತ್ರ ಸೇವಕನನ್ನು ತಿದ್ದಲಾಗದು; ಮಾತುಕಿವಿಗೆ ಬಿದ್ದರೂ ಅದನ್ನು ಗ್ರಹಿಸಲಾರದು.

20 ದುಡುಕಿ ಮಾತಾಡುವವನನ್ನು ನೋಡು; ಅಂಥವನಿಗಿಂತಲು ಮೂಢನ ಸುಧಾರಣೆ ಹೆಚ್ಚು ಸಾಧ್ಯ.

21 ಬಾಲ್ಯದಿಂದ ಕೋಮಲವಾಗಿ ಸಾಕಲಾದ ಸೇವಕನು, ಕೊನೆಗೆ ಕುಮಾರನಂತೆ ನಿನ್ನದೆಲ್ಲವನ್ನು ಕಿತ್ತುಕೊಂಡಾನು.

22 ಕೋಪಿಷ್ಠನು ಜಗಳವೆಬ್ಬಿಸುವನು; ಕ್ರೋಧಶೀಲನು ದೋಷಭರಿತನು.

23 ಗರ್ವವು ಮನುಷ್ಯನನ್ನು ದೀನಸ್ಥಿತಿಗೆ ಇಳಿಸುವುದು; ನಮ್ರತೆ ಅವನನ್ನು ಗೌರವಸ್ಥಿತಿಗೆ ಏರಿಸುವುದು.

24 ಚೋರರ ಮಿತ್ರ ಸ್ವಂತ ಪ್ರಾಣಕ್ಕೆ ಶತ್ರು, ಶಾಪ ಕಿವಿಗೆ ಬೀಳುತ್ತಿದ್ದರೂ ಆತ ಮೌನ ತಾಳುವನು.

25 ಮಾನವರಿಗೆ ಹೆದರಿ ನಡೆವವನು ಬಲೆಗೆ ಸಿಕ್ಕಿಬೀಳುವನು; ಸರ್ವೇಶ್ವರನಲ್ಲಿ ನಂಬಿಕೆಯಿಟ್ಟವನು ಸಂರಕ್ಷಣೆ ಹೊಂದುವನು.

26 ರಾಜ್ಯಾಧಿಕಾರಿಗಳಲ್ಲಿ ದಯೆಯಾಚಿಸುವವರು ಅನೇಕರು; ಪ್ರತಿಯೊಬ್ಬನಿಗೆ ಸರಿಯಾದ ನ್ಯಾಯದೊರಕಿಸುವವನು ಸರ್ವೇಶ್ವರನು.

27 ಸಜ್ಜನರಿಗೆ ದುರ್ಮಾರ್ಗಿ ತಿರಸ್ಕೃತನು; ದುರ್ಜನರಿಗೆ ಸನ್ಮಾರ್ಗಿ ತಿರಸ್ಕೃತನು.

### ಆಗೂರನ ಹಿತೋಕ್ತಿಗಳು

**30** ಮಸ್ಸಾಗೆ ಸೇರಿದ ಜಾಕೆ ಎಂಬುವವನ ಮಗ ಆಗೂರನ ಹಿತೋಕ್ತಿಗಳು: ಈತನು ಇಂಥಿಯೇಲನಿಗೆ ಹಾಗೂ ಉಕ್ಕಾಲನಿಗೆ ಮಾಡಿದ ಪ್ರವಾದನೆ:

2 ಮಾನವರಲ್ಲಿ ನನ್ನಂಥ ಪಶುಪ್ರಾಯನಿಲ್ಲ;
ಮನುಷ್ಯ ವಿವೇಕವೂ ನನಗಿಲ್ಲ.
3 ಜ್ಞಾನವನ್ನು ನಾನು ಪಡೆದುಕೊಂಡಿಲ್ಲ
ಪರಮಪಾವನರ ತಿಳುವಳಿಕೆ ನನಗಿಲ್ಲ.
4 ಆಕಾಶಕ್ಕೆ ಏರಿ ಮರಳಿದವನು ಯಾರು?
ಮುಷ್ಟಿಯಲ್ಲಿ ಗಾಳಿಯನ್ನು ಹಿಡಿದಿಟ್ಟವನು
ಯಾರು?
ಬಟ್ಟೆಯಲ್ಲಿ ನೀರನ್ನು ಮೂಟೆಕಟ್ಟಿದವನು
ಯಾರು?
ಭೂಮಿಗೆ ಎಲ್ಲೆಮೇರೆಗಳನ್ನು
ನಿಗದಿಮಾಡಿದವನು ಯಾರು?
ಆತನ ಹೆಸರೇನು? ಆತನ ಮಗನ ಹೆಸರೇನು?
ಬಲ್ಲೆಯಾ?

5 ದೇವರ ಒಂದೊಂದು ಮಾತೂ ಪರಿಶುದ್ಧ; ಆತನೇ ಶರಣರ ಖೇಡ್ಯ; 6ಆತನ ಮಾತುಗಳಿಗೆ ಯಾವುದನ್ನೂ ಸೇರಿಸಬೇಡ, ಇಲ್ಲವಾದರೆ ಆತ ನಿನ್ನನ್ನು ಖಂಡಿಸಿಯಾನು, ನೀನು ಸುಳ್ಳುಗಾರನಾಗಿ ತೋರಿಬಂದೀಯೆ!

## ಹೆಚ್ಚು ಜ್ಞಾನೋಕ್ತಿಗಳು

7 ನಿನ್ನಿಂದ ಎರಡು ವರಗಳನ್ನು ಬೇಡಿಕೊಂಡಿದ್ದೇನೆ: ನಿರಾಕರಿಸಬೇಡ, ನಾನು ಸಾಯುವುದರೊಳಗೆ ಅವುಗಳನ್ನು ಅನುಗ್ರಹಿಸು: 8ಕಪಟವಾದುದನ್ನು, ಮಿಥ್ಯವಾದುದನ್ನು ನನ್ನಿಂದ ತೊಲಗಿಸು; ನನಗೆ ಬಡತನ ಬೇಡ, ಐಶ್ವರ್ಯವೂ ಬೇಡ, ಸಾಕಷ್ಟು ಆಹಾರವನ್ನು ಮಾತ್ರ ನೀಡು. 9ಎಲ್ಲವೂ ಇದ್ದರೆ "ಸರ್ವೇಶ್ವರನು ಯಾರು?" ಎಂದು ನಿನ್ನನ್ನೆ ನಾನು ತಿರಸ್ಕರಿಸೇನು. ಬಡವನಾದರೆ ಕಳ್ಳತನಮಾಡಿ ನನ್ನ ದೇವರಾದ ನಿನ್ನ ಹೆಸರಿಗೆ ಅಪಕೀರ್ತಿ ತಂದೇನು.

10 ದಾಸನ ವಿರುದ್ಧ ದಣಿಗೆ ದೂರು ಹೇಳಬೇಡ; ಅವನು ನಿನ್ನನ್ನು ಶಪಿಸಾನು, ನಿನ್ನಲ್ಲೆ ದೋಷಕಂಡು ಬಂದೀತು.

11 ತಂದೆಯನ್ನೇ ಶಪಿಸುವ, ತಾಯಿಗು ಮರ್ಯಾದೆಯನ್ನೂ ತರದ ಮಕ್ಕಳುಂಟು.

12 ತಮ್ಮ ಕೊಳೆಯನ್ನು ತೊಳೆದುಕೊಳ್ಳದ, ತಾವೆ ಪರಿಶುದ್ಧರೆಂದು ಎಣಿಸಿಕೊಳ್ಳುವ ಜನರುಂಟು.

13 ಮೇಲಿಂದ ಮೇಲಕ್ಕೆ ದೃಷ್ಟಿಸಿ ನೋಡುವ, ಠೀವಿಯಿಂದ ಕಣ್ಣುರೆಪ್ಪೆಗಳನ್ನೇರಿಸುವ ಜನರುಂಟು.

14 ಖಡ್ಗದಂಥ ಹಲ್ಲುಗಳು, ಕತ್ತಿಯಂಥ ಕೋರೆಗಳೂ ಉಳ್ಳವರಿದ್ದಾರೆ. ನಾಡಿನ ಬಡವರನ್ನು ಇವರು ತಿಂದುಬಿಡುವರು; ಜನರಲ್ಲಿ ದಿಕ್ಕಿಲ್ಲದವರನ್ನು ಇವರು ನುಂಗಿಬಿಡುವರು.

## ಸಂಖ್ಯಾತ್ಮಕ ಹಿತೋಕ್ತಿಗಳು

15 ಜಿಗಣೆಗೆ "ಕೊಡು, ಕೊಡು" ಎಂಬ ಇಬ್ಬರು ಹೆಣ್ಣು ಮಕ್ಕಳುಂಟು; ಎಂದೂ ತೃಪ್ತಿ ಪಡೆಯದವು ಮೂರುಂಟು: ಹೌದು, 'ಸಾಕು' ಎನ್ನದವುಗಳು ನಾಲ್ಕುಂಟು:

16 ಅವು ಯಾವುವೆಂದರೆ: ಪಾತಾಳ, ಹೆರದಗರ್ಭ,
ನೀರಿಗಾಗಿ ಹಾತೊರೆಯುವ ಭೂಮಿ.
'ಸಾಕಾಯಿತು' ಎನ್ನದ ಬೆಂಕಿ.

17 ತಂದೆಯನ್ನು ಪರಿಹಾಸ್ಯ ಮಾಡುವ ಕಣ್ಣನ್ನು, ತಾಯಿಯ ಆಜ್ಞೆಯನ್ನು ಧಿಕ್ಕರಿಸುವ ನೇತ್ರವನ್ನು ಹಳ್ಳಕೊಳ್ಳದ ಕಾಗೆಗಳು ಕುಕ್ಕುವುವು, ರಣಹದ್ದುಗಳು ತಿಂದುಬಿಡುವುವು.

18 ನನ್ನ ಅರಿವಿಗೆ ಬಾರದ ಮೂರು ವಿಷಯಗಳಿವೆ: ಹೌದು, ನನ್ನ ಬುದ್ಧಿಗೆ ಎಟುಕದವು ನಾಲ್ಕಿವೆ:

19 ಅವು ಯಾವುವೆಂದರೆ:
ಆಕಾಶದಲ್ಲಿ ಹದ್ದಿನ ಹಾದಿ,
ಬಂಡೆಯ ಮೇಲೆ ಸರ್ಪದ ಸರಣಿ,
ಸಾಗರದ ನಡುವೆ ಹಡಗಿನ ಮಾರ್ಗ,
ಯುವಕ-ಯುವತಿಯರ ಪರಸ್ಪರ ಆಕರ್ಷಣೆ.

20 ವ್ಯಭಿಚಾರಿಣಿಯ ವರ್ತನೆ ಹೀಗಿದೆ: ಅವಳು ಉಣ್ಣುತ್ತಾಳೆ, ಬಾಯಿ ಒರೆಸಿಕೊಳ್ಳುತ್ತಾಳೆ. ಬಳಿಕ 'ನಾನು ತಪ್ಪುಮಾಡಲಿಲ್ಲವಲ್ಲಾ' ಎನ್ನುತ್ತಾಳೆ.

21 ಜಗತ್ತು ಮೂರು ವಿಷಯಗಳ ನಿಮಿತ್ತ ಕಂಪಿಸುತ್ತದೆ: ನಾಲ್ಕರ ನಿಮಿತ್ತವೂ ಹೊರೆ ತಾಳಲಾರದಂತೆ ಆಗುತ್ತದೆ:

22 ಅವು ಯಾವುವೆಂದರೆ: ಅರಸನಾದ ಆಳು.
ಹೊಟ್ಟೆ ತುಂಬಿಸಿಕೊಂಡು ಸುತ್ತಾಡುವ
ನೀಚ.

23 ಯಾರಿಗೂ ಬೇಡದವಳಾಗಿದ್ದ ಮದುವೆಯಾದ
ಚಂಡಿ,
ಧರ್ಮಪತ್ನಿಯ ಸ್ಥಾನವನ್ನು ಕಸಿದುಕೊಂಡ
ದಾಸಿ.

24 ಚಿಕ್ಕವು ಆದರೂ ದೊಡ್ಡ ಜ್ಞಾನವುಳ್ಳ ನಾಲ್ಕು ಜಂತುಗಳುಂಟು:

25 ಇರುವೆಗಳು – ಬಲಹೀನ ಜಂತುಗಳು,
ಆದರೂ ಸುಗ್ಗಿಯಲ್ಲೆ ಆಹಾರವನ್ನು
ಸೇರಿಸಿಟ್ಟುಕೊಳ್ಳುತ್ತವೆ;
26 ಬೆಟ್ಟದ ಮೊಲಗಳು – ದೊಡ್ಡ ಪ್ರಾಣಿಗಳೇನೂ
ಅಲ್ಲ,
ಆದರೂ ಬಂಡೆಗಳ ಬಿರುಕುಗಳಲ್ಲಿ
ಮನೆಮಾಡಿಕೊಳ್ಳುತ್ತವೆ;
27 ಮಿಡತೆಗಳು – ಅವಕ್ಕೆ ಅರಸನಿಲ್ಲ
ಆದರೂ ಅವೆಲ್ಲ ದಂಡುದಂಡಾಗಿ
ಹೊರಡುತ್ತವೆ;
28 ಹಲ್ಲಿ – ಅಂಗೈ ಆಸರೆ ಪಡೆವ ಪ್ರಾಣಿ
ಆದರೂ ಅರಮನೆಗಳಲ್ಲಿ ವಾಸ ಮಾಡುತ್ತದೆ.

29 ಗಂಭೀರ ಗಮನದ ಮೂರು ಪ್ರಾಣಿಗಳುಂಟು: ಹೌದು ಗಂಭೀರ ಗತಿಯ ನಾಲ್ಕನೆಯ ಪ್ರಾಣಿಯೂ ಉಂಟು:

30 ಯಾವುದಕ್ಕು ಹೆದರಿ ಓರೆಯಾಗದ
ಮೃಗರಾಜನಾದ ಸಿಂಹ,
31 ಕತ್ತೆತ್ತಿ ನಡೆಯುವ ಹುಂಜ,
ಮಂದೆಗೆ ಮುಂದೆ ಹೋಗುವ ಹೋತ,
ಸೈನ್ಯ ಸಮೇತನಾದ ರಾಜ.

32 ನೀನು ಗರ್ವದಿಂದ ಮೂರ್ಖನಾಗಿ ನಡೆದಿದ್ದರೆ, ದುರಾಲೋಚನೆಯನ್ನು ಮಾಡಿದ್ದರೆ ಬಾಯಿಯ ಮೇಲೆ ಕೈಯಿಟ್ಟುಕೊ.

33 ಹಾಲು ಕಡೆಯುವುದರಿಂದ ಬೆಣ್ಣೆ; ಮೂಗು ಹಿಂಡುವುದರಿಂದ ರಕ್ತ; ಕೋಪ ಎಬ್ಬಿಸುವುದರಿಂದ ಜಗಳ.

## ರಾಜನಿಗೆ ಬುದ್ಧಿಮಾತು

**31** ಮಸ್ಸಾರಾಜ್ಯದ ಅರಸ ಲೆಮೂವೇಲನ ವಚನಗಳು: ಅವನ ತಾಯಿ ಅವನಿಗೆ ಉಪದೇಶಿಸಿದ ಹಿತೋಕ್ತಿಗಳು:

2 ಮಗನೇ, ನನ್ನ ಕರುಳಿನ ಕುಡಿಯೇ, ನನ್ನ ಹರಕೆಯ ಮಗನೇ, ನಾನು ಹೇಳುವುದನ್ನು ಕೇಳು:
3ನಿನ್ನ ಪೌರುಷತ್ವವನ್ನೆಲ್ಲಾ ಸ್ತ್ರೀಯರಿಗೆ ಒಪ್ಪಿಸದಿರು; ಅರಸನನ್ನೆ ನಾಶಮಾಡಬಲ್ಲ ಅವರಿಗಾಗಿ ಹಣವನ್ನೆಲ್ಲ
ವ್ಯಯಮಾಡದಿರು. 4ಕುಡುಕತನ ರಾಜನಿಗೆ ತಕ್ಕುದ್ದಲ್ಲ; ಲೆಮೂವೇಲನೇ ಕೇಳು, ಅದು ರಾಜನಿಗೆ
ಯೋಗ್ಯವಲ್ಲ; ಮದ್ಯಪಾನಾಸಕ್ತಿ ಅಧಿಕಾರಿಗಳಿಗೆ ಹಿತವಲ್ಲ. 5ಕುಡಿದರೆ ಕರ್ತವ್ಯವನ್ನು ಮರೆಯುತ್ತಾರೆ;
ದೀನದಲಿತರಿಗೆ ನ್ಯಾಯ ತೀರಿಸದೆ ತಾರತಮ್ಯ ಮಾಡುತ್ತಾರೆ. 6ಸಾರಾಯಿ ಸಾಯುತ್ತಿರುವವನಿಗಿರಲಿ; ಮದ್ಯ,
ಮನೋವ್ಯಥೆ ಪಡುವವನಿಗಿರಲಿ. 7ಅವರು ಕುಡಿದು ಬಡತನ ಮರೆಯಲಿ, ತಮ್ಮ ಯಾತನೆಯನ್ನು
ನೆನೆಯದಿರಲಿ.

8 ಬಾಯಿಲ್ಲದವರ ಹಾಗೂ ದೀನದಲಿತರ ಪರವಾಗಿ ನ್ಯಾಯದೊರಕುವಂತೆ ಬಾಯಿಬಿಚ್ಚಿ
ಮಾತಾಡು. 9ಅವರ ಪರವಾಗಿ ಮಾತಾಡಿ ನ್ಯಾಯವಾದ ತೀರ್ಪುಕೊಡು; ದೀನದರಿದ್ರರ ಹಕ್ಕು
ಬಾಧ್ಯತೆಯನ್ನು ಕಾಪಾಡು.

## ಗುಣವತಿಯಾದ ಹೆಂಡತಿ

10 ಗುಣವತಿಯಾದ ಹೆಂಡತಿ ಎಲ್ಲಿ ಸಿಕ್ಕಾಳು? ಆಕೆ ಹವಳಕ್ಕಿಂತಲೂ ಬಹು ಮೌಲ್ಯಳು.

11 ಗಂಡನು ಆಕೆಯಲ್ಲಿ ಹೃತ್ಪೂರ್ವಕ ನಂಬಿಕೆಯಿಡುವನು; ಅವನಿಗೆ ಆದಾಯದ ಕೊರತೆ ಇರದು.

12 ಜೀವಮಾನವಿಡೀ ಆಕೆ ಅವನಿಗೆ ಒಳ್ಳೆಯದನ್ನೆ ಮಾಡುವಳು; ಎಂದಿಗೂ ಆಕೆ ಅವನಿಗೆ ಕೇಡನ್ನು ಬಗೆಯಳು.

13 ಉಣ್ಣೆಯನ್ನೂ ಸೆಣಬನ್ನೂ ಹುಡುಕಿ ತರುವಳು; ತನ್ನ ಕೈಗಳಿಂದಲೇ ಬಟ್ಟೆಯನ್ನು ನೇಯುವಳು.

14 ವ್ಯಾಪಾರದ ಹಡಗುಗಳಂತೆ ದೂರದಿಂದ ಆಹಾರ ಪದಾರ್ಥಗಳನ್ನು ತರುವಳು.

15 ಇನ್ನೂ ಕತ್ತಲಿರುವಾಗಲೆ ಎದ್ದು ಬಿಡುತ್ತಾಳೆ, ಮನೆಯವರಿಗೆ ತಿಂಡಿತೀರ್ಥ ಅಣಿಮಾಡುತ್ತಾಳೆ, ಕೆಲಸತಿತ್ತಿಯರಿಗೆ ದಿನಗೆಲಸಗಳನ್ನು ನೇಮಿಸುತ್ತಾಳೆ.

16 ಆಲೋಚನೆಮಾಡಿ ಹೊಲವನ್ನು ಕೊಂಡುಕೊಳ್ಳುತ್ತಾಳೆ; ಕೈಗೆಲಸದ ಆದಾಯದಿಂದಲೆ ತೋಟ ಮಾಡಿಸುತ್ತಾಳೆ.

17 ನಡುಕಟ್ಟಿ ಕೆಲಸಕ್ಕೆ ನಿಲ್ಲುತ್ತಾಳೆ, ದುಡಿಮೆಯಲ್ಲಿ ತೋಳ್ಬಲವನ್ನು ತೋರ್ಪಡಿಸುತ್ತಾಳೆ.

18 ತನ್ನ ಕೆಲಸದಿಂದ ಲಭಿಸುವ ಆದಾಯದ ರುಚಿ ಆಕೆಗಿದೆ; ಆಕೆಯ ಮನೆದೀಪ ರಾತ್ರಿಯೆಲ್ಲ ಆರದಿದೆ.

19 ರಾಟೆಯನ್ನು ತಾನೆ ಆಡಿಸುತ್ತಾಳೆ; ಕದಿರನ್ನು ಕೈಯಿಂದ ಹಿಡಿಯುತ್ತಾಳೆ.

20 ಬಡವರಿಗೆ ಕೈ ಬಿಚ್ಚಿ ಕೊಡುತ್ತಾಳೆ; ದಿಕ್ಕಿಲ್ಲದವರಿಗೆ ಕೈಚಾಚಿ ನೀಡುತ್ತಾಳೆ.

21 ಚಳಿಗಾಲದಲ್ಲಿ ಮನೆಯವರಿಗಾಗಿ ಆಕೆ ಚಿಂತಿಸಬೇಕಿಲ್ಲ; ಏಕೆಂದರೆ ಎಲ್ಲರಿಗೂ ಬೆಚ್ಚನೆಯ ಕಂಬಳಿಗಳಿವೆ.

22 ತನಗೆ ಬೇಕಾದ ರತ್ನಗಂಬಳಿಯನ್ನು ತಾನೆ ನೇಯ್ದಿದ್ದಾಳೆ; ಆಕೆಯ ಉಡುಪೋ ನಾರುಮಡಿ, ರಕ್ತಾಂಬರ.

23 ಆಕೆಯ ಗಂಡ ನಾಡಿಗರಲ್ಲಿ ಗಣ್ಯ; ನ್ಯಾಯಸ್ಥಾನದಲ್ಲಿ ಸನ್ಮಾನಿತ.

24 ದುಪ್ಪಟಿಗಳನ್ನು ನೇಯ್ದು ಮಾರಾಟ ಮಾಡುತ್ತಾಳೆ; ನಡುಕಟ್ಟುಗಳನ್ನು ಮಾಡಿ ವರ್ತಕರಿಗೆ ವಿಕ್ರಯಿಸುತ್ತಾಳೆ.

25 ಘನತೆ, ಗೌರವ, ಆಕೆಯ ಬಟ್ಟೆಬರೆ; ಭವಿಷ್ಯತ್ತಿನಲ್ಲಿ ಆಕೆಗೆ ನಿರ್ಭೀತ ನಗೆ.

26 ಆಕೆಯ ಬಾಯಿಂದ ಬರುವ ಮಾತು ಜ್ಞಾನಪೂರ್ಣ; ಆಕೆ ಹೇಳುವ ಬುದ್ಧಿಮಾತು ಪ್ರೀತಿಪ್ರೇರಿತ.

27 ಮನೆಗೆಲಸವನ್ನೆಲ್ಲ ಚೆನ್ನಾಗಿ ನೋಡಿಕೊಳ್ಳುತ್ತಾಳೆ; ಆಕೆ ಕೆಲಸಮಾಡದೆ ಊಟ ಮಾಡುವವಳಲ್ಲ.

28 ಮಕ್ಕಳು ಆಕೆಯನ್ನು ಧನ್ಯಳೆಂದು ಹೊಗಳುವರು.

29 ಗಂಡನು, "ಗುಣವತಿಯರು ಎಷ್ಟೋ ಮಂದಿ ಇರುವರು; ಅವರೆಲ್ಲರಿಗಿಂತ ನೀನೆ, ಶ್ರೇಷ್ಠಳು" ಎಂದು ಕೊಂಡಾಡುವನು.

30 ಆಕರ್ಷಣೆ ನೆಚ್ಚತಕ್ಕದಲ್ಲ. ಅಲಂಕಾರ ನೆಲೆಯಾದುದಲ್ಲ; ಸರ್ವೇಶ್ವರನಲ್ಲಿ ಭಯಭಕ್ತಿಯುಳ್ಳವಳೆ ಸ್ತುತ್ಯಾರ್ಹಳು.

31 ಆಕೆಯ ಕೈ ಕೆಲಸಕ್ಕೆ ತಕ್ಕ ಪ್ರತಿಫಲ ಲಭಿಸಲಿ; ಆಕೆಯ ಕಾರ್ಯಗಳೇ ಆಕೆಯನ್ನು ಪುರದ್ವಾರಗಳಲ್ಲಿ ಹೊಗಳಲಿ!